17 June 2026 Wednesday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಜಯ, ಅಪಜಯ ಒಂದೇ ನಾಣ್ಯದ ಎರಡು ಮುಖಗಳು, ಆದರೆ ಆ ಮುಖಗಳು ಒಂದಕ್ಕೊಂದು ಕಾಣುವುದಿಲ್ಲ ಅಷ್ಟೇ!

–ಸ್ನೇಹಾ ಆನಂದ್

info.varthaman@gmail.com



ಜೂ.27ರ ಕೆಂಪೇಗೌಡ ಜಯಂತಿಗೆ ಬನ್ನಿ: ಸೋಮೇಶ್ವರನಾಥ ಸ್ವಾಮೀಜಿ — ಪುಟ ಸಂ. 2



ಜೂ.30ರಂದು ಚಾ.ನಗರದಲ್ಲಿ ನಾಡಪ್ರಭು ಕೆಂಪೇಗೌಡ ಜಯಂತಿ — ಪುಟ ಸಂ. 3



ದೌರ್ಜನ್ಯ ಪ್ರಕರಣದಲ್ಲಿ ಹೆಚ್ಚಿದ ಪ್ರತಿದೂರು: ಆಯೋಗದ ಅಧ್ಯಕ್ಷರ ಕಳವಳ — ಪುಟ ಸಂ. 4

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 200 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

# ಆರ್‌ಎಸ್‌ಎಸ್ ನವರು ಹಿಂದೂಗಳೇ ಅಲ್ಲ

## ಧರ್ಮದ ಹೆಸರಿನಲ್ಲಿ ಏನೂ ಬೇಕಾದರೂ ಮಾಡಲು ಬಿಡಲ್ಲ । ಸಚಿವ ಯತೀಂದ್ರ ಸಿದ್ದರಾಮಯ್ಯ ಹೇಳಿಕೆ

**ಮೈಸೂರು:** ಆರ್.ಎಸ್.ಎಸ್ ನವರು ಹಿಂದೂಗಳೇ ಅಲ್ಲ. ಅವರು ಕೇವಲ ಹಿಂದುತ್ವವಾದಿಗಳು ಅಷ್ಟೇ. ಧರ್ಮದ ಹೆಸರಿನಲ್ಲಿ ಏನು ಬೇಕಾದರೂ ಮಾಡುತ್ತೇವೆ ಎಂದರೆ ನಡೆಯುವುದಿಲ್ಲ ಎಂದು ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಎಚ್ಚರಿಕೆ ನೀಡಿದರು.

ನಗರದಲ್ಲಿ ಮಂಗಳವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಆರ್.ಎಸ್.ಎಸ್ ಕೇವಲ ಸಾಂಸ್ಕೃತಿಕ ಸಂಘಟನೆ ಅಲ್ಲ. ಅದು ಬಿಜೆಪಿ ಪರವಾಗಿ ಕೆಲಸ ಮಾಡುತ್ತಿರುವ ಸಂಸ್ಥೆ. ದೇಶದ ಎಲ್ಲ ಕಡೆ ಸಂಘಟನೆಗೆ ಕೋಟ್ಯಾಂತರ ಮೌಲ್ಯದ ಆಸ್ತಿ ಇದೆ. ಕೋಟ್ಯಾಂತರ ಹಣವೂ ಬರುತ್ತಿದೆ. ಇದರ ಲೆಕ್ಕವನ್ನು ಅವರು ಕೊಡಬೇಕು ಅಲ್ಲವೇ? ಎಲ್ಲಾ ವ್ಯವಹಾರಗಳ ಬಗ್ಗೆ ಪರಿಶೀಲನೆ ಮಾಡಬೇಕಿದೆ. ಹೀಗಾಗಿ ಅದು ನೋಂದಣಿ ಆಗಬೇಕು ಎಂದು ಹೇಳಿದರು. ದೇಶದ ಕಾನೂನಿಗಿಂತ ಯಾವ ಸಂಘಟನೆಯೂ ದೊಡ್ಡದಲ್ಲ. ಗೃಹ ಸಚಿವರು, ಆರ್.ಎಸ್.ಎಸ್ ನೋಂದಣಿಗೆ ಒತ್ತಾಯ ಮಾಡುತ್ತಿರುವುದು ಸರಿಯಾಗಿದೆ ಎಂದು ಯತೀಂದ್ರ ಸಮರ್ಥಿಸಿಕೊಂಡರು.





### ಹಿಂದೂ ಧರ್ಮ ಆರ್‌ಎಸ್‌ಎಸ್ ಸ್ವತ್ತಲ್ಲ :ಹರಿಪ್ರಸಾದ್



**ಬೆಂಗಳೂರು:** ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಅವರು ರಾಷ್ಟ್ರೀಯ ಸ್ವಯಂ ಸೇವಕ ಸಂಘವನ್ನು ಹಿಂದೂ ಧರ್ಮದ ಜೊತೆ ಹೋಲಿಕೆ ಮಾಡಿರುವುದು ಖಂಡನೀಯ ಎಂದು ಕೆಪಿ ಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ವಾಗ್ದಾಳಿ ನಡೆಸಿದರು.

ಸಾವಿರಾರು ವರ್ಷಗಳ ಇತಿಹಾಸ, ಸಂಸ್ಕೃತಿ, ತತ್ವಶಾಸ್ತ್ರ ಮತ್ತು ವೈವಿಧ್ಯತೆಯನ್ನು ಹೊಂದಿರುವ ಹಿಂದೂ ಧರ್ಮವನ್ನು ಒಂದು ನಿರ್ದಿಷ್ಟ ಸಂಘಟನೆಯ ಮಟ್ಟಕ್ಕೆ ಇಳಿಸಿ ನೋಡುವುದು ಕೋಟ್ಯಂತರ ಹಿಂದೂಗಳ ಭಾವನೆಗಳಿಗೆ ಅವಮಾನ ಎಂದು ಟೀಕಿಸಿದ್ದಾರೆ. ಹಿಂದೂ ಧರ್ಮವು ಯಾವುದೇ ಒಂದು ಸಂಘಟನೆಯ ಸ್ವತ್ತಲ್ಲ. ಅದು ಆರ್‌ಎಸ್‌ಎಸ್‌ಗಿಂತಲೂ ದೊಡ್ಡದು. ವಿಶಾಲವಾದುದು ಮತ್ತು ಎಲ್ಲರನ್ನು ಒಳಗೊಳ್ಳುವ ನಾಗರಿಕತೆಯ ಪುಟ 2ಕ್ಕೆ

# ಶ್ರೀರಾಮನೇ ಲೆಕ್ಕ ಕೊಡಬೇಕು

## ಆರ್‌ಎಸ್‌ಎಸ್ ದುರಹಂಕಾರ ಬಿಟ್ಟು ಕಾನೂನು ಪಾಲಿಸಲಿ: ಪ್ರಿಯಾಂಕ್





**ನವದೆಹಲಿ:** ನಮ್ಮ ದೇಶದಲ್ಲಿ ಶ್ರೀರಾಮನೇ ಲೆಕ್ಕ ಕೊಡಬೇಕು. ಇನ್ನು ಶ್ರೀರಾಮನ ಹೆಸರಿನಲ್ಲಿ ರಾಜಕೀಯ ಮಾಡಿದವರು ಲೆಕ್ಕ ಕೊಡಬಾರದೇ? ಎಂದು ಪ್ರಶ್ನಿಸಿದ್ದಾರೆ.

ದೆಹಲಿಯಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಪ್ರಿಯಾಂಕ್ ಖರ್ಗೆ, ಆರ್‌ಎಸ್‌ಎಸ್ ನವರು ದುರಹಂಕಾರ ಬಿಟ್ಟು ಕಾನೂನು ಪಾಲಿಸಬೇಕು. ಸಂಘವನ್ನು ನೋಂದಣಿ ಮಾಡಿಸಬೇಕು ಮತ್ತು ಪಾರದರ್ಶಕವಾಗಿ ಲೆಕ್ಕ ಕೊಡಬೇಕು ಎಂದು ಎಚ್ಚರಿಕೆ ನೀಡಿದರು.

ಆರ್‌ಎಸ್‌ಎಸ್ ನೋಂದಣಿ ಮತ್ತು ಹಣಕಾಸು ವಹಿವಾಟುಗಳ ಮಾಹಿತಿ ಕೋರಿ ಸಂಘದ ಮುಖ್ಯಸ್ಥ ಮೋಹನ್ ಭಾಗವತ್ ಅವರಿಗೆ ಪತ್ರ ಬರೆದ ಪ್ರಿಯಾಂಕ್ ಖರ್ಗೆ ವಿರುದ್ಧ ಪ್ರತಿಪಕ್ಷ ಬಿಜೆಪಿ ತೀವ್ರ ವಾಗ್ದಾಳಿ ನಡೆಸುತ್ತಿರುವ ಹಿನ್ನೆಲೆಯಲ್ಲಿ ಅವರು ಪ್ರತಿಕ್ರಿಯೆ ನೀಡಿದ್ದಾರೆ.

ಅಯೋಧ್ಯೆಯಲ್ಲಿ ರಾಮಮಂದಿರದ ದೇಣಿಗೆ ವಿಚಾರದಲ್ಲಿ ಹಗರಣ ನಡೆದಿದೆ. ನಮ್ಮ ದೇಶದಲ್ಲಿ ಶ್ರೀರಾಮನೇ ಲೆಕ್ಕ ಕೊಡುವ ಪರಿಸ್ಥಿತಿ ಇದೆ. ಇನ್ನೂ ಶ್ರೀರಾಮನ ಹೆಸರಿನಲ್ಲಿ ರಾಜಕೀಯ ಮಾಡಿದವರು ಯಾಕೆ ಲೆಕ್ಕ ಕೊಡಬಾರದು ಎಂದು ಪ್ರಶ್ನಿಸಿದರು.

ಬಿಜೆಪಿಯವರು ಆರ್‌ಎಸ್‌ಎಸ್‌ನ ಆಳು ಮಕ್ಕಳು. ಅವರು ವಿರೋಧ ಮಾಡೇ ಮಾಡ್ತಾರೆ. ಪಾರದರ್ಶಕತೆ ಕೇಳುವುದು ತಪ್ಪಾ? ಪತ್ರದಲ್ಲಿ ತಪ್ಪೇನಿದೆ ಹೇಳಿ? ನಿತ್ಯ ಸಾವಿರಾರು ಶಾಖಾ ಸಭೆಗಳನ್ನ ನಡೆಸಲಾಗುತ್ತಿದೆ. ಆರ್‌ಎಸ್‌ಎಸ್ ಮಾಹಿತಿ ಪುಟ 2ಕ್ಕೆ

### ಭಾಗವತ್ ವಿಡಿಯೋ ನಕಲಿ

**ದೆಹಲಿ:** ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಅವರಿಗೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಬರೆದ ಪತ್ರವನ್ನು ಎಕ್ಸ್ ನಲ್ಲಿ ಹಂಚಿಕೊಂಡ ಕೆಲವೇ ಕ್ಷಣಗಳಲ್ಲಿ ಅದಕ್ಕೆ ಮೋಹನ್ ಭಾಗವತ್ ಅವರು ವಿಡಿಯೋ ಮೂಲಕ ಪ್ರತಿಕ್ರಿಯೆ ನೀಡಿದ್ದಾರೆ ಎಂದು ಸಾಮಾಜಿಕ ಮಾಧ್ಯಮಗಳಲ್ಲಿ ವಿಡಿಯೋ ವೈರಲ್ ಆಗಿತ್ತು.

ಭಾಗವತ್ ಅವರದ್ದು ಎನ್ನಲಾದ ವಿಡಿಯೋದ ಅಸಲಿಯತ್ತನ್ನು ಪರಿಶೀಲಿಸಿದ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು, ಇದು ಅಸಲಿ ಅಲ್ಲ. ನಕಲಿ ವಿಡಿಯೋ ಎಂದು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ನನ್ನ ಪತ್ರಕ್ಕೆ ಸರಸಂಘ ಸಂಚಾಲಕ ಮೋಹನ್ ಭಾಗವತ್ ಉತ್ತರಿಸಿದ್ದಾರೆ ಎನ್ನಲಾಗುತ್ತಿದೆ. ವಾಸ್ತವದಲ್ಲಿ ಅವರು ಇನ್ನು ಉತ್ತರ ನೀಡಿಲ್ಲ. ಮೋಹನ್ ಬಾಗವತ್ ಅವರು ಜೂನ್ 13ರಂದು ನೀಡಿದ ಹೇಳಿಕೆಯನ್ನು ತಿರುಚಲಾಗಿದೆ. ನಾನು ನಿನ್ನೆ ಪತ್ರ ಬಿಡುಗಡೆ ಮಾಡಿದ್ದೇನೆ. ಅದಕ್ಕೂ ಮುನ್ನ ಹೇಳಿಕೆ ನೀಡಿದ್ದಾರೆ. ಹಾಗಿದ್ದಾಗ ಅದು ಉತ್ತರ ಹೇಗೆ ಆಗಲು ಸಾಧ್ಯ? ನಾನು ಧರ್ಮಕ್ಕೆ ನೋಂದಣಿ ಕೇಳುತ್ತಿಲ್ಲ. ಸಂಘಕ್ಕೆ ಪುಟ 2ಕ್ಕೆ

# ರಸ್ತೆ ನಿರ್ಮಾಣ ರಾಕೆಟ್ ಸೈನ್ಸಾ?

**ಬೆಂಗಳೂರು:** ಗುಂಡಿ ಆಗದಂತೆ ರಸ್ತೆ ನಿರ್ಮಾಣ ಮಾಡುವುದು ರಾಕೆಟ್ ಸೈನ್ಸಾ ಎಂದು ಜಿಬಿಎ ಅಧಿಕಾರಿಗಳಿಗೆ ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ತರಾಟೆಗೆ ತೆಗೆದುಕೊಂಡಿದ್ದಾರೆ.

ಜಿಬಿಎ ಅಧಿಕಾರಿಗಳ ಜೊತೆ ಮಂಗಳವಾರ ನಡೆದ ಸಭೆಯಲ್ಲಿ ಸಚಿವರು ಬೆಂಗಳೂರಿನ ಸಮಸ್ಯೆ ಬಗ್ಗೆ ಅಧಿಕಾರಿಗಳಿಗೆ ಹಲವು ಪ್ರಶ್ನೆ ಕೇಳಿದ್ದಾರೆ. ಜಿಬಿಎ ಅಧಿಕಾರಿಗಳಿಗೆ ನಗರದ ರಸ್ತೆಗಳ ಪರಿಸ್ಥಿತಿ ಬಗ್ಗೆ ಪ್ರಶ್ನೆ ಮಾಡಿದ ಅವರು, ರಸ್ತೆಯಲ್ಲಿ ಗುಂಡಿ ಯಾಕೆ ಬೀಳುತ್ತವೆ? ರಸ್ತೆ ನಿರ್ಮಾಣ ಮಾಡೋದು ರಾಕೆಟ್ ಸೈನ್ಸಾ? ಪಾಟ್‌ಹೋಲ್ ಇಲ್ಲದೆ ರಸ್ತೆ ಮಾಡಲು ಆಗಲ್ವಾ? ಎಂದು ಅಧಿಕಾರಿಗಳನ್ನ ಸಚಿವರು ತರಾಟೆಗೆ ತೆಗೆದುಕೊಂಡರು.

> ಜಿಬಿಎ ಅಧಿಕಾರಿಗಳಿಗೆ ಸಚಿವ ಕೃಷ್ಣ ಬೈರೇಗೌಡ ತರಾಟೆ

ನಗರದಲ್ಲಿ ಇದುವರೆಗೆ ಅಗಿರುವ ಕಾಮಗಾರಿಗಳು ಹಾಗೂ ಅಭಿವೃದ್ಧಿ ಕಾರ್ಯಗಳ ಮಾಹಿತಿ ಪಡೆದ ಸಚಿವರು, ನಗರದಲ್ಲಿ ನಡೆಯುತ್ತಿರುವ ವೈಟ್ ಟ್ಯಾಪಿಂಗ್, ಕೆರೆಗಳ ಅಭಿವೃದ್ಧಿ, ರಸ್ತೆ ಅಭಿವೃದ್ಧಿ ಬಗ್ಗೆ ಮಾಹಿತಿ ಪಡೆದರು. ಕಂದಾಯ ವಸೂಲಿ, ಬಾಕಿ ಇರುವ ಕಂದಾಯದ ವಸೂಲಿ ಬಗ್ಗೆ ಚರ್ಚೆ ನಡೆಸಿದರು. ಇ ಖಾತಾ ಎಷ್ಟು ಅಗಿದೆ. ಎಷ್ಟು ಅರ್ಜಿ ಬಂದಿದೆ ಅನ್ನೋ ಬಗ್ಗೆ ಮಾಹಿತಿ ಸಂಗ್ರಹಿಸಿದರು.

ಮಳೆ ಬಂದಾಗ ನಗರದ ರಾಜಕಾಲುವೆ ಮೋರಿ ನೀರು ರಸ್ತೆಯಲ್ಲಿ ಹರಿಯುತ್ತದೆ. ಈ ಬಗ್ಗೆ ಪುಟ 2ಕ್ಕೆ



### ಸಮರ್ಪಕ ಆಡಳಿತಕ್ಕೆ ಪೂರ್ಣ ಖಾತೆ ಅವಶ್ಯಕ

ಬೆಂಗಳೂರು: ನನ್ನ ಅಭಿಪ್ರಾಯವನ್ನ ನಾನು ಸಿಎಂ ಹಾಗೂ ಪಕ್ಷದ ವರಿಷ್ಠರಿಗೆ ತಿಳಿಸಿದ್ದೇನೆ. ಇಲ್ಲಿ ಸಮರ್ಪಕವಾಗಿ ಆಡಳಿತ ನಡೆಸಲು ಪೂರ್ಣ ಖಾತೆ ಅವಶ್ಯಕವಿದೆ ಎಂದು ಹೇಳಿದ್ದೇನೆ. ಕ್ಲಾರಿಟಿ ಸಿಕ್ಕ ಬಳಿಕವೇ ಅಧಿಕಾರ ಸ್ವೀಕಾರ ಮಾಡಬೇಕು ಅಂದುಕೊಂಡಿದ್ದೆ. ಸಿಎಂ ವಿವೇಚನೆ ಬಳಸಿ ತೀರ್ಮಾನ ಮಾಡಿದ್ದಾರೆ. ಈಗ ವರಿಷ್ಠರ ಸೂಚನೆ ಮೇರೆಗೆ ಇಲಾಖೆಯ ಜವಾಬ್ದಾರಿ ಸ್ವೀಕರಿಸಿದ್ದೇನೆ ಎಂದರು.

# ಲೈಸನ್ಸ್ ಪಡೆಯದ ಪಬ್: ಅಬಕಾರಿ ಡಿಸಿ ಅಮಾನತು

## ಪಬ್ ಮಾಲೀಕನ ವಿರುದ್ಧ ದೂರು: ಸಚಿವ ಯತೀಂದ್ರ

**ಮೈಸೂರು:** ನಗರದ ಪಬ್‌ನಲ್ಲಿ ಬೆಂಕಿ ಅವಘಡ ಪ್ರಕರಣಕ್ಕೆ ಸಂಬಂಧಿಸಿ ಅಬಕಾರಿ ಡಿಸಿ ಅಮಾನತಿಗೆ ಶಿಫಾರಸು ಮಾಡಲಾಗಿದೆ ಎಂದು ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ತಿಳಿಸಿದರು.

ಕೆ.ಆರ್.ಆಸ್ಪತ್ರೆ ಶವಾಗಾರಕ್ಕೆ ಮಂಗಳವಾರ ಭೇಟಿ ನೀಡಿ ಮೃತರ ಕುಟುಂಬಕ್ಕೆ ಸಾಂತ್ವಾನ ಹೇಳಿದರು. ಬಳಿಕ ಮಾಧ್ಯಮದೊಂದಿಗೆ ಮಾತನಾಡಿ, ಪಬ್ ಮಾಲೀಕನ ವಿರುದ್ಧ ದೂರು ದಾಖಲು ಮಾಡಲಾಗಿದೆ. ಅವರ ವಿರುದ್ಧ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದು ಎಂದು ತಿಳಿಸಿದರು.

ಯಾವುದೇ ಲೈಸನ್ಸ್ ಇಲ್ಲದೆ ಪಬ್ ನಡೆಯುತ್ತಿತ್ತು. ನಗರದಲ್ಲಿ ಅನೇಕ ಪಬ್ ಬಾರ್ ಅಂಡ್ ರೆಸ್ಟೋರೆಂಟ್‌ಗಳು ಪರವಾನಗಿ ಪಡೆಯದೆ ನಡೆಸುತ್ತಿರುವುದು ಗೊತ್ತಾಗಿದೆ. ಅಕ್ರಮ ಹಾಗೂ ಲೈಸನ್ಸ್ ಇಲ್ಲದೆ ಬಾರ್ ರೆಸ್ಟೋರೆಂಟ್ ನಡೆಸುತ್ತಿರುವವರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳುವಂತೆ ಸೂಚನೆ ಕೊಟ್ಟಿದ್ದೇನೆ ಎಂದರು.



ಲೈಸನ್ಸ್ ಇಲ್ಲದೆ ಬಾರ್ ನಡೆಸುತ್ತಿದ್ದರೂ ಅಬಕಾರಿ ಡಿಸಿ ಕಣ್ಮುಚ್ಚಿ ಕುಳಿತಿದ್ದಾರೆ. ಅಧಿಕಾರಿಗಳ ಮೇಲೂ ಕ್ರಮಕ್ಕೆ ಒತ್ತಾಯ ಕೇಳಿ ಬಂದಿದೆ. ಅಮಾನತು ಮಾಡುವಂತೆ ಶಿಫಾರಸು ಮಾಡುತ್ತೇನೆ. ಎಲ್ಲಾ ಕಡೆ ಪರಿಶೀಲಿಸುವಂತೆ ಪೊಲೀಸರಿಗೂ ಸೂಚನೆ ನೀಡಿದ್ದೇನೆ. ಎಲ್ಲ

# ತ.ನಾಡು ರೈತರ ಸಾಲ ಮನ್ನಾ

**ಚೆನ್ನೈ:** ತಮಿಳುನಾಡು ಮುಖ್ಯಮಂತ್ರಿ ಜೋಸೆಫ್ ವಿಜಯ್ ಮಂಗಳವಾರ ಅಲ್ಲಿನ ರೈತರಿಗೆ ಭರ್ಜರಿ ಗಿಫ್ಟ್ ನೀಡಿದ್ದಾರೆ. ಬೆಳೆ ಸಾಲ ಮನ್ನಾ ಯೋಜನೆ ಘೋಷಿಸಿದ್ದಾರೆ.

ಸಹಕಾರಿ ಬ್ಯಾಂಕುಗಳಿಂದ ರೈತರು ಪಡೆದ 75,000 ರೂ. ವರೆಗಿನ ಬೆಳೆ ಸಾಲವನ್ನು ಸಂಪೂರ್ಣ ಮನ್ನಾ ಮಾಡುವುದಾಗಿ ಹೇಳಿದ್ದಾರೆ. ಈ ಹಿಂದೆ ಕಳೆದ ಮೇ 25ರಂದು, 50 ಸಾವಿರ ರೂ. ವರೆಗಿನ ಬೆಳೆ ಸಾಲ ಮನ್ನಾ ಯೋಜನೆ ಘೋಸಿದ್ದರು. ಈಗ ಅದನ್ನು ಪರಿಷ್ಕರಿಸಿ 75,000 ರೂ.ವರೆಗೆ ವಿಸ್ತರಿಸಿದ್ದಾರೆ. 75 ಸಾವಿರ ರೂ. ಗಳಿಗಿಂತ ಹೆಚ್ಚಿನ ಸಾಲ ಹೊಂದಿರುವ ರೈತರು ತಲಾ 35,000 ರೂ. ಗಳ ಮನ್ನಾಕ್ಕೆ ಅರ್ಹರಾಗಿರುತ್ತಾರೆ.

# ಮೋದಿ 'ಗ್ರೀನ್ ಸಿಗ್ನಲ್': ದಾಖಲೆ ಬಹಿರಂಗಪಡಿಸಿ


**ಬೆಂಗಳೂರು:** ಬಿಡದಿ ಟೌನ್ ಶಿಪ್‌ಗೆ ಪ್ರಧಾನಿ ಮೋದಿ ಗ್ರೀನ್ ಸಿಗ್ನಲ್ ಕೊಟ್ಟಿದ್ದರೆ ದಾಖಲಾತಿ ಬಹಿರಂಗ ಪಡಿಸಲಿ ಎಂದು ಸಿಎಂ ಡಿ.ಕೆ.ಶಿವಕುಮಾರ್‌ಗೆ ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ತಿರುಗೇಟು ನೀಡಿದ್ದಾರೆ.



ಬಿಡದಿ ಟೌನ್ ಶಿಪ್ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಪ್ರಧಾನಿ ಮೋದಿ ಅವರು ಏನು ಹೇಳಿದರು ಅನ್ನೋದನ್ನು ಡಿಕೆಶಿ ಬಹಿರಂಗಪಡಿಸಲಿ. ನೀವು ಆಪರೇಷನ್ ಸಿಂಧೂರ್ ಗೆ ಸಾಕ್ಷಿ ಕೇಳಿದ್ದೀರಿ. ಅದೇ ರೀತಿ ಮೋದಿ ಕೊಟ್ಟ ಗ್ರೀನ್ ಸಿಗ್ನಲ್ ಹೇಗಿತ್ತು? ಅದನ್ನ ಬಹಿರಂಗ ಮಾಡಿ ಎಂದರು.

ಬಿಡದಿ ಟೌನ್ ಶಿಪ್‌ಗೆ ನಾವು ಮೊದಲಿಂದ ವಿರೋಧ ಮಾಡುತ್ತಿದ್ದೇವೆ. ಜೆಡಿಎಸ್ ಹೋರಾಟ ಮಾಡುತ್ತಿದೆ. ಅದಕ್ಕೆ ನಾವು ಹೋಗ್ತೀವಿ. ನಮ್ಮ ಬೆಂಬಲವೂ ಇದೆ ಎಂದರು.

# ಸಿದ್ದು–ಡಿಕೆಶಿ ಭೇಟಿ, ಚರ್ಚೆ



**ಬೆಂಗಳೂರು:** ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಮಂಗಳವಾರ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

ಕಾವೇರಿ ನಿವಾಸದಲ್ಲಿ ಅವರನ್ನು ಭೇಟಿಯಾಗಿ ಮಹತ್ವ ವಿಷಯಗಳ ಕುರಿತು ಡಿಕೆಶಿ ಚರ್ಚೆ ನಡೆಸಿದ್ದಾರೆ. ಈ ಕುರಿತು ಸಿದ್ದರಾಮಯ್ಯ ಹಾಗೂ ಡಿಕೆಶಿ ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನನ್ನನ್ನು ಭೇಟಿಯಾಗಿ ಹಲವು ಮಹತ್ವದ ವಿಚಾರಗಳ ಕುರಿತು ಮಾತುಕತೆ ನಡೆಸಿದರು ಪುಟ 2ಕ್ಕೆ

# ಬಿಡದಿ ಟೌನ್‌ಶಿಪ್ ಯೋಜನೆ ಕೈಬಿಡಲ್ಲ

## ಜೆಡಿಎಸ್ ರಾಜಕಾರಣಕ್ಕೆ ಮಣಿಯಲ್ಲ: ಸಚಿವ ಯತೀಂದ್ರ

**ಮೈಸೂರು:** ಬಿಡದಿ ಟೌನ್ ಶಿಪ್ ಯೋಜನೆಯನ್ನು ಕೆಲವರ ಮಾತು ಕೇಳಿ ನಕೈಬಿಡಲು ಆಗಲ್ಲ ಎಂದು ನಗರಾಭಿವೃದ್ಧಿ ಸಚಿವ ಯತೀಂದ್ರ ಸಿದ್ದರಾಮಯ್ಯ ಹೇಳಿದರು.

ಮೈಸೂರಿನಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಡದಿ ಟೌನ್ ಶಿಫ್ ಮಾಡುವುದು ಅತ್ಯವಶ್ಯಕವಾಗಿದೆ. ಶೇ.80ರಷ್ಟು ರೈತರು ಜಮೀನು ಕೊಡಲು ಒಪ್ಪಿದ್ದಾರೆ. ರೈತರಿಗೆ ಹೆಚ್ಚಿನ ಪರಿಹಾರ ನೀಡಲಾಗುತ್ತಿದೆ. ಕೆಲವರು ಇದಕ್ಕೆ ವಿರೋಧ ವ್ಯಕ್ತಪಡಿಸಿದ್ದಾರೆ. ಇದರಲ್ಲಿ ಜೆಡಿಎಸ್ ರಾಜಕಾರಣ ಮಾಡುತ್ತಿದೆ ಎಂದು ಆರೋಪಿಸಿದರು.

ಬಿಡದಿ ಟೌನ್ ಶಿಪ್ ಗೆ ಕೆಲವರು ಮಾತ್ರ ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ಕೆಲವರ ಮಾತನ್ನು ಕೇಳಿ ಯೋಜನೆ ಕೈಬಿಡಲು ಆಗಲ್ಲ. ಬೆಂಗಳೂರು ಜನಸಂದಣಿ ಹೆಚ್ಚಾಗಿದೆ. ಎಷ್ಟೋ ಜನರಿಗೆ ನಿವೇಶನದ ಅಗತ್ಯ ಇದೆ. ಬೆಂಗಳೂರು ಜನಸಂಖ್ಯೆ ಸ್ಪ್ರೆಡ್ ಆಗಬೇಕಿದೆ. ಬೆಂಗಳೂರು ವಿಸ್ತರಣೆ ಅವಶ್ಯಕತೆ




# ವಚನಾನಂದ ಶ್ರೀಗೆ ಜಾಮೀನು ಆಘಾತಕಾರಿ

**ಬೆಂಗಳೂರು:** ದಾವಣಗೆರೆ ಹರಿಹರದ ಪಂಚಮಸಾಲಿ ಗುರುಪೀಠದ ವಚನಾನಂದ ಸ್ವಾಮೀಜಿ ಪೋಕ್ಸೋ ಪ್ರಕರಣ ತೀವ್ರ ಸ್ವರೂಪ ಪಡೆದುಕೊಂಡಿದೆ.



ಪ್ರಕರಣದಲ್ಲಿ ನಿರೀಕ್ಷಣಾ ಜಾಮೀನು ಕೊಟ್ಟ ರೀತಿ ಆಘಾತಕಾರಿ ಎಂದು ಹೈಕೋರ್ಟ್ ಅಚ್ಚರಿ ವ್ಯಕ್ತಪಡಿಸಿದೆ.

ಮಕ್ಕಳ ದುರ್ಬಳಕೆ ಹಾಗೂ ದೌರ್ಜನ್ಯ ಎಸಗಿದ ಆರೋಪದಡಿ ವಚನಾ ನಂದ ಸ್ವಾಮೀಜಿ ವಿರುದ್ಧ ದಾಖಲಾಗಿರುವ ಪೋಕ್ಸೋ ಪ್ರಕರಣದಲ್ಲಿ ದೂರು ದಾಖಲಾಗುವ ಮುನ್ನವೇ ದಾವಣಗೆರೆ ಜಿಲ್ಲಾ ನ್ಯಾಯಾಲಯ ನಿರೀಕ್ಷಣಾ ಜಾಮೀನು ನೀಡಿರುವುದು ಹೈಕೋರ್ಟ್ ಅಸಮಾಧಾನಕ್ಕೆ ಕಾರಣವಾಗಿದೆ.ನಿರೀಕ್ಷಣಾ ಜಾಮೀನು ಪ್ರಶ್ನಿಸಿ ಬಾಲಕನ ತಾಯಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರ ಹೈಕೋರ್ಟ್ ಪೀಠ, ದೂರು ದಾಖಲಾಗುವ ಮುನ್ನವೇ ನಿರೀಕ್ಷಣಾ ಜಾಮೀನು ಕೊಟ್ಟಿದ್ದಾರೆ. ನಿರೀಕ್ಷಣಾ ಜಾಮೀನು ಕೊಟ್ಟ ರೀತಿ ಆಘಾತಕಾರಿ. ಮೇಲ್ನೋಟಕ್ಕೆ ನಿರೀಕ್ಷಣಾ ಜಾಮೀನು ನೀಡಿದ ವಿಧಾನ ಸರಿಯಲ್ಲ ಎಂದು ಪೀಠ ಅಭಿಪ್ರಾಯಪಟ್ಟಿದೆ. ವಿಚಾರಣೆಯನ್ನು ಜೂನ್ 23ಕ್ಕೆ ನಿಗದಿಪಡಿಸಿದೆ.

# ನೀಟ್ ಪರೀಕ್ಷೆ: ಟೆಲಿಗ್ರಾಮ್ ನಿಷೇಧ

## ಪ್ರಶ್ನೆ ಪತ್ರಿಕೆ ಸೋರಿಕೆ ವಿರುದ್ಧ ಕೇಂದ್ರ ಸರ್ಕಾರದ ಕ್ರಮ

**ನವದೆಹಲಿ:** ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆಯಿಂದ ಎಚ್ಚೆತ್ತಿರುವ ಕೇಂದ್ರ ಸರ್ಕಾರ ಈಗ ಮರುಪರೀಕ್ಷೆಗೆ ಮುನ್ನ ಸೋರಿಕೆ ತಡೆಯಲು ಕೆಲವು ಕಠಿಣ ಕ್ರಮಗಳನ್ನು ತೆಗೆದುಕೊಂಡಿದೆ.

ಭಾರತದಲ್ಲಿ ಟೆಲಿಗ್ರಾಮ್ ಆಪ್ ಅನ್ನು ತಾತ್ಕಾಲಿಕವಾಗಿ ನಿರ್ಬಂಧಿಸಲಾಗಿದೆ. ಏಕೆಂದರೆ ಈ ಅಪ್ಲಿಕೇಶನ್ ನಿಂದಲೇ ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿದೆ ಎಂಬ ಆರೋಪವಿತ್ತು.

ಟೆಲಿಗ್ರಾಮ್ ಆಪ್ ನಲ್ಲಿ ಸೋರಿಕೆಯಾದ ಪ್ರಶ್ನೆ ಪತ್ರಿಕೆಗಳು, ಎಡಿಟೆಡ್ ಸ್ಕ್ರೀನ್‌ಶಾಟ್‌ಗಳು ಮತ್ತು ಪರೀಕ್ಷೆಗೆ ಪ್ರವೇಶ ಖಾತರಿಯ ಭರವಸೆಗಳೊಂದಿಗೆ ವಿದ್ಯಾರ್ಥಿಗಳನ್ನು ವಂಚಿಸಲಾಗುತ್ತಿದೆ. ಹೀಗಾಗಿ ಭಾರತದಲ್ಲಿ ಟೆಲಿಗ್ರಾಮ್ ಅನ್ನು ತಾತ್ಕಾಲಿಕವಾಗಿ ನಿರ್ಬಂಧಿಸಲಾಗಿದೆ ಎಂದು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ತಿಳಿಸಿದೆ.

ಈ ಸಂಬಂಧ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ಎರಡು ಪ್ರತ್ಯೇಕ ನಿರ್ದೇಶನ ನೀಡಿದೆ. ಜೂನ್ 22ರವರೆಗೆ ಭಾರತದಲ್ಲಿ ಟೆಲಿಗ್ರಾಮ್ ಅನ್ನು ನಿರ್ಬಂಧಿಸಲಾಗಿದೆ. ಅಲ್ಲದೆ, ಜೂನ್ 30ರವರೆಗೆ ಭಾರತದಲ್ಲಿ ಈಗಾಗಲೇ ಪೋಸ್ಟ್ ಮಾಡಲಾದ ಸಂದೇಶಗಳ ಎಡಿಟ್ ಅನ್ನು ಟೆಲಿಗ್ರಾಮ್ ಪುಟ 2ಕ್ಕೆ




### ಬಿಡದಿ ಟೌನ್‌ಶಿಪ್ ಬಗ್ಗೆ ಸಂಪುಟದಲ್ಲಿ ಚರ್ಚೆ: ಜಾರಕಿಹೊಳಿ

**ಬೆಂಗಳೂರು:** ಸಚಿವ ಸಂಪುಟ ಸಭೆಯಲ್ಲಿ ಬಿಡದಿ ಟೌನ್ ಶಿಪ್ ಯೋಜನೆ ಸಂಬಂಧ ಚರ್ಚೆ ನಡೆಸಲಾಗುವುದು ಎಂದು ಸತೀಶ್ ಜಾರಕಿಹೊಳಿ ತಿಳಿಸಿದರು.

ಬಿಡದಿ ಟೌನ್‌ಶಿಪ್ ಯೋಜನೆಗೆ ರೈತರು ವಿರೋಧ ವ್ಯಕ್ತಪಡಿಸುತ್ತಿರುವ ಬಗ್ಗೆ ಮಾತನಾಡಿದ ಪ್ರತಿಕ್ರಿಯೆ ನೀಡಿದ ಅವರು, ಬಿಡದಿ ಟೌನ್‌ಶಿಪ್ ವಿಷಯದಲ್ಲಿ ಪರೋಕ್ಷವಾಗಿ ವಿರೋಧ ವ್ಯಕ್ತಪಡಿಸುವಂತೆ ಮಾತನಾಡಿದರು.



ಬಿಡದಿ ಟೌನ್‌ಶಿಪ್ ಯೋಜನೆ ಪಕ್ಷಕ್ಕೆ ಹೊರೆಯಾಗಬಾರದು. ಯಾವುದೋ ಒಂದು ಸ್ಕೀಮ್ ಮಾಡಲು ಹೋಗಿ ಸರ್ಕಾರಕ್ಕೆ ದಕ್ಕೆ ಆಗಬಾರದು. ಅದೇ ಸಮಸ್ಯೆ ಉದ್ಭವ ಆಗಬಾರದು. ಯಾವುದೇ ಯೋಜನೆ ತೆಗೆದುಕೊಳ್ಳುವಾಗ ಪಕ್ಷಕ್ಕೂ ಹಾನಿ ಆಗಬಾರದು. ಒಂದು ಯೋಜನೆ ಪಕ್ಷದ ಹೆಸರಿಗೆ ಡ್ಯಾಮೇಜ್ ಆಗುವಂತೆ ಇರಬಾರದು ಎಂದು ಹೇಳಿದರು. ಅಸಮಾಧಾನ ಹೆಚ್ಚುವಂತಹ ನಿರ್ಧಾರಗಳನ್ನು ತೆಗೆದುಕೊಳ್ಳುವಲ್ಲಿ ಎಚ್ಚರಿಕೆ ಅಗತ್ಯ. ಇದೇ ಶನಿವಾರ ನಡೆಯುವ ಸಂಪುಟ ಸಭೆಯಲ್ಲಿನಲ್ಲಿ ಈ ಬಗ್ಗೆ ಚರ್ಚೆ ಮಾಡುತ್ತೇನೆ ಎಂದರು.

# ಭ್ರಷ್ಟ ಅಧಿಕಾರಿಗಳಿಗೆ 'ಲೋಕಾ ಶಾಕ್'

## ರಾಜ್ಯದ ಹಲವೆಡೆ ದಾಳಿ: ಅಪಾರ ಪ್ರಮಾಣದ ಆಸ್ತಿ ದಾಖಲೆ ವಶ

**ಬೆಂಗಳೂರು:** ರಾಜ್ಯದ ಹಲವೆಡೆ ಭ್ರಷ್ಟ ಅಧಿಕಾರಿಗಳಿಗೆ ಲೋಕಾಯುಕ್ತ ಶಾಕ್ ನೀಡಿದೆ. ಮಂಗಳವಾರ ಮುಂಜಾನೆಯೇ ಅಧಿಕಾರಿಗಳ ನಿವಾಸ, ಕಚೇರಿಗಳ ಮೇಲೆ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿ ಅಪಾರ ಪ್ರಮಾಣದ ಹಣ, ಚಿನ್ನಾಭರಣ ಮತ್ತು ಆಸ್ತಿ ಪತ್ರಗಳನ್ನು ವಶಪಡಿಸಿಕೊಂಡಿದ್ದಾರೆ.

ಕಲಬುರಗಿಯ ಪಂಚಾಯತ್ ರಾಜ್ ಇಲಾಖೆ ನಿವೃತ್ತ ಅಧೀಕ್ಷಕ ಇಂಜಿನಿಯರ್ ಮಾಣಿಕ್ ಕನಕಟ್ಟಿಯ ಮನೆ, ಬೀದರ್ ಜಿಲ್ಲೆಯ ಹಳ್ಳಿಖೇಡ ಗ್ರಾಮದ ಮನೆ, ಹುಮ್ನಾಬಾದ್ ಎರಡು ಕಾಂಪ್ಲೆಂಕ್ಸ್, ಹಳ್ಳಿಖೇಡ ಗ್ರಾಮದ ತೋಟದ ಮನೆಯ ಮೇಲೆ ಲೋಕಾಯುಕ್ತ ಎಸ್ ಪಿ ಸಿದ್ದರಾಜು ನೇತೃತ್ವದಲ್ಲಿ ದಾಳಿ ನಡೆಸಿದೆ.

ಚಿಕ್ಕಮಗಳೂರು ಜಿಲ್ಲೆಯ ಅರಣ್ಯ ಇಲಾಖೆ ಅಧಿಕಾರಿ ಎ.ಸಿ.ಎಫ್.ಶ್ರೀನಿವಾಸ್ ಅವರ ಮನೆ ಮತ್ತು ಕಚೇರಿ ಮೇಲೆ ಏಕಕಾಲದಲ್ಲಿ ದಾಳಿ ನಡೆಸಲಾಗಿದೆ. ಚಿಕ್ಕಮಗಳೂರು ನಗರದ ಹೌಸಿಂಗ್ ಬೋರ್ಡ್‌ನಲ್ಲಿರುವ ನಿವಾಸ, ಕಡೂರಿನಲ್ಲಿರುವ ಶ್ರೀನಿವಾಸ್ ಸೋದರಿ ನಿವಾಸಕ್ಕೆ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಅಪಾರ ಪ್ರಮಾಣದ ಆಸ್ತಿ ದಾಖಲೆಗಳ ಪರಿಶೀಲನೆ ನಡೆಸಿದ್ದಾರೆ. ಲೋಕಾಯುಕ್ತ ಎಸ್ಪಿ ತಿರುಮಲೇಶ್ ನೇತೃತ್ವದಲ್ಲಿ ದಾಳಿ ನಡೆಸಲಾಗಿದೆ.

ದಾವಣಗೆರೆಯಲ್ಲಿ ಮೂವರು ಅಧಿಕಾರಿಗಳ ಕಚೇರಿ, ಮನೆ ಮೇಲೆ ಲೋಕಾಯುಕ್ತ ದಾಳಿ ನಡೆಸಲಾಗಿದೆ. ಬಯಲು ಸೀಮೆ ಅಭಿವೃದ್ಧಿ ಮಂಡಳಿ ಕಾರ್ಯದರ್ಶಿ ಕೃಷ್ಣಾ ನಾಯ್ಕ್ ಅವರ ಸಿದ್ದವೀರಪ್ಪ ಬಡಾವಣೆಯಲ್ಲಿರೋ ಎರಡು ಮನೆ, ಮುಖ್ಯ ಯಾಂತ್ರಿಕ ಮೆಕ್ಯಾನಿಕಲ್ ಇಂಜಿನಿಯರ್ ಸಿದ್ದೇಶ್ವರ ಹೆಬ್ಬಾಳ್ ಅವರ ಮನೆ, ಕೆಆರ್‌ಐಡಿಎಲ್ ಅಧೀಕ್ಷಕ ಇಂಜಿನಿಯರ್ ಸಣ್ಣ ಕೆಂಚಪ್ಪ ಮನೆ, ಪುಟ 2ಕ್ಕೆ



# ಜೂ.27ರ ಕೆಂಪೇಗೌಡ ಜಯಂತಿಗೆ ಬನ್ನಿ

## ಪ್ರಚಾರ ರಥಕ್ಕೆ ಚಾಲನೆ ನೀಡಿ ಸೋಮೇಶ್ವರನಾಥ ಸ್ವಾಮೀಜಿ ಕರೆ

ಮೈಸೂರು: ಇದೇ ತಿಂಗಳ ಜೂ.27ರಂದು ನಡೆಯಲಿರುವ ಕೆಂಪೇಗೌಡ 512ನೇ ಜಯಂತಿ ಮಹೋತ್ಸವಕ್ಕೆ ಜಾತ್ಯತೀತ, ಪಕ್ಷಾತೀತವಾಗಿ ಎಲ್ಲರೂ ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಿ ಎಂದು ಆದಿಚುಂಚನಗಿರಿ ಶಾಖಾ ಮಠದ ಶ್ರೀ ಸೋಮೇಶ್ವರನಾಥ ಸ್ವಾಮೀಜಿ ಕರೆ ನೀಡಿದರು.

ಕೆಂಪೇಗೌಡ ಜಯಂತೋತ್ಸವ ಸಮಿತಿ, ರಾಜ್ಯ ಒಕ್ಕಲಿಗರ ಸಂಘ ಹಾಗೂ ಮೈಸೂರು–ಚಾಮರಾಜನಗರ ಜಿಲ್ಲಾ ಒಕ್ಕಲಿಗರ ಸಂಘದ ಸಂಯುಕ್ತಾಶ್ರಯದಲ್ಲಿ ಕೆಜಿ ಕೊಪ್ಪಲಿನ ಶ್ರೀ ಬಂಡಮ್ಮ ದೇವಾಲಯ ಎದುರು 512 ನೇ ಶ್ರೀ ಕೆಂಪೇಗೌಡರ ಜಯಂತಿ ಮಹೋತ್ಸವದ ಪ್ರಚಾರ ರಥಕ್ಕೆ ಪೂಜೆ ಹಾಗೂ ಪುಷ್ಪಾರ್ಚನೆ ನೆರವೇರಿಸಿ ಮಾತನಾಡಿದರು. ಕೆಂಪೇಗೌಡರು ಒಂದು ಸೀಮಿತರಾಗಿ ನಾಡು ಕಟ್ಟಿಲ್ಲ. ಎಲ್ಲಾ ಸಮುದಾಯಕ್ಕೂ ಅನುಗುಣವಾಗಿ ಪೇಟೆಗಳನ್ನು ನಿರ್ಮಿಸಿ ಮಾದರಿಯಾಗಿದ್ದಾರೆ. ಅವರ ಕೊಡುಗೆಗಳನ್ನು ಸ್ಮರಿಸುವ ದಿಸೆಯಲ್ಲಿ ನಡೆಯುವ ಜಯಂತಿ ಕಾರ್ಯಕ್ರಮದ ಪ್ರಚಾರ ರಥಕ್ಕೆ ಚಾಲನೆ ನೀಡಲಾಗಿದೆ. ಇಂದಿನಿಂದ ಜಿಲ್ಲೆ, ತಾಲ್ಲೂಕು ಹಾಗೂ ನಗರ ಭಾಗದಲ್ಲಿ ಕೆಂಪೇಗೌಡರ ರಥಯಾತ್ರೆ ಸಂಚರಿಸಲಿದೆ. ಜೂ.27ರ ಜಯಂತಿಯಲ್ಲಿ ಎಲ್ಲರೂ ಭಾಗವಹಿಸಿ ಕಾರ್ಯಕ್ರಮದ ಸಂದೇಶ ಮುಂದಿನ ಪೀಳಿಗೆಗೆ ತಲುಪಿಸುವ ಪ್ರಯತ್ನಕ್ಕೆ ಎಲ್ಲರ ಸಹಕಾರ ಇರಲಿದೆ ಎಂದರು.

ಶಾಸಕ ಜಿ.ಟಿ.ದೇವೇಗೌಡ ಮಾತನಾಡಿ ಕೆಂಪೇಗೌಡ ಜಯಂತಿ ವಿಚಾರದಲ್ಲಿ ತನ್ನದೇ ಆದ ಇತಿಹಾಸ ಹೊಂದಿದೆ. ಅದನ್ನು ಮತ್ತಷ್ಟು ವಿಜೃಂಭಣೆಯಿಂದ ಆಚರಿಸುವ ಕೆಲಸ ಇತ್ತೀಚಿನ ದಿನಗಳಲ್ಲಿ ನಡೆಯುತ್ತಿದೆ. ಈ ನಿಟ್ಟಿನಲ್ಲಿ ಪ್ರಚಾರ ರಥಕ್ಕೆ ಸಾಮೂಹಿಕವಾಗಿ ಸ್ವಾಮೀಜಿಯವರ ಸಾನಿಧ್ಯದೊಂದಿಗೆ ಚಾಲನೆ ನೀಡಿದ್ದೇವೆ. ಹೆಚ್ಚಿನ ಸಂಖ್ಯೆಯಲ್ಲಿ ಕೆಂಪೇಗೌಡ ಜಯಂತಿಯಲ್ಲಿ ಭಾಗವಹಿಸಿ ಎಂದು ಹೇಳಿದರು.



ಶಾಸಕ ಕೆ.ಹರೀಶ್ ಗೌಡ ಮಾತನಾಡಿ, ಈಗಾಗಲೇ ಕೆಂಪೇಗೌಡ ಜಯಂತಿಗೆ ಅಗತ್ಯ ಸಹಕಾರ ನೀಡುವುದಾಗಿ ಹೇಳಿದ್ದೇನೆ. ಬಹುತೇಕ ಜಯಂತಿಗಳಿಗೆ ನನ್ನ ಅಧ್ಯಕ್ಷತೆಯೇ ಇರುತ್ತದೆ. ಅದರಂತೆ ಕೆಂಪೇಗೌಡ ಜಯಂತಿಯನ್ನು ಸಮುದಾಯದ ಎಲ್ಲರೂ ಪಕ್ಷಾತೀತವಾಗಿ ವಿಜೃಂಭಣೆಯಿಂದ ಈ ಸಾಲಿನಲ್ಲಿ ಆಚರಿಸುತ್ತಿರುವುದು ಸಂತಸದ ಸಂಗತಿ. ಕೆಂಪೇಗೌಡರು ಎಲ್ಲಾ ಸಮಾಜಕ್ಕೂ ನೀಡಿರುವ ಕೊಡುಗೆ ಹಾಗೂ ಅವರ ಆದರ್ಶ ವ್ಯಕ್ತಿತ್ವವನ್ನು ಸಾರುವ ನಿಟ್ಟಿನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಜಯಂತಿಯಲ್ಲಿ ಭಾಗವಹಿಸಬೇಕಿದೆ. ಈ ನಿಟ್ಟಿನಲ್ಲಿ ಜಯಂತೋತ್ಸವ ಸಮಿತಿ ಶ್ರಮಿಸುತ್ತಿದ್ದು ಎಲ್ಲರೂ ಸಹಕರಿಸಿ ಎಂದು ಹೇಳಿದರು.

### ಇಂದು ರಥದ ಪ್ರಚಾರ ಮಾರ್ಗ

**ಬುಧವಾರ ಗದ್ದಿಗೆ, ಕರಿಮುದ್ದನಹಳ್ಳಿ, ಅಸ್ವಾಲ್, ಹೊಸಹಳ್ಳಿ, ಸಿಂಗ ಮಾರನಹಳ್ಳಿ, ಗಂಗರ ಹೊಸಹಳ್ಳಿ, ಕೊತ್ತೇಗಾಲ, ಗೊಲ್ಲನಬೀಡು, ಹಳೆಯಮನುಗನಹಳ್ಳಿ, ಜಿ.ಬಿ.ಸರಗೂರು, ಕಣೆಯನಹುಂಡಿ, ಚಿಟ್ಟದ ಬೀಡು, ಮಾವಿನಹಳ್ಳಿ, ಗೋಪಾಲಪುರ, ಬಿಲಹಳ್ಳಿ, ಮರಿಟಿಕ್ಯಾತನಹಳ್ಳಿ, ಗಣಗನಹುಂಡಿ, ಸಾಹುಕಾರಹುಂಡಿ, ದಾಸನಕೊಪ್ಪಲು ಹಾಗೂ ಬೋಗಾದಿಯಲ್ಲಿ ಸಂಚರಿಸಲಿದೆ.**

ಜಯಂತೋತ್ಸವ ಸಮಿತಿ ಅಧ್ಯಕ್ಷ ಪ್ರಶಾಂತ್ ಗೌಡ ಮಾತನಾಡಿ, ಪ್ರತಿ ವರ್ಷಕ್ಕೂ ಕೆಂಪೇಗೌಡರ ಜಯಂತಿ ಆಚರಣೆಯ ಸಂಭ್ರಮವನ್ನು ಹೆಚ್ಚಿಸುತ್ತಾ ಬರಲಾಗುತ್ತಿದೆ. ಈ ಸಾಲಿನಲ್ಲಿ ಚಾಮರಾಜನಗರ ಜಿಲ್ಲೆಯ ತಾಲ್ಲೂಕುಗಳಿಗೂ ಸಮಿತಿ ಹೋಗಿ ಆಹ್ವಾನಿಸುವ ಕೆಲಸವನ್ನು ತಂಡ ಮಾಡುತ್ತಿದ್ದೇವೆ. ಜತೆಗೆ ಇಂದು ಪ್ರಚಾರ ರಥಕ್ಕೆ ಚಾಲನೆ ನೀಡಿದ್ದು, ಹಿನಕಲ್, ಹೂಟಗಳ್ಳಿ, ಬೆಳವಾಡಿ, ಕೂರ್ಗಳ್ಳಿ, ಮೈದಾನಹಳ್ಳಿ, ಆನಂದೂರು, ಹೊಸಕೋಟೆ, ಗುಂಗ್ರಾಲ್ ಛತ್ರ, ಯಲಚನಹಳ್ಳಿ, ಇಲವಾಲ ಗ್ರಾಮಗಳಲ್ಲಿ ಪ್ರಚಾರ ಸಂಚರಿಸಲಿದೆ. ಜೂ.27ರಂದು ಎರಡು ಜಿಲ್ಲೆಯಿಂದ ಅತಿಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಜಯಂತಿಯನ್ನು ಯಶಸ್ವಿಗೊಳಿಸಬೇಕೆಂದು ಈ ಮೂಲಕ ಕೇಳಿಕೊಳ್ಳುವುದಾಗಿ ಹೇಳಿದರು.

ಶಾಸಕ ಶ್ರೀವತ್ಸ, ಮಾಜಿ ಸಂಸದ ಪ್ರತಾಪಸಿಂಹ, ಮಾಜಿ ಶಾಸಕ ಎಲ್.ನಾಗೇಂದ್ರ, ಕೆಂಪೇಗೌಡ ಜಯಂತೋತ್ಸವ ಸಮಿತಿ ಅಧ್ಯಕ್ಷ ಪ್ರಶಾಂತ್ ಗೌಡ, ರಾಜ್ಯ ಒಕ್ಕಲಿಗರ ಸಂಘದ ಅಧ್ಯಕ್ಷ ಸಿ.ಜಿ.ಗಂಗಾಧರ್, ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕರಾದ ಕೆ.ವಿ.ಶ್ರೀಧರ್, ಡಾ.ಎಂ.ಬಿ.ಮಂಜೇಗೌಡ, ನಗರಪಾಲಿಕೆ ಮಾಜಿ ಸದಸ್ಯರಾದ ಪ್ರೇಮಾಶಂಕರೇಗೌಡ, ಎಸ್.ಬಿ.ಎಂ. ಮಂಜು, ಮೈಸೂರು ಜಿಲ್ಲಾ ಒಕ್ಕಲಿಗರ ಸಂಘದ ಅಧ್ಯಕ್ಷ ಎಂ.ಮರಿಸ್ವಾಮಿ,ಗೌರವಾಧ್ಯಕ್ಷ ಆಲತೂರು ಜಯರಾಮ್ ಉಪಾಧ್ಯಕ್ಷ ರವಿಕುಮಾರ್ ರಾಜಕೀಯ, ಬನ್ನೂರು ಮಹೇಶ್, ಪ್ರಧಾನ ಕಾರ್ಯದರ್ಶಿ ಎಂ.ಈ.ಚೇತನ್, ನಿರ್ದೇಶಕರಾದ ಒಂಟಿಕೊಪ್ಪಲು ಗುರುರಾಜ್, ರವಿ, ಬಿ.ಪಿ.ಬೋರೇಗೌಡ, ಗಿರೀಶ್ ಗೌಡ, ಜಿ.ಕುಮಾರ್ ಗೌಡ, ಎಂ.ಸುಶೀಲ ನಂಜಪ್ಪ, ಉಮೇಶ್, ಸಮುದಾಯದ ಮುಖಂಡರಾದ ಬೀಡನಹಳ್ಳಿ ಸತೀಶ್ ಗೌಡ, ಕರ್ನಾಟಕ ಕಾವಲುಪಡೆ ಅಧ್ಯಕ್ಷ ಮೋಹನ್ ಕುಮಾರ್ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಸದಸ್ಯೆ ಲಕ್ಷ್ಮಿದೇವಿ, ಮೈಮುಲ್ ನಿರ್ದೇಶಕ ಊಮಾಶಂಕರ್, ರಾಕೇಶ್ ಗೌಡ, ತಾಲ್ಲೂಕು ಒಕ್ಕಲಿಗರ ಸಂಘದ ಕೃಷ್ಣೇಗೌಡ, ಕೆ.ಜಿ.ಕೊಪ್ಪಲು ರಾಜಣ್ಣ, ಜೆ.ಪಿ.ನಗರ ಕೃಷ್ಣ, ನಿವೃತ್ತ ಪೊಲೀಸ್ ಅಧಿಕಾರಿ ಮರಿಗೌಡ, ಮಾಜಿ ಮೇಯರ್ ಆರ್.ಲಿಂಗಪ್ಪ, ಕಾವಲುಪಡೆ ರಾಜ್ಯಾಧ್ಯಕ್ಷ ಮೋಹನ್ ಕುಮಾರ್ ಗೌಡ, ಮಂಚೇಗೌಡನ ಕೊಪ್ಪಲು ರವಿ, ಸುಮಿತ್ರಾ ರಮೇಶ್, ಹೇಮಾ ನಂದೀಶ್, ತೇಜೇಸ್ ಲೋಕೇಶ್ ಗೌಡ, ಬಿಜೆಪಿ ಮುಖಂಡ ದಿನೇಶಗೌಡ, ಶಿವಶಂಕರ್ ಇನ್ನಿತರರು ಉಪಸ್ಥಿತರಿದ್ದರು.

ಮೊದಲ ಪುಟದಿಂದ

### ಯೋಜನೆ ಕೈಬಿಡಲ್ಲ

ಇದೆ. ರೈತರೊಂದಿಗೆ ಮಾತುಕತೆ ನಡೆಸಿ, ವಿಶ್ವಾಸಕ್ಕೆ ತೆಗೆದುಕೊಂಡು ಯೋಜನೆ ಮಾಡುತ್ತೇವೆ ಎಂದು ತಿಳಿಸಿದರು. ವಿಧಾನಪರಿಷತ್ ಚುನಾವಣೆ ಕುರಿತು ಪ್ರತಿಕ್ರಿಯಿಸಿದ ಯತೀಂದ್ರ ಸಿದ್ದರಾಮಯ್ಯ, ನಾವು 5ನೇ ಅಭ್ಯರ್ಥಿಯನ್ನು ಕಣಕ್ಕಿಳಿಸಿದ್ದೇವೆ. ನಮ್ಮ ಅಭ್ಯರ್ಥಿಗಳು ಗೆಲ್ಲುತ್ತಾರೆ ಎಂದರು.

### ರಸ್ತೆ ನಿರ್ಮಾಣ ರಾಕೆಟ್ ಸೈನ್ಸಾ?

ಇದುವರೆಗೆ ಕ್ರಮ ಕೈಗೊಂಡಿಲ್ಲ. ಮುಂದಿನ ದಿನಗಳಲ್ಲಿ ಮಳೆ ಬಂದಾಗ ರಾಜಕಾಲುವೆ ನೀರು ರಸ್ತೆಗೆ ಬಂದರೆ ಇಂಜಿನಿಯರ್ ಮೇಲೆ ಕ್ರಮದ ಎಚ್ಚರಿಕೆ ನೀಡಿದರು. ನನ್ನ ಕನಸಿನ ಬೆಂಗಳೂರು ಸಿಂಪಲ್ ಇದೆ. ಇಲ್ಲಿ ವಾಸ ಮಾಡುವ ಜನರೇ ನನಗೆ ಪ್ರಾಮುಖ್ಯ. ಇವತ್ತಿಗೂ ಬೆಂಗಳೂರಲ್ಲಿ ಇರುವಷ್ಟು ರಿಯಲ್ಎಸ್ಟೇಟ್ ಡಿಮ್ಯಾಂಡ್ ಬೇರೆ ಎಲ್ಲಿಯೂ ಇಲ್ಲ. ಬೇರೆ ನಗರದಲ್ಲಿ ಸಮಸ್ಯೆ ಇಲ್ಲವಾ, ದೆಹಲಿಯಲ್ಲಿ ಟ್ರಾಫಿಕ್ ಸಮಸ್ಯೆ ಇಲ್ವಾ? ಆದರೆ ಬೆಂಗಳೂರಿನ ಸಮಸ್ಯೆ ಹೆಚ್ಚು ಸುದ್ದಿ ಏಕೆ ಆಗುತ್ತದೆ ಎಂದು ಪ್ರಶ್ನಿಸಿದರು.

### ಧರ್ಮ ಆರ್ಎಸ್ಎಸ್ ಸ್ವತ್ತಲ್ಲ

ಪರಂಪರೆ. ವಿವಾದಾತ್ಮಕ ಹಿನ್ನೆಲೆ ಹೊಂದಿರುವ ಒಂದು ಸಂಘಟನೆಯನ್ನು ಸಂಪೂರ್ಣ ಹಿಂದೂ ಸಮಾಜದ ಪ್ರತಿನಿಧಿಯಂತೆ ಬಿಂಬಿಸುವುದು ಸರಿಯೇ ಎಂದು ಪ್ರಶ್ನಿಸಿದ್ದಾರೆ. ಹಿಂದೂತ್ವದ ಬಗ್ಗೆ ದಿನವೂ ದೊಡ್ಡ ದೊಡ್ಡ ಭಾಷಣ ಮಾಡುವ ಬಿಜೆಪಿಯ ನಾಯಕರು ಮತ್ತು ಸ್ವಯಂ ಘೋಷಿತ 'ಹಿಂದೂ ರಕ್ಷಕರು' ಈಗ ಏನು ಹೇಳುತ್ತಾರೆ? ಹಿಂದೂ ಧರ್ಮ ಮತ್ತು ಆರ್ಎಸ್ಎಸ್ ಒಂದೇ ಎಂದು ಹೇಳುವುದನ್ನು ಅವರು ಒಪ್ಪುತ್ತಾರೆಯೇ? ಎಂದು ತಿರುಗೇಟು ನೀಡಿದ್ದಾರೆ.

### ಶ್ರೀರಾಮನೇ ಲೆಕ್ಕ ಕೊಡಬೇಕು

ನೀಡದಂತೆ ಲಕ್ಷಾಂತರ ಜನರನ್ನು ಸೇರಿಸಿ ಪಥಸಂಚಲನ ಮಾಡುತ್ತಿದ್ದಾರೆ. ಅಖಿಲ ಭಾರತ ಪ್ರತಿನಿಧಿ ಸಭಾ ಈ ಮಾಹಿತಿ ನೀಡಿದೆ. ಹೈಕೋರ್ಟ್ ಆದೇಶ ಉಲ್ಲಂಘಿಸಿ ಪಥಸಂಚಲನ ಮಾಡಿದರೆ ಪ್ರಶ್ನೆ ಮಾಡಬಾರದೇ ಎಂದು ಕೇಳಿದರು. ಸಾಂವಿಧಾನಿಕ ಪ್ರಜಾಪ್ರಭುತ್ವದಲ್ಲಿ, ಯಾವುದೇ ಸಂಸ್ಥೆ, ಅದು ಎಷ್ಟೇ ಹಳೆಯದಾಗಿರಲಿ ಅಥವಾ ಪ್ರಭಾವಶಾಲಿಯಾಗಿರಲಿ ದೇಶದ ಕಾನೂನು ಪಾಲಿಸಬೇಕು. ದುರಹಂಕಾರವನ್ನು ದೂರವಿಡಿ. ನಿಮ್ಮ ಕಾನೂನು ಮುಖ್ಯಸ್ಥರು ಬಂದು ನನಗೆ ವಿವರಿಸಲಿ ಎಂದು ಪ್ರಿಯಾಂಕ್ ಖರ್ಗೆ ಹೇಳಿದರು.

### ಟೆಲಿಗ್ರಾಮ್ ನಿಷೇಧ

ನಿಷ್ಕ್ರಿಯಗೊಳಿಸಬೇಕೆಂದು ಸೂಚಿಸಿದೆ. ಎನ್‌ಟಿಎ ಪ್ರಕಾರ, ಸಂಘಟಿತ ವಂಚನೆ ಮತ್ತು ಸೈಬರ್ ವಂಚನೆ ಜಾಲಗಳು ಈ ಟೆಲಿಗ್ರಾಮ್ ಅನ್ನು ಬಳಸುತ್ತಿವೆ ಎಂಬ ಆರೋಪಗಳ ನಂತರ ಇದರ ಮೇಲೆ ತಿಂಗಳುಗಟ್ಟಲೆ ನಿಗಾ ವಹಿಸಿದ ಬಳಿಕ ಈ ಕ್ರಮ ಕೈಗೊಳ್ಳಲಾಗಿದೆ. ಟೆಲಿಗ್ರಾಮ್ ಆಪ್‌ನಲ್ಲಿ ಕೆಲವು ಚಾನೆಲ್‌ಗಳು ಪರೀಕ್ಷಾ ಪತ್ರಿಕೆಗೆ ಪ್ರವೇಶವನ್ನು ಬಹಿರಂಗವಾಗಿ ಜಾಹೀರಾತು ಮಾಡಿ ಅಭ್ಯರ್ಥಿಗಳು ಮತ್ತು ಕುಟುಂಬಗಳಿಂದ ಸಾವಿರ ರೂಪಾಯಿಗಳಿಂದ ಲಕ್ಷ ರೂಪಾಯಿಗಳವರೆಗೆ ಪಾವತಿ ಮಾಡುವಂತೆ ಕೋರಿವೆ ಎಂದು ಎನ್ ಟಿಎ ತಿಳಿಸಿದೆ.

### ಸಿದ್ದು–ಡಿಕೆಶಿ ಭೇಟಿ, ಚರ್ಚೆ

ಎಂದು ಸಿದ್ದರಾಮಯ್ಯ ತಿಳಿಸಿದ್ದಾರೆ. ನಿಕಟಪೂರ್ವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಕಾವೇರಿ ನಿವಾಸದಲ್ಲಿ ಭೇಟಿ ಮಾಡಿ ವಿವಿಧ ವಿಷಯಗಳ ಕುರಿತು ಸಮಾಲೋಚಿಸಲಾಯಿತು ಎಂದು ತಿಳಿಸಿದ್ದಾರೆ.

### ಭಾಗವತ್ ವಿಡಿಯೋ ನಕಲಿ

ನೋಂದಣಿ ಕೇಳುತ್ತಿದ್ದೇನೆ ಅವರು ಉತ್ತರಿಸಲಿ ಎಂದು ಹೇಳಿದ್ದಾರೆ. ಪ್ರಿಯಾಂಕ್ ಖರ್ಗೆ ಬರೆದಿರುವ ಪತ್ರವನ್ನು ರಾಜಕೀಯ ಗಿಮಿಕ್ ಅಂತ ಆರ್ಎಸ್ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಟೀಕಿಸಿರುವ ವಿಡಿಯೋ ಎಂಬ ವೈರಲ್ ಆಗಿತ್ತು.

# ಸಂಪರ್ಕ ರಸ್ತೆಗಳ ಅಭಿವೃದ್ದಿಗೆ ಹೆಚ್ಚಿನ ಒತ್ತು

ಚಾಮರಾಜನಗರ, ಮುಖ್ಯಮಂತ್ರಿಗಳ ವಿಶೇಷ ಗ್ರಾಮೀಣ ರಸ್ತೆಗಳ ಅಭಿವೃದ್ದಿ ನಿಧಿಯಲ್ಲಿ ಕ್ಷೇತ್ರಕ್ಕೆ ಹೆಚ್ಚಿನ ಅನುದಾನ ಬಿಡುಗಡೆಯಾಗಿದ್ದು, ಮುಂದಿನ ದಿನಗಳಲ್ಲಿ ಗ್ರಾಮೀಣ ಸಂಪರ್ಕ ರಸ್ತೆಗಳ ಅಭಿವೃದ್ದಿ ಹೆಚ್ಚಿನ ಒತ್ತು ನೀಡುವುದಾಗಿ ಗುಂಡ್ಲುಪೇಟೆ ಕ್ಷೇತ್ರದ ಶಾಸಕ ಎಚ್.ಎಂ. ಗಣೇಶ್‌ಪ್ರಸಾದ್ ತಿಳಿಸಿದರು.

ತಾಲೂಕಿನ ಹರವೆ ಗ್ರಾಮದ ಹತ್ತಿರದಲ್ಲಿರುವ ಗುಂಡ್ಲುರಸ್ತೆಯಿಂದ ಮಲೆಯೂರು ಮಾರ್ಗಕ್ಕೆ ಸಂಪರ್ಕ ಕಲ್ಪಿಸುವ 500 ಮೀಟರ್ ರಸ್ತೆ ಅಭಿವೃದ್ದಿಗಾಗಿ ಒಂದು ಕೋಟಿ ರೂ.ವೆಚ್ಚದಲ್ಲಿ ಕೈಗೊಂಡಿರುವ ಕಾಮಗಾರಿಗೆ ಇಂದು ಗುದ್ದಲಿಪೂಜೆ ನೆರವೇರಿಸಿ ಅವರು ಮಾತನಾಡಿದರು. ಈಗಾಗಲೇ ಬದನವಾಳು ನಿಂದ ರಾಜ್ಯ ಹೆದ್ದಾರಿ 150ಎ ನಿಂದ ವೀರನಪುರ ಕ್ರಾಸ್‌ಗೆ ಸೇರುವ ರಸ್ತೆಯನ್ನು ಅಭಿವೃದ್ದಿಪಡಿಸಲು ಸಿಎಂ ವಿಶೇಷ ಅನುದಾನದಡಿಯಲ್ಲಿ ಕಾಮಗಾರಿಯನ್ನು ಕೈಗೊಳ್ಳಲಾಗಿದೆ. ಮಲೆಯೂರಿನಿಂದ ಹರವೆ ಮಾರ್ಗದ ರಸ್ತೆ ಅಭಿವೃದ್ದಿಗೆ ಚಾಲನೆ ನೀಡಿ, ಕಾಮಗಾರಿ ಪ್ರಗತಿಯಲ್ಲಿದೆ. ಈಗ ಹರವೆ ಗುಂಡ್ಲುದಿಂದ ಮಲೆಯೂರು ಮಾರ್ಗದ ರಸ್ತೆ ಸಂಪರ್ಕ ಕಲ್ಪಿಸುವ ರಸ್ತೆಯನ್ನು ಗುದ್ದಲಿ ಪೂಜೆ ಮಾಡಿದ್ದೇವೆ ಎಂದರು.

ಹರವೆ ಗುಂಡ್ಲು ಸೇತುವೆ ನಿರ್ಮಾಣಕ್ಕೆ 2.50 ಕೋಟಿ ರೂ. ಬಿಡುಗಡೆಯಾಗಿದ್ದು, ಟೆಂಡರ್ ಪ್ರಕ್ರಿಯೆಯಲ್ಲಿದೆ. ಅಂತಿಮವಾಗುತ್ತಿದ್ದಂತೆ ಈ ಸೇತುವೆ ನಿರ್ಮಾಣಕ್ಕೆ ಚಾಲನೆ ನೀಡಲಾಗುತ್ತದೆ. ಚಿಕ್ಕಬೇಗೂರು, ಹರವೆ ಮಾರ್ಗದ ಮುಖ್ಯ ರಸ್ತೆ ಅಭಿವೃದ್ದಿಗೆ 10 ಕೋಟಿ ರು. ಬಿಡುಗಡೆಯಾಗಿದ್ದು, 6 ಕೋಟಿ ರೂ.ಗಳ ಹರವೆ ಭಾಗದ ರಸ್ತೆಗೆ ಸೇರ್ಪಡೆ ಮಾಡಲಾಗಿದೆ. . ಕಳೆದು ಮೂರು ವರ್ಷಗಳ ಅವಧಿಯಲ್ಲಿ ಹರವೆ ಭಾಗದ ಆರು ಪಂಚಾಯಿತಿ ವ್ಯಾಪ್ತಿಗಳ



ಗ್ರಾಮಗಳ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಹೆಚ್ಚಿನ ಶ್ರಮ ವಹಿಸಿದ್ದು, ಇನ್ನು ಎರಡು ವರ್ಷಗಳ ಅವಧಿಯಲ್ಲಿ ಹರವೆ ಹೋಬಳಿಯನ್ನು ಮಾದರಿಯನ್ನಾಗಿ ಮಾಡುವ ಗುರಿ ನಮ್ಮದಾಗಿದೆ. ಎಲ್ಲಾ ಗ್ರಾಮಗಳಲ್ಲಿ ಎಲ್ಲಾ ವರ್ಗಗಳ ಜನರು ವಾಸಿಸುವ ಬಡಾವಣೆಗಳಿಗೆ ಈಗಾಗಲೇ ಸಿಮೆಂಟ್ ರಸ್ತೆ, ಚರಂಡಿ ನಿರ್ಮಾಣ ಮಾಡಲಾಗುತ್ತಿದೆ. ಮುಂದೆ ಇನ್ನು ಹೆಚ್ಚಿನ ಅನುದಾನವನ್ನು ನೀಡುವುದಾಗಿ ಎಚ್.ಎಂ. ಗಣೇಶ್ ಪ್ರಸಾದ್ ತಿಳಿಸಿದರು.

**▶▶ ಶಾಸಕ ಎಚ್. ಎಂ. ಗಣೇಶ್‌ಪ್ರಸಾದ್**
**▶▶ ಹರವೆ ಹಗ್ರಾಮೀಣತ್ತಿರದ ಗುಂಡ್ಲು ರಸ್ತೆ ಅಭಿವೃದ್ಧಿಗೆ ಗುದ್ದಲಿಪೂಜೆ**

ಈ ಸಂದರ್ಭದಲ್ಲಿ ಹರವೆ ಜಿ.ಪಂ. ಕ್ಷೇತ್ರದ ಮಾಜಿ ಸದಸ್ಯ ಕೆರೆಹಳ್ಳಿ ನವೀನ್, ಕರ್ನಾಟಕ ರಾಜ್ಯ ಕನಿಷ್ಠ ವೇತನ ಸಲಹಾ ಸಮಿತಿಯ ಮಾಜಿ ಅಧ್ಯಕ್ಷ ಉಮೇಶ್ ಎಸ್‌ಪಿಕೆ, ಪಿಡಬ್ಲ್ಯುಡಿ ಎಇಇ ಶಾಂತಮ್ಮ, ತಾ.ಪಂ.ಮಾಜಿ ಸದಸ್ಯ ಉದಯಕುಮಾರ್, ಮುಖಂಡರಾದ ಮಾಸ್ಟರ್ ಮಾದಪ್ಪ, ಮಲ್ಲಣ್ಣ, ಪಿಎಸಿಸಿ ಬ್ಯಾಂಕ್ ನಿರ್ದೇಶಕ ರೇವಣ್ಣ, ರಂಗಸ್ವಾಮಿನಾಯಕ, ಗ್ಯಾರಂಟಿ ಸಮಿತಿ ಸದಸ್ಯ ಪ್ರವೀಣ್, ಹೊಸಹಳ್ಳಿ ಮಧುಸೂದನ್, ಕೆಂಪರಾಜು, ಮಹದೇವಯ್ಯ, ಮಹದೇವಸ್ವಾಮಿ, ಗೌಡಿಕೆ ಲೋಕೇಶ, ಬಸವರಾಜಪ್ಪ, ಮಲ್ಲೇಶ್, ಪ್ರಕಾಶ್ ಇತರರು ಹಾಜರಿದ್ದರು.

# 17ರಂದು ಮದ್ಯ ಮಾರಾಟ ನಿಷೇಧ

ಗುಂಡ್ಲುಪೇಟೆ: ಪಟ್ಟಣದಲ್ಲಿ ಜೂನ್ 17ರಂದು ಹಮ್ಮಿಕೊಳ್ಳಲಾಗಿರುವ ಬಸವ ಜಯಂತಿ–2026ರ ಆಚರಣೆಯ ಹಿನ್ನಲೆಯಲ್ಲಿ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ಉದ್ದೇಶದಿಂದ ಅಂದು ಮದ್ಯ ಮಾರಾಟವನ್ನು ತಾತ್ಕಾಲಿಕವಾಗಿ ನಿಷೇಧಿಸಲಾಗಿದೆ. ಜಿಲ್ಲಾಧಿಕಾರಿ ಶ್ರೀಮತಿ ಶ್ರೀರೂಪ ಅವರು ಕರ್ನಾಟಕ ಅಬಕಾರಿ ಕಾಯ್ದೆ–1965ರ ಕಲಂ 21(1)ರ ಅಡಿಯಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ಈ ಅಧಿಕೃತ ಆದೇಶ ಹೊರಡಿಸಿದ್ದಾರೆ.

**ಶಾಂತಿ ಪಾಲನೆಗಾಗಿ ಪೊಲೀಸ್ ಇಲಾಖೆ ಮನವಿ**

ತಾಲ್ಲೂಕು ಅಖಿಲ ಭಾರತ ವೀರಶೈವ ಮಹಾಸಭೆ ಹಾಗೂ ವಿವಿಧ ವೀರಶೈವ ಸಂಘಟನೆಗಳ ಒಕ್ಕೂಟದ ಜಂಟಿ ಸಹಯೋಗದಲ್ಲಿ ಜೂನ್ 17ರಂದು ಗುಂಡ್ಲುಪೇಟೆ ಪಟ್ಟಣದಲ್ಲಿ ಭವ್ಯ ಬಸವ ಜಯಂತಿ ಆಚರಣೆ ನಡೆಯಲಿದೆ. ಈ ಮಂಗಳಕರ ಸಂದರ್ಭದಲ್ಲಿ ಸಾರ್ವಜನಿಕ ವಲಯದಲ್ಲಿ ಯಾವುದೇ ಅಹಿತಕರ ಘಟನೆಗಳು ಸಂಭವಿಸದಂತೆ ಮುಂಜಾಗ್ರತಾ ಕ್ರಮವಾಗಿ ಶಾಂತಿ ಮತ್ತು ಸುವ್ಯವಸ್ಥೆಯನ್ನು ಕಾಪಾಡಲು ಮದ್ಯ ಮಾರಾಟ ನಿಷೇಧಿಸುವಂತೆ ಜಿಲ್ಲಾ ಪೊಲೀಸ್ ಇಲಾಖೆಯು ಜಿಲ್ಲಾಡಳಿತಕ್ಕೆ ವಿಶೇಷ ಮನವಿ ಸಲ್ಲಿಸಿತ್ತು. ಪೊಲೀಸರ ಈ ಮನವಿಯನ್ನು ಪುರಸ್ಕರಿಸಿ ಮುನ್ನೆಚ್ಚರಿಕೆ ಕ್ರಮವಾಗಿ ಈ ನಿರ್ಧಾರ ಕೈಗೊಳ್ಳಲಾಗಿದೆ.

**6 ಕಿಲೋಮೀಟರ್ ವ್ಯಾಪ್ತಿಯಲ್ಲಿ ಕಟ್ಟುನಿಟ್ಟಿನ ಜಾರಿ**

ಜಿಲ್ಲಾಧಿಕಾರಿಗಳ ಜಾರಿಗೆ ತಂದಿರುವ ಆದೇಶದನ್ವಯ ಜೂನ್ 17ರಂದು ಮುಂಜಾನೆ 6 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಗುಂಡ್ಲುಪೇಟೆ ಪಟ್ಟಣ ಹಾಗೂ ಅದರ ಸುತ್ತಮುತ್ತಲಿನ 6 ಕಿಲೋಮೀಟರ್ ವ್ಯಾಪ್ತಿಯಲ್ಲಿ ಬರುವ ಎಲ್ಲಾ ರೀತಿಯ ಮದ್ಯದಂಗಡಿಗಳು, ಬಾರ್ ಮತ್ತು ವೈನ್ ಶಾಪ್‌ಗಳನ್ನು ಕಡ್ಡಾಯವಾಗಿ ಮುಚ್ಚುವಂತೆ ಸೂಚಿಸಲಾಗಿದೆ. ಈ ನಿಗದಿತ ಅವಧಿಯಲ್ಲಿ ಯಾವುದೇ ರೀತಿಯ ಮದ್ಯ ಮಾರಾಟ ಮಾಡುವುದು, ಅಕ್ರಮವಾಗಿ ಮದ್ಯ ಸಾಗಾಣಿಕೆ ಮಾಡುವುದು ಹಾಗೂ ಅಕ್ರಮ ದಾಸ್ತಾನು ಮಾಡುವುದರ ಮೇಲೆ ಕಟ್ಟುನಿಟ್ಟಿನ ನಿಷೇಧ ಹೇರಲಾಗಿದೆ. ಒಂದು ವೇಳೆ ಸರ್ಕಾರದ ಈ ಆದೇಶವನ್ನು ಉಲ್ಲಂಘಿಸುವವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಡಳಿತವು ತೀವ್ರ ಎಚ್ಚರಿಕೆ ನೀಡಿದೆ.

ಮೊದಲ ಪುಟದಿಂದ

### ಲೈಸನ್ಸ್ ಪಡೆಯದ ಪಬ್: ಅಬಕಾರಿ ಡಿಸಿ ಅಮಾನತು

ವ್ಯವಹಾರಿಕ ಕಟ್ಟಡಗಳಲ್ಲಿ ಅಗ್ನಿ ಸುರಕ್ಷತೆ ಬಗ್ಗೆ ಮುಂಜಾಗ್ರತೆ ಕ್ರಮ ತೆಗೆದುಕೊಂಡಿದ್ದಾರೆಯೇ ಎಂದು ಪರಿಶೀಲನೆ ನಡೆಸಲು ಹೇಳಿದ್ದೇನೆ. ಮೃತರ ಕುಟುಂಬಕ್ಕೆ ಸೂಕ್ತ ಪರಿಹಾರಕ್ಕೆ ಸಿಎಂ ಗಮನಕ್ಕೆ ತರಲಾಗಿದೆ ಎಂದು ತಿಳಿಸಿದರು.

### ಭ್ರಷ್ಟ ಅಧಿಕಾರಿಗಳಿಗೆ 'ಲೋಕಾ ಶಾಕ್'

ಕಚೇರಿ ಮೇಲೆ ದಾಳಿ ನಡೆಸಲಾಗಿದೆ. ಒಟ್ಟು 12 ಕಡೆ ದಾಳಿ ನಡೆದಿದೆ. ಬೆಳಗಾವಿ, ಹುಬ್ಬಳ್ಳಿ, ವಿಜಯನಗರ ದಾವಣಗೆರೆಯಲ್ಲಿ ಏಕಕಾಲಕ್ಕೆ ಕಾರ್ಯಾಚರಣೆ ನಡೆದಿದೆ. ಬೆಂಗಳೂರಿನ ಎರಡು ಕಡೆ ಲೋಕಾಯುಕ್ತ ದಾಳಿ ನಡೆದಿದೆ. ಕೆಎಚ್‌ಬಿ ಅಡಿಷನಲ್ ಡೈರೆಕ್ಟರ್ ರಾಜಣ್ಣ ಮತ್ತು ಬೆಸ್ಕಾಂ ಎಇಇ ಉದಯ್ ಕುಮಾರ್ ಅವರ ಯಲಹಂಕದ ನಿವಾಸದ ಮೇಲೆ ದಾಳಿ ನಡೆಸಲಾಗಿದೆ.

# ಕೇದಿ,ಬೂಜು,ಬಿಳಿಸುಳಿ ರೋಗ ಪತ್ತೆ: ರೈತರಿಗೆ ಮಾಹಿತಿ

ಪಿರಿಯಾಪಟ್ಟಣ: ತಾಲ್ಲೂಕಿನಲ್ಲಿ ಸುಮಾರು 8000 ಹೆ. ಪ್ರದೇಶದಲ್ಲಿ ಮುಸುಕಿನ ಜೋಳ ಬೆಳೆ ಬಿತ್ತನೆಯಾಗಿದ್ದು, ಬೆಳೆಗಳ ಬೆಳವಣಿಗೆ ಹಂತದಲ್ಲಿ ಕೇದಿಗೆ/ಬೂಜು /ಬಿಳಿಸುಳಿ ರೋಗದ ಲಕ್ಷಣಗಳು ಕಂಡುಬರುತ್ತಿರುವ ಹಿನ್ನಲೆಯಲ್ಲಿ ಕೃಷಿ ಇಲಾಖೆಯ ಅಧಿಕಾರಿಗಳು ಮತ್ತು ಮಂಡ್ಯ ಕೃಷಿ ವಿಶ್ವವಿಧ್ಯಾನಿಲಯದ ವಿಜ್ಞಾನಿಗಳ ತಂಡ ರೋಗ ಬಾದಿತ ಚಿಕ್ಕಹೊಸೂರು, ಆವರ್ತಿ, ದಿಂಡಗಾಡು, ಚಿಕ್ಕಕಮರವಳ್ಳಿ ಮರಟಿಕೊಪ್ಪಲು, ನಾರಳಾಪುರ ಮತ್ತು ಮುತ್ತೂರು ಗ್ರಾಮಗಳ ರೈತರ ಜಮೀನುಗಳಿಗೆ ಮಂಗಳವಾರ ಭೇಟಿ ನೀಡಿ ರೈತರಿಗೆ ರೋಗದ ನಿಯಂತ್ರಣ ಕ್ರಮಗಳ ಬಗ್ಗೆ ಮಾಹಿತಿಯನ್ನು ನೀಡಿದರು.

ಮಂಡ್ಯ ಕೃಷಿ ವಿಶ್ವವಿಧ್ಯಾನಿಲಯದ ಸಸ್ಯರೋಗ ಶಾಸ್ತ್ರ ವಿಭಾಗದ ವಿಜ್ಞಾನಿ ಡಾ. ಉಮಾಶಂಕರ್ ಮಾತನಾಡಿ ಮುಸುಕಿನ ಜೋಳದ ಕೇದಿಗೆ/ಬಿಳಿಸುಳಿ/ಬೂಜು ರೋಗವು ಮಣ್ಣಿನಲ್ಲಿ ಇರುವ ರೋಗ ಕಣ ಊಸೋರ್‌ಗಳು (ಂಥಿಂಡಿಫ) ಪ್ರಾಥಮಿಕ ಸೋಂಕಿನ ಮೂಲವಾಗಿದ್ದು ಅದಕ್ಕೆ ಪೂರಕವಾದ ವಾತಾವರಣ ಲಭ್ಯವಾದಾಗ ಮೊಳಕೆಯೊಡೆದು ಬೇರುಗಳ ಮುಖೇನ ಗಿಡವನ್ನು ಹೊಕ್ಕುತ್ತವೆ ಹಾಗೂ ರೋಗ ಲಕ್ಷಣಗಳಾದ ಬೆಳವಣಿಗೆಯಲ್ಲಿ ಕುಂಠಿತ, ಹಳದಿ ಬಣ್ಣದ ಗೆರೆಗಳು ಮತ್ತು ಎಲೆಗಳು ತಳಭಾಗದಲ್ಲಿ ಶಿಲೀಂಧ್ರದ ಬೂಷ್ಟು ಪುಡಿ ಬೆಳವಣಿಗೆಯನ್ನು ತೋರಿಸುತ್ತದೆ. ಇದರಿಂದ ಸಸ್ಯಗಳ ದ್ಯುತಿಸಂಶ್ಲೇಷಣೆ ಕ್ರಿಯೆ ನಡೆಯದೆ ಬೆಳವಣಿಗೆ ಕುಂಟಿತವಾಗಿ ಇಳುವರಿ ನಷ್ಟವಾಗುತ್ತದೆ ಎಂದು ತಿಳಿಸಿದರು.

**ರೋಗದ ನಿರ್ವಹಣೆ:** ಮುಸುಕಿನ ಜೋಳ ಬೆಳೆಯನ್ನು ಪುನರಾವರ್ತಿತವಾಗಿ ಬೆಳೆದರೆ ರೋಗದ ಪ್ರಮಾಣ ಉಲ್ಬಣವಾಗುವುದರಿಂದ ಸತತವಾಗಿ ಮೂರು ಹಂಗಾಮುಗಳು ಅಥವಾ ಕನಿಷ್ಠ 1–2 ವರ್ಷ ಮುಸುಕಿನ ಜೋಳವನ್ನು



ಬೆಳೆಯಬಾರದು, ರಾಗಿ ಹಾಗೂ ದ್ವಿದಳ ಧಾನ್ಯಗಳಾದ ಸೋಯಾ ಅವರೆ, ಅಲಸಂದೆ ಮತ್ತು ತೊಗರಿ ಬೆಳೆಗಳೊಂದಿಗೆ ಬೆಳೆ ಪರಿವರ್ತನೆ ಮಾಡುವುದು ಉತ್ತಮ ಎಂದರು.

**ಬೀಜೋಪಚಾರ:** ಪ್ರತಿ ಕೆ.ಜಿ ಬೀಜಕ್ಕೆ 3.0 ಗ್ರಾಂ ಮೆಟಾಲಾಕ್ಸಿಲ್ + ಮ್ಯಾಂಕೋಜೆಬ್ ಎಂಬ ಸಂಯುಕ್ತ ಶಿಲೀಂಧ್ರನಾಶಕದಿಂದ ಕಡ್ಡಾಯವಾಗಿ ಬೀಜೋಪಚಾರ ಮಾಡಿ ಬಿತ್ತುವುದು. ಈಗಾಗಲೇ ರೋಗ ಕಾಣಿಸಿಕೊಂಡಿರುವ ತಾಕುಗಳಿಗೆ ಮೆಟಲಾಕ್ಸಿಲ್ 4% ಡಬ್ಲ್ಯೂಪಿ + ಮ್ಯಾಂಕೋಜೆಬ್ 64% ಪ್ರತಿ ಲೀಟರ್ ನೀರಿಗೆ 2.0 ಗ್ರಾಂ ನಂತೆ ಮತ್ತು ಎರಡನೇ ಸಿಂಪಡಣೆಯಾಗಿ ಬಿತ್ತನೆ ಮಾಡಿದ 25–30 ದಿನಗಳ ಅಂತರದಲ್ಲಿ ಅವಶ್ಯಕತೆಯಿದ್ದಲ್ಲಿ (ರೋಗ ಲಕ್ಷಣಗಳು ಕಂಡು ಬಂದಲ್ಲಿ) ಅಜೋಕ್ಸಿಸ್ಟ್ರೋಬಿನ್ 18.2 + ಡೈಫನೊಕೊನೊಜೋಲ್ 114 % ಪ್ರತಿ ಲೀಟರ್ ನೀರಿಗೆ 1.5–2 ಮಿ.ಲೀ. ಬೆರಸಿ ತಪ್ಪದೇ ಸಿಂಪರಣೆ ಮಾಡುವುದು ಉತ್ತಮ ಎಂದು ತಿಳಿಸಿದರು. ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕಿ ಬಿ. ಕೆ. ಕುಸುಮಾ, ಕೃಷಿ ಅಧಿಕಾರಿಗಳಾದ ಹಿತೇಶ್, ಮಹೇಶ್, ಆಗ್ರೋ ಕೃಷ್ಣಾ,ಆವರ್ತಿ ಗ್ರಾಮದ ಸ್ವಾಗತ್, ರೈತರಾದ ಮಂಜುನಾಥ್, ಪ್ರದೀಪ್, ಪ್ರಕಾಶ್, ಚೆನ್ನೇಗೌಡ ಹಾಜರಿದ್ದರು.

12ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಮುನ್ನೋಟ

# ಯೋಗ ದಿನಾಚರಣೆ ಅಂಗವಾಗಿ ಭವ್ಯ ಜಾಥಾ

ಮಡಿಕೇರಿ: ಜೂ.21ರಂದು ದೇಶಾದ್ಯಂತ ಆಚರಿಸಲಾಗುವ 12ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಮುನ್ನೋಟವಾಗಿ ನಗರದಲ್ಲಿ ಮಂಗಳವಾರ ಭವ್ಯ ಯೋಗ ಜಾಗೃತಿ ಜಾಥಾವನ್ನು ಯಶಸ್ವಿಯಾಗಿ ಆಯೋಜಿಸಲಾಯಿತು.

ಕೊಡಗು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಯುಷ್ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಮಡಿಕೇರಿ ಯೋಗ ಒಕ್ಕೂಟ, ಸ್ಕೌಟ್ಸ್ ಮತ್ತು ಗೈಡ್ಸ್ ಹಾಗೂ ಜಿಲ್ಲಾ ಪೊಲೀಸ್ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಈ ಕಾರ್ಯಕ್ರಮ ನಡೆಯಿತು. ನಗರದ ಗಾಂಧಿ ಮೈದಾನದಿಂದ ಹೊರಟ ಜಾಗೃತಿ ಜಾಥಾವು ಹಳೆಯ ಖಾಸಗಿ ಬಸ್ ನಿಲ್ದಾಣದ ಮೂಲಕ ಸಾಗಿ ಮತ್ತೆ ಗಾಂಧಿ ಮೈದಾನದಲ್ಲೇ ಮುಕ್ತಾಯಗೊಂಡಿತು. ಮಡಿಕೇರಿ ನಗರಸಭೆ ಅಧ್ಯಕ್ಷರಾದ ಪಿ. ಕಲಾವತಿ ಹಸಿರು ನಿಶಾನೆ ತೋರಿ ಚಾಲನೆ ನೀಡಿದರು.

**ಯೋಗ ಪ್ರದರ್ಶನ ಮತ್ತು ಸಾರ್ವಜನಿಕರ ಭಾಗಿತ್ವ**






ಈ ಭವ್ಯ ಜಾಥಾದಲ್ಲಿ ವಿದ್ಯಾರ್ಥಿಗಳು ಹಾಗೂ ಯೋಗಾಸಕ್ತರು ಸೇರಿದಂತೆ ಸುಮಾರು 400ಕ್ಕೂ ಹೆಚ್ಚು ಜನ ಅತ್ಯಂತ ಉತ್ಸಾಹದಿಂದ ಪಾಲ್ಗೊಂಡಿದ್ದರು. ಜಾಥಾ ಸಾಗುವ ಹಾದಿಯಲ್ಲಿ ನಗರ ಪೊಲೀಸ್ ಠಾಣೆಯ ಮುಂಭಾಗದಲ್ಲಿ ಆಕರ್ಷಕ ಯೋಗ ಪ್ರದರ್ಶನವನ್ನು ಏರ್ಪಡಿಸಲಾಗಿದ್ದು, ಸಾರ್ವಜನಿಕರ ಗಮನ ಸೆಳೆಯಿತು. ಕಾರ್ಯಕ್ರಮದಲ್ಲಿ ನಗರಸಭೆ ಸದಸ್ಯರಾದ ಶ್ರೀನಾಥ್, ಜಿಲ್ಲಾ ಆಯುಷ್ ಅಧಿಕಾರಿ ಡಾ. ಶೈಲಜಾ ಜಿ, ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಡಾ. ರಾಮಚಂದ್ರ ಕಾಮತ್, ಶಾಲಾ ಶಿಕ್ಷಣ ಇಲಾಖೆಯ ಡಿಪಿಓ ಶ್ರೀನಿವಾಸ್, ಸ್ಕೌಟ್ಸ್ ಮತ್ತು ಗೈಡ್ಸ್ ಮುಖ್ಯಸ್ಥ ಬೇಬಿ ಮ್ಯಾಥ್ಯೂ, ಯೋಗ ಒಕ್ಕೂಟದ ಮಹೇಶ್ ಕುಮಾರ್ ಹಾಗೂ ಯೋಗ ಮತ್ತು ಪ್ರಕೃತಿ ಚಿಕಿತ್ಸೆ ವೈದ್ಯಾಧಿಕಾರಿ ಡಾ. ಅರುಣ್ ಪಿ.ಜಿ ಉಪಸ್ಥಿತರಿದ್ದರು.

ಮಾನಸಿಕ ಮತ್ತು ದೈಹಿಕ ಆರೋಗ್ಯಕ್ಕೆ ಯೋಗವೇ ಸಂಜೀವಿನಿ

ಜಾಥಾದ ನಂತರ ಮಾತನಾಡಿದ ಜಿಲ್ಲಾ ಆಯುಷ್ ಅಧಿಕಾರಿ ಡಾ. ಜಿ. ಶೈಲಜಾ ಅವರು, ಯೋಗವು ಕೇವಲ ಒಂದು ದೈಹಿಕ ವ್ಯಾಯಾಮವಲ್ಲ, ಬದಲಿಗೆ ಅದು ದೇಹ ಮತ್ತು ಮನಸ್ಸನ್ನು ಸಮತೋಲನದಲ್ಲಿಡುವ ಅತ್ಯುತ್ತಮ ಮಾರ್ಗವಾಗಿದೆ ಎಂದರು. ಇಂದಿನ ಒತ್ತಡದ ದಿನಗಳಲ್ಲಿ ದೈಹಿಕ, ಮಾನಸಿಕ ಮತ್ತು ಆಧ್ಯಾತ್ಮಿಕ ಆರೋಗ್ಯವನ್ನು ಸುಸ್ಥಿತಿಯಲ್ಲಿಡಲು ಯೋಗವು ಅತ್ಯಂತ ಸಹಕಾರಿಯಾಗಿದೆ. ನಿರಂತರ ಉಸಿರಾಟದ ನಿಯಂತ್ರಣ, ಯೋಗಾಸನಗಳು ಮತ್ತು ಧ್ಯಾನದ ಮೂಲಕ ತೀವ್ರವಾದ ಮಾನಸಿಕ ಒತ್ತಡವನ್ನು ಗಣನೀಯವಾಗಿ ಕಡಿಮೆ ಮಾಡಿಕೊಳ್ಳಬಹುದು. ನಿತ್ಯ ಯೋಗಾಭ್ಯಾಸ ಮಾಡುವುದರಿಂದ ದೈಹಿಕ ನವ್ಯತೆ ಹೆಚ್ಚುವುದಲ್ಲದೆ, ಭಾವನಾತ್ಮಕ ಸ್ಥಿರತೆ ಹಾಗೂ ಒಟ್ಟಾರೆ ಜೀವನಶೈಲಿಯ ಗುಣಮಟ್ಟ ಉತ್ತಮಗೊಳ್ಳುತ್ತದೆ ಎಂದು ಸಾರ್ವಜನಿಕರಿಗೆ ಮಾಹಿತಿ ನೀಡಿದರು.

# ಜೂ.19ಕ್ಕೆ ಊರಬ್ಬ ಚಿತ್ರ ತೆರೆಗೆ

ಮೈಸೂರು: ಕುಣಿಗಲ್ ತಾಲ್ಲೂಕಿನ ಸುಪ್ರಸಿದ್ಧ ಉಜ್ಜಿನಿ ಚೌಡೇಶ್ವರಿ ಜಾತ್ರೆಯ ವೈಶಿಷ್ಟ್ಯ ಕುರಿತು ನಿರ್ಮಾಣಗೊಂಡಿರುವ ಹಾಗೂ ತಾವು ನಿರ್ದೇಶಿಸಿರುವ ಊರಬ್ಬ ಚಲನಚಿತ್ರ ಜೂ.19 ರಂದು ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದ್ದು, ಚಿತ್ರಪ್ರಿಯರು ಪ್ರೋತ್ಸಾಹಿಸಬೇಕೆಂದು ನಿರ್ದೇಶಕ ಲಕ್ಕಿಶಂಕರ್ ಮನವಿ ಮಾಡಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಒನ್ಸ್ ಮೋರ್ ಕೌರವ ಖ್ಯಾತಿಯ ನರೇಶ್‌ಗೌಡ ನಾಯಕ ನಟರಾಗಿ ನಟಿಸಿದ್ದಾರೆ. ಜೊತೆಗೆ ದೊಡ್ಡಣ್ಣ, ತನಿಷಾ ಕುಪ್ಪಂಡ, ಪಾಯಲ್ ಚಂಗಪ್ಪ, ಸಿದ್ದು ಮೂಲಿಮನಿ, ಮಿಮಿಕ್ರಿ ಗೋಪಿ, ಬಿರಾದಾರ್, ಮಿತ್ರ, ಅರವಿಂದ್‌ರಾವ್ ಇನ್ನಿತರರು ಪ್ರಮುಖ ಪಾತ್ರಗಳಲ್ಲಿದ್ದಾರೆ. ಇದು ಹಾಸ್ಯ, ರೋಮಾಂಚಕತೆ, ಕುತೂಹಲದ ವಿಷಯ ಒಳಗೊಂಡ ಚಿತ್ರವಾಗಿದೆ. ಜಾತ್ರೆ ನಡೆಯುವ ವೇಳೆ ನೈಜ ಚಿತ್ರೀಕರಣಕ್ಕಾಗಿ ಸುಮಾರು 8 ಕ್ಯಾಮೆರಾ ಬಳಸಿರುವುದು ವಿಶೇಷ. ತಾವೇ ಕಥೆಯನ್ನೂ ಬರೆದಿರುವುದಾಗಿ ವಿವರಿಸಿದರು. ಗ್ರಾಮದಲ್ಲಿ ಜಾತ್ರೆ ವೇಳೆ ಆರು ಮಂದಿ ದಲಿತರಿಗೆ ಜನಿವಾರ ಹಾಕಿಸಿ ಬ್ರಾಹ್ಮಣರನ್ನಾಗಿಸಿ ಅವರಿಂದ ಕೊಂಡ ಹಾಯಿಸುವುದು ಈ ಜಾತ್ರೆಯ ವಿಶೇಷ ಪದ್ಧತಿಯಾಗಿದ್ದು, ಇದನ್ನು ಸಹಾ ಚಿತ್ರೀಕರಿಸಲಾಗಿದೆ ಎಂದು ಹೇಳಿದರು. ನಿರ್ಮಾಪಕ ನರೇಶ್‌ಗೌಡ, ಅರವಿಂದ್ ರಾವ್, ಪ್ರಮುಖ ಹಾಡೊಂದನ್ನು ಹಾಡಿರುವ ಮಾಜಿ ಸಚಿವ ಸಾ.ರಾ.ಮಹೇಶ್ ಅವರ ಪತ್ನಿ ಅನಿತಾ ಮೊದಲಾದವರು ಇದ್ದರು.



# ಮೂಲ ಸೌಕರ್ಯಕ್ಕಾಗಿ ಆಗ್ರಹ

## ಅಭಿವೃದ್ಧಿ ಶುಲ್ಕ ಪಾವತಿಸಿದ್ದೇವೆ : ಅರ್ಕಾವತಿ ಬಡಾವಣೆಯ ನಿವೇಶನ ಮಾಲೀಕರು

ರಾಮನಗರ: ತಲಾ ಚದರಡಿಗೆ ರೂ 200 ಅಭಿವೃದ್ಧಿ ಶುಲ್ಕವನ್ನು ಪಾವತಿಸಿದ್ದೇವೆ. ಮೂಲ ಸೌಕರ್ಯಗಳನ್ನು ಕಲ್ಪಿಸಿಕೊಡುವುದಾಗಿ ಶಾಸಕರು ಸೇರಿದಂತೆ ರಾಮನಗರ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಭರವಸೆ ಕೊಟ್ಟಿದ್ದರು. ಆದರೆ ಈವರೆವಿಗೆ ಅಗತ್ಯ ಸೌಕರ್ಯಗಳನ್ನು ಕಲ್ಪಿಸಲಾಗಿಲ್ಲ. ತಕ್ಷಣ ಮೂಲ ಸೌಕರ್ಯಗಳನ್ನು ಕಲ್ಪಿಸಿಕೊಟ್ಟು, ಸಮಗ್ರ ಅಭಿವೃದ್ಧಿ ಮಾಡುವಂತೆ ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರ ಇಲ್ಲಿನ ಜೀಗೇನಹಳ್ಳಿ ಬಳಿ ರಚಿಸಿರುವ ಅರ್ಕಾವತಿ ಬಡಾವಣೆಯ ನಿವೇಶನ ಮಾಲೀಕರು ಅಭಿವೃದ್ಧಿ ಪ್ರಾಧಿಕಾರದ ಪ್ರತಿನಿಧಿಗಳು ಮತ್ತು ಅಧಿಕಾರಿಗಳನ್ನು ಆಗ್ರಹಿಸಿ ಮನವಿ ಪತ್ರ ಸಲ್ಲಿಸಿದ್ದಾರೆ.

ಇದೇ ವಿಚಾರದಲ್ಲಿ ಮನವಿ ಪತ್ರವನ್ನು ಉಪವಿಭಾಗಾಧಿಕಾರಿಗಳಿಗೂ ನಿವೇಶನ ಮಾಲೀಕರು ಮನವಿ ಪತ್ರ ಸಲ್ಲಿಸಿ ತಮ್ಮ ಬೇಡಿಕೆ ಈಡೇರುವಂತೆ ಒತ್ತಾಯಿಸಿದ್ದಾರೆ. ಜೀಗೇನಹಳ್ಳಿ ಬಳಿ ಪ್ರಾಧಿಕಾರದ ವತಿಯಿಂದ ನಿರ್ಮಾಣವಾಗಿರುವ ಅರ್ಕಾವತಿ ಬಡಾವಣೆಯಲ್ಲಿ ಸುಮಾರು 700ಕ್ಕೂ ಹೆಚ್ಚು ಮಂದಿ ನಿವೇಶನಗಳನ್ನು ಹೊಂದಿದ್ದಾರೆ. ನಿವೇಶನಗಳನ್ನು ಪಡೆದು ಎರಡು ದಶಕಗಳಾಗಿವೆ. ಇಲ್ಲಿ ನಾಗರೀಕ ಸೌಲಭ್ಯಗಳು ಇಲ್ಲದ ಕಾರಣ ಅನೇಕರು ಇಲ್ಲಿ ಖಾಲಿ ನಿವೇಶನಗಳನ್ನು ಹೊಂದಿದ್ದಾರೆ. ಕೆಲವರು ಮನೆಗಳನ್ನು ನಿರ್ಮಿಸಿಕೊಂಡಿದ್ದಾರೆ ಎಂದು ಮಾಲೀಕರು ಮನವಿಯಲ್ಲಿ ಅಲವತ್ತುಕೊಂಡಿದ್ದಾರೆ.

### ಈಡೇರದ ಭರವಸೆ

2025ರ ಮೇ ತಿಂಗಳಲ್ಲಿ ಪ್ರಾಧಿಕಾರದ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಶಾಸಕರು ಹಾಗೂ ಪ್ರಾಧಿಕಾರದ ಅಧ್ಯಕ್ಷರು ಸರ್ಕಾರದ ಆದೇಶವನ್ನು ಪ್ರಸ್ತಾಪಿಸಿ ತಲಾ ಚದರಡಿಗೆ 200 ರು ಅಭಿವೃದ್ಧಿ ಶುಲ್ಕವನ್ನು ಪಾವತಿಸಿಕೊಂಡಿದ್ದರು. ಆರು ತಿಂಗಳೊಳಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಿ ಬಡಾವಣೆ ಅಭಿವೃದ್ಧಿ ಮಾಡಲಾಗುವುದೆಂದು ಉಭಯ ಜನಪ್ರತಿನಿಧಿಗಳು ಭರವಸೆ ಕೊಟ್ಟಿದ್ದರು. ಆದರೆ ಈವರೆವಿಗೂ ಈ ಭರವಸೆ ಈಡೇರಲಿಲ್ಲ ಎಂದು ಮಾಲೀಕರು ಬೇಸರ ವ್ಯಕ್ತಪಡಿಸಿದ್ದಾರೆ. ನಿವೇಶನಗಳ ಮಾಲೀಕರಲ್ಲಿ ಹೆಚ್ಚಿನವರು ಹಿರಿಯ ನಾಗರಿಕರು, ಮಧ್ಯಮ ಮತ್ತು ಕೆಳಮಧ್ಯಮ ವರ್ಗದ ಮಹಿಳೆಯರು, ಆರ್ಥಿಕವಾಗಿ ತೀವ್ರ ಸಂಕಷ್ಟದಲ್ಲಿ ಇರುವವರು ಇದ್ದಾರೆ. ತೀವ್ರ ಹಣಕಾಸಿನ ಮುಗ್ಗಟ್ಟಿನ ನಡುವೆಯೂ ಅಭಿವೃದ್ಧಿ ಉದ್ದೇಶಕ್ಕೆ ಸಹಕಾರ ನೀಡಬೇಕು ಎನ್ನುವ ಮಹಾತ್ವಾಕಂಕ್ಷೆಯಿಂದ ಹಣ ಹೊಂದಿಸಿ ಅಭಿವೃದ್ಧಿ ಶುಲ್ಕ ಪಾವತಿ ಮಾಡಿದ್ದೇವೆ. ಆದರೆ ಮೂಲ ಸೌಕರ್ಯಗಳನ್ನು ಕಲ್ಪಿಸಲಾಗಿಲ್ಲ ಎಂದು ಮನವಿಯಲ್ಲಿ ಹೇಳಿಕೊಂಡಿದ್ದಾರೆ. ರಾಮನಗರ ಉಪವಿಭಾಗಾಧಿಕಾರಿ ಕಚೇರಿ ತಹಶೀಲ್ದಾರ ಮತ್ತು ಪ್ರಾಧಿಕಾರದ ಅಧ್ಯಕ್ಷ ಚೇತನ್ ಕಚೇರಿಗೆ ಮನವಿ ಸಲ್ಲಿಸಲಾಯಿತು.

ಈ ಸಂಧರ್ಭದಲ್ಲಿ ನಿವೇಶನದಾರರಾದ ಎಂ.ಟಿ. ಶಿವಕುಮಾರ್, ಚೇತನ್‌ಕುಮಾರ್, ಬಸವಯ್ಯ, ರಾಮು ಮೊಗೇರ, ಲೀಲಾ, ರಮೇಶ್, ಹರೀಶ್, ರಾಮಕೃಷ್ಣಯ್ಯ ಮುಂತಾದವರಿದ್ದರು.



### ಬೇಡಿಕೆಗಳು ಏನೇನು?

ಬಡಾವಣೆ ಸೈನ್ ಬೋರ್ಡ್, ಬಡಾವಣೆಯ ಎಲ್ಲಾ ರಸ್ತೆಗಳಿಗೆ ಸೂಚನಾ/ಸಂಖ್ಯಾಫಲಕ ಮತ್ತು ಎಲ್ಲಾ ನಿವೇಶನಗಳಿಗೆ ಸಂಖ್ಯಾಫಲಕಗಳ ಅಳವಡಿಕೆ. ಸಂಪರ್ಕ ರಸ್ತೆ ಮತ್ತು ಎಲ್ಲಾ ಆಂತರಿಕ ರಸ್ತೆಗಳ ದುರಸ್ತೆ ಮತ್ತು ಡಾಂಬರೀಕರಣ ಹಾಗೂ ಪಾದಚಾರಿ ಸುರಕ್ಷತೆಗಾಗಿ ಪಾದಚಾರಿ ಮಾರ್ಗಗಳು. ರಸ್ತೆ ಬದಿಗಳಲ್ಲಿ ಮತ್ತು ತೆರೆದ ಪ್ರದೇಶಗಳಲ್ಲಿ ಸಸಿ ನೆಡುವಿಕೆ ಮತ್ತು ಅವುಗಳ ಪಾಲನೆ. ಸಮರ್ಪಕ ವಿದ್ಯುತ್ ಸರಬರಾಜು ಸಂಪರ್ಕ ಮತ್ತು ಬೀದಿ ದೀಪಗಳ ಅಳವಡಿಕೆ.ಸಮರ್ಪಕ ನೀರು ಸರಬರಾಜು ಜಾಲ, ಒಳಚರಂಡಿ ವ್ಯವಸ್ಥೆ ಮತ್ತು ಒಳಚರಂಡಿ ಸಂಸ್ಕರಣಾ ಘಟಕ ಸ್ಥಾಪನೆ. ಮಳೆನೀರು ಒಳಚರಂಡಿ ಮತ್ತು ಮಳೆನೀರು ಕೊಯ್ಲು ವ್ಯವಸ್ಥೆ. ವಾಕಿಂಗ್/ಜಾಗಿಂಗ್ ಟ್ರ್ಯಾಕ್, ಮಕ್ಕಳು ಆಟವಾಡುವ ಮತ್ತು ಜಿಮ್ ಉಪಕರಣಗಳ ಸ್ಥಾಪನೆ ಒಳಗೊಂಡಂತೆ ಉದ್ಯಾನವನಗಳ ಅಭಿವೃದ್ಧಿ. ಘನತ್ಯಾಜ್ಯ / ಕಸ ಸಂಗ್ರಹಣೆ ಮತ್ತು ವಿಲೇವಾರಿ ಸೌಲಭ್ಯಗಳನ್ನು ಕಲ್ಪಿಸಿಕೊಡಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

### ವಿದ್ಯುತ್ ತಂತಿಗಳ ಕಳ್ಳತನ

ಬಡಾವಣೆಯಲ್ಲಿ ಬಹುತೇಕು ವಾಸ ಮಾಡದ ಕಾರಣ ಬಡಾವಣೆ ನಿರ್ಮಿಸುವ ವೇಲೆ ಅಳವಡಿಸಲಾಗಿದ್ದ ವಿದ್ಯುತ್ ತಂತಿಗಳನ್ನು ಮತ್ತು ಕಬ್ಬಿಣದ ಉಪಕರಣಗಳು ಕಳುವಾಗಿವೆ. ವಿದ್ಯುತ್ ಪರಿವರ್ತಕಗಳಿಂದ ತೈಲ ಕಳವು ಮಾಡಲಾಗಿದೆ. ವಿದ್ಯುತ್ ಪರಿವರ್ತಕಗಳನ್ನೇ ಕಂಬಗಳಿಂದ ಕೆಳಗೆ ಇಳಿಸಲಾಗಿದೆ. ಅಲ್ಲದೇ, ಉದ್ಯಾನವನಗಳು ಮತ್ತು ಇತರ ಸಿಎ ನಿವೇಶನಗಳಿಂದ ಕಬ್ಬಿಣದ ಬೇಲಿ ಇತ್ಯಾದಿಗಳನ್ನು ಕದ್ದೊಯ್ಯಲಾಗಿದೆ. ಹಲವೆಡೆ, ನಿವೇಶನಗಳಿಗೆ ಮಾಲೀಕರು ಹಾಕಿದ್ದ ಬೇಲಿಗಳಿಂದ ತಂತಿಗಳು ಮತ್ತು ಗೇಟ್‌ಗಳನ್ನೂ ಕಳವು ಮಾಡಲಾಗಿದೆ ಎಂದು ನಿವೇಶನದಾರರು ಇದೇ ಸಂಧರ್ಭದಲ್ಲಿ ತಮ್ಮ ಬೇಸರ ವ್ಯಕ್ತಪಡಿಸಿದರು.

# ಬಿಡದಿ ಸಮಗ್ರ ನಗರ ಯೋಜನೆ ವಿರೋಧಿಸಿ ವಿಧಾನಸೌಧ ಚಲೋ

▸▸ ಪ್ರಸಾದ್ ಗೌಡ ಹೇಳಿಕೆ

**ಆರ್.ಅಶೋಕ್, ವಿಜಯೇಂದ್ರ ನೇತೃತ್ವದಲ್ಲಿ ವಿಧಾನಸೌಧ ಚಲೋ**

**ಪ್ರಧಾನಿ ಮೋದಿ ಅವರನ್ನು ಭೇಟಿ ಮಾಡಿ ವಾಸ್ತವ ಮನವರಿಕೆ**



ರಾಮನಗರ: ಬಿಡದಿ ಹೋಬಳಿಯಲ್ಲಿ ಸಮಗ್ರ ನಗರ ನಿರ್ಮಾಣಕ್ಕೆ ಭೂಸ್ವಾಧೀನದ ವಿರೋಧಿಸಿ, ವಿಧಾನಸೌಧಕ್ಕೆ ಪಾದಯಾತ್ರೆ ನಡೆಸುವುದಾಗಿ, ಯೋಜನೆಯ ವಿಚಾರದಲ್ಲಿ ಪ್ರಧಾನಿ ಮೋದಿಯವನರನ್ನ ಸಹ ಭೇಟಿಯಾಗಿ ವಾಸ್ತವವನ್ನು ಮನವರಿಕೆ ಮಾಡಿಕೊಡಲು ದೆಹಲಿ ಚಲೋ ಕೂಡು ಹಮ್ಮಿಕೊಳ್ಳುತ್ತೇವೆ ಎಂದು ಬಿಜೆಪಿ ಮಾಗಡಿ ಮಂಡಲ ಅಧ್ಯಕ್ಷ ಕೆ.ಆರ್.ಪ್ರಸಾದ್ ಗೌಡ ತಿಳಿಸಿದರು.

ತಾಲ್ಲೂಕಿನ ಬಿಡದಿ ಹೋಬಳಿ ಬೈರಮಂಗಲ ವೃತ್ತದಲ್ಲಿ ರೈತರು ನಡೆಸುತ್ತಿರುವ ಚಳವಳಿ ಸ್ಥಳಕ್ಕೆ ಭೇಟಿ ನೀಡಿದ್ದ ಅವರು ಅಲ್ಲಿಯೇ ಸುದ್ದಿಗೋಷ್ಠಿ ನಡೆಸಿ ಮಾತನಾಡಿದರು. ಈ ಭಾಗದ ಸುಮಾರು 30 ರೈತರನ್ನು ದೆಹಲಿಗೆ ಕರೆದೊಯ್ದು ಜಂತರ್ ಮಂತರ್ ನಲ್ಲಿ ಪ್ರತಿಭಟಿಸಿ ಕರ್ನಾಟಕದ ಸರ್ಕಾರದ ರೈತ ವಿರೋಧಿ ನೀತಿಯನ್ನು ದೇಶಕ್ಕೆ ತಿಳಿಸುವ ಕೆಲಸ ಮಾಡುತ್ತೇವೆ ಎಂದರು.

ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರ ಬಿಡದಿ ಟೌನ್ ಶಿಪ್ ಯೋಜನೆ ಹೆಸರಿನಲ್ಲಿ ರೈತರ ಪಾಲಿಗೆ ಮರಣ ಶಾಸನ ಬರೆಯಲು ಹೊರಟಿದೆ. ಜೆಡಿಎಸ್ ಮತ್ತು ಬಿಜೆಪಿ ಜಂಟಿಯಾಗಿ ಇದರ ವಿರುದ್ಧ ವಿಪಕ್ಷ ನಾಯಕ ಆರ್.ಅಶೋಕ್ ಮತ್ತು ತಮ್ಮ ಪಕ್ಷದ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರ ನೇತೃತ್ವದಲ್ಲಿ ವಿಧಾನಸೌಧ ಚಲೋ ಜೊತೆಗೆ ದೆಹಲಿ ಚಲೋ ಕೂಡ ನಡೆಸಲಿದ್ದೇವೆ ಎಂದರು.

ರಾಜ್ಯ ಸರ್ಕಾರ ಉದ್ದೇಶಿರುವ ಬಿಡದಿ ಸಮಗ್ರ ನಗರ ನಿರ್ಮಾಣ ಯೋಜನೆಯ ಭೂಸ್ವಾಧಿನಕ್ಕೆ ಗುರುತಾಗಿರುವ ಸ್ಥಳವನ್ನು ಡ್ರೋಣ್ ಮೂಲಕ ಚಿತ್ರೀಕರಿಸಿ ಇಲ್ಲಿನ ಹಸಿರು ಪ್ರದೇಶವನ್ನು ವಿಡಿಯೋ ಮಾಡಿಸಿ ದಾಖಲೆ ಸಮೇತ ಪ್ರಧಾನಿ ಮೋದಿ ಅವರಿಗೆ ರೈತರ ಮೂಲಕವೇ ಮನವಿ ಸಲ್ಲಿಸುತ್ತೇವೆ. ಇದಕ್ಕಾಗಿ ಸಂಸದ ಡಾ.ಸಿ.ಎನ್. ಮಂಜುನಾಥ್ ರವರು ರೈತರೊಂದಿಗೆ ಪ್ರಧಾನಿ ಮೋದಿ ಅವರನ್ನು ಭೇಟಿಯಾಗಲು ಸಮಯ ಅವಕಾಶ ಕೇಳಿದ್ದಾರೆ ಎಂದು ಹೇಳಿದರು.

### ಡಿಕೆಶಿ ಹಠ ರೈತರನ್ನು ಬೀದಿಯಲ್ಲಿ ಕೂರಿಸಿದೆ

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರವರ ಹಠ ರೈತರನ್ನು ಬೀದಿಯಲ್ಲಿ ಕೂರಿಸಿದೆ. ಕಳೆದ 460 ದಿನಗಳಿಂದ ಅನ್ನದಾತರು ಹೋರಾಟ ನಡೆಸುತ್ತಿದ್ದರೂ ಕನಿಕರ, ಕರುಣೆ ಬಂದಿಲ್ಲ. ಮುಖ್ಯಮಂತ್ರಿಯಾದವರು ನಾಡಿನ ಪ್ರತಿಯೊಬ್ಬ ಪ್ರಜೆಯ ಸುಖ ಬಯಸಬೇಕು. ಆದರೆ, ಡಿಕೆಶಿ ಹಠ ಸಾಧನೆ ಮಾಡಲೇ ಬೇಕೆಂದು ರೈತರನ್ನು ಒಕ್ಕಲೆಬ್ಬಿಸಲು ಹೊರಟಿದ್ದಾರೆ. ಇದಕ್ಕೆ ಯಾವುದೇ ಕಾರಣಕ್ಕೂ ಅವಕಾಶ ಕೊಡುವುದಿಲ್ಲ ಎಂದರು.

### ಕಾಂಗ್ರೆಸ್ ವಿರುದ್ಧ ರಿಯಲ್ ಎಸ್ಟೇಟ್ ದಂಧೆ

ಟೌನ್ ಶಿಪ್ ಯೋಜನೆ ಹೆಸರಿನಲ್ಲಿ ಕಾಂಗ್ರೆಸ್ ಸರ್ಕಾರ ರಿಯಲ್ ಎಸ್ಟೇಟ್ ದಂಧೆ ಬಿಟ್ಟು ಬೇರೇನೂ ಮಾಡುತ್ತಿಲ್ಲ. ಅ?ಟ್ಕೂ ಟೌನ್ ಶಿಪ್ ಮೂಲಕ ಎ?ಟ್ಟು ಉದ್ಯೋಗ ಸೃಷ್ಟಿ ಮಾಡುತ್ತಾರೆ ಎಂಬುದರ ಸ್ಪ?ತೆ ಇಲ್ಲ. ಈ ಹಿಂದೆ ಗೂಗಲ್ ತನ್ನ ಎಐ ಹಬ್ ಅನ್ನು ಕರ್ನಾಟಕದಲ್ಲಿ ಸ್ಥಾಪಿಸಲು 1 ಲಕ್ಷ 30 ಕೋಟಿ ಹೂಡಿಕೆಗೆ ಮುಂದಾಗಿತ್ತು. ಅದು ಆಂಧ್ರಪ್ರದೇಶದ ಪಾಲಾಯಿತು. ಅದನ್ನೇ ಉಳಿಸಿಕೊಳ್ಳಲಾಗದವರು ಎಐ ಸಿಟಿ ನಿರ್ಮಿಸುತ್ತಾರೆಯೇ ಎಂದು ವ್ಯಂಗ್ಯವಾಡಿದರು.

ಟೌನ್ ಶಿಪ್ ವಿರೋಧ ಮಾಡುತ್ತಿರುವವರು ರೈತರೇ ಅಲ್ಲವೆಂದು ಹೇಳುತ್ತೀರಾ. ಇಲ್ಲಿನ ರೈತರು ವ್ಯವಸಾಯ ಮಾಡುತ್ತಿರುವುದನ್ನು ಎಂದಾದರು ನೋಡಿದ್ದೀರಾ. ಸಹಸ್ರಾರು ರೈತ ಕುಟುಂಬಗಳು ಹೈನುಗಾರಿಕೆ ಅವಲಂಬಿಸಿದ್ದು, ತಿಂಗಳಿಗೆ 6 ಲಕ್ಷ ಲೀಟರ್ ಹಾಲು ಉತ್ಪಾದನೆ ಆಗುತ್ತಿದೆ. ಲಕ್ಷಾಂತರ ಗಿಡ ಮರಗಳಿವೆ. ಅವೆಲ್ಲವನ್ನು ಬಲಿ ಕೊಡಲು ಮುಂದಾಗಿರುವ ನಿಮಗೆ ಭಗವಂತ ಒಳ್ಳೆಯದು ಮಾಡಲ್ಲ ಎಂದು ಕಿಡಿಕಾರಿದರು.

### ಭೂ ಕಬಳಿಕೆ ಮಾಹಿತಿ ಸದ್ಯದಲ್ಲೇ ಬಿಡುಗಡೆ

ಟೌನ್ ಶಿಪ್ ಹೆಸರಿನಲ್ಲಿ ರಿಯಲ್ ಎಸ್ಟೇಟ್ ದಂಧೆಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರೇ ಮುಂದಾಗಿದ್ದಾರೆ. ಅವರ ಬೆಂಬಲಿಗರು ಭೂ ಕಬಳಿಕೆ ಮಾಡಿರುವ ಮಾಹಿತಿ ಇದ್ದು, ಅದನ್ನು ಶೀಘ್ರದಲ್ಲಿಯೇ ಬಿಡುಗಡೆ ಮಾಡುತ್ತೇನೆ. ಪ್ರಾರಂಭದಲ್ಲಿ 2600 ಎಕರೆ ಇದ್ದ ಸರ್ಕಾರಿ ಗೋಮಾಳ 750 ಎಕರೆಗೆ ಬಂದಿದೆ. ಅ?ಟ್ಟು ಭೂಮಿ ಏನಾಯಿತು ಎಂಬುದರ ಬಗ್ಗೆ ತನಿಖೆ ಆಗಬೇಕು ಎಂದು ಒತ್ತಾಯಿಸಿದರು.

ಮುಖ್ಯಮಂತ್ರಿಗಳು ಭ್ರ?ಟಚಾರ ಮುಕ್ತ ರಾಜ್ಯ ನಿರ್ಮಾಣ ಮಾಡುವುದಾಗಿ ಹೇಳಿ, ಫೋನ್ ನಂಬರ್ ಕೂಡ ಕೊಟ್ಟಿದ್ದಾರೆ. ಆದರೆ ಇಲ್ಲಿ ಮುಖ್ಯಮಂತ್ರಿಗಳೇ ಸಾವಿರಾರು ಕೋಟಿ ರು.ಗಳ ಭ್ರ?ಟಚಾರ ಮಾಡುತ್ತಿದ್ದಾರೆ ಹೀಗಿರುವಾಗ ನಾವು ಯಾರಿಗೆ ಫೋನ್ ಮಾಡಿ ತನಿಖೆ ಮಾಡಬೇಕೆಂದು ಹೇಳಬೇಕು ಎಂದು ವ್ಯಂಗ್ಯವಾಡಿದರು.

ಭೂ ಸ್ವಾಧೀನ ನಿಲ್ಲಿಸದಿದ್ದರೆ ರಕ್ತ ಕೊಟ್ಟಾದರೂ ಭೂಮಿ ಉಳಿಸಿಕೊಳ್ಳುತ್ತೇವೆ ಎಂದು ಪ್ರಸಾದ್ ಗೌಡ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಬೈರಮಂಗಲ – ಕಂಚುಗಾರನಹಳ್ಳಿ ಗ್ರಾಮ ಪಂಚಾಯಿತಿಗಳ ರೈತರ ಭೂ ಹಿತರಕ್ಷಣಾ ಸಂಘದ ಅಧ್ಯಕ್ಷ ರಾಮಯ್ಯ, ರೈತ ಮುಖಂಡರಾದ ಶ್ರೀನಿವಾಸ ರೆಡ್ಡಿ, ನಾಗರಾಜು ಮಂಡಲಹಳ್ಳಿ, ಪಾರ್ಥಸಾರಥಿ, ಶಿವನಂಜಯ್ಯ, ಪ್ರಸನ್ನ ಕುಮಾರ್ , ಹಾರೋಹಳ್ಳಿ ಕೃ? ಮತ್ತಿತರರು ಇದ್ದರು.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ಸಿರಿಧಾನ್ಯ ಉಪಯೋಗದಿಂದ ಆರೋಗ್ಯ



**ಎಚ್.ಡಿ.ಕೋಟೆ:** ಮಾನವ ಆಧುನಿಕತೆಗೆ ಹೊಂದಿಕೊಂಡಂತೆ ಅನಾರೋಗ್ಯಕ್ಕೆ ತುತ್ತಾಗುತ್ತಿದ್ದಾನೆ. ಇತ್ತೀಚೆಗೆ ಆಹಾರ ಪದಾರ್ಥಗಳು ಕಲುಷಿತಗೊಂಡಿವೆ ಆದ್ದರಿಂದ, ಆರೋಗ್ಯ ಸಮಸ್ಯೆಗಳು ಕಾಡುತ್ತಿವೆ. ಸಿರಿಧಾನ್ಯ ಬಳಸುವುದರಿಂದ ಆರೋಗ್ಯಕರ ಜೀವನ ನಡೆಸಬಹುದು ಎಂದು ಪುರಸಭೆ ಮಾಜಿ ಸದಸ್ಯ ಮಿಲ್ ನಾಗರಾಜು ಅಭಿಪ್ರಾಯಪಟ್ಟರು.

ಸಮತಾ ಟ್ರಸ್ಟ್, ಸ್ವರಾಲಯ ಮ್ಯೂಸಿಕ್, ಗಾನವಿ ಮೆಡಿಕಲ್, ನಂಬಿಕೆ ಸಿರಿಧಾನ್ಯ ಪ್ರಾಡಕ್ಟ್, ಆರೋಗ್ಯ ಇಲಾಖೆ ಸಹಯೋಗದಲ್ಲಿ ನಾಲ್ವಡಿಕೃಷ್ಣರಾಜ ಒಡೆಯರ್ ಜಯಂತಿ ಪ್ರಯುಕ್ತ ಪುರಸಭೆ ಆವರಣದಲ್ಲಿ ನಡೆದ ಪೌರಕಾರ್ಮಿಕರಿಗೆ ಆರೋಗ್ಯ ತಪಾಸಣೆ ಶಿಬಿರದಲ್ಲಿ ಮಾತನಾಡಿದರು.

ಇತ್ತೀಚೆಗೆ ರಾಸಾಯನಿಕ ಗೊಬ್ಬರಗಳನ್ನು ಬಳಸದೆ, ಬೆಳೆಗಳನ್ನು ಬೆಳೆಯಲಾರದ ಅನಿವಾರ್ಯ ಪರಿಸ್ಥಿತಿಗೆ ಬಂದಿದ್ದೇವೆ. ಇದರಿಂದ ಬಿ.ಪಿ, ಶುಗರ್, ಕೊಲೆಸ್ಟ್ರಾಲ್ ನಿಂದ ಪ್ರಾರಂಭವಾಗುವ ಆರೋಗ್ಯ ಸಮಸ್ಯೆಗಳು, ಕಿಡ್ನಿ ವೈಫಲ್ಯ, ಕ್ಯಾನ್ಸರ್ ಸೇರಿದಂತೆ ಮಾರಣಾಂತಿಕ ಕಾಯಿಲೆಗಳ ಆಹ್ವಾನಕ್ಕೆ ದಾರಿ ಮಾಡಿಕೊಡುತ್ತವೆ. ಗಾಣದ ಎಣ್ಣೆ, ಸಿರಿಧಾನ್ಯ, ದೇಸಿ ಆಹಾರಗಳನ್ನು ಉಪಯೋಗಿಸುವುದರಿಂದ ಆರೋಗ್ಯವಾಗಿ ಇರಬಹುದು ಎಂದು ತಿಳಿಸಿದರು. ಶಿಬಿರದಲ್ಲಿ ಪೌರಕಾರ್ಮಿಕರು ಹಾಗೂ ಕುಟುಂಬಸ್ಥರು ಆರೋಗ್ಯ ತಪಾಸಣೆ ಮಾಡಿಸಿಕೊಂಡರು.

ತಾಲೂಕು ಆರೋಗ್ಯಾಧಿಕಾರಿ ಟಿ.ರವಿಕುಮಾರ್ ಮಾತನಾಡಿ, ಆರೋಗ್ಯವಾಗಿ ಇರಬೇಕೆಂದರೆ ಸ್ವಚ್ಛತೆ ಬಹಳ ಮುಖ್ಯ. ಸ್ವಚ್ಛತೆ ಕಾಪಾಡುವ ನಿಟ್ಟಿನಲ್ಲಿ ಕಾರ್ಮಿಕರ ಪಾತ್ರ ಬಹಳ ದೊಡ್ಡದು. ಪೌರಕಾರ್ಮಿಕರ ಆರೋಗ್ಯವೂ ಬಹಳ ಮುಖ್ಯ. ಪ್ರತಿ ಆರು ತಿಂಗಳಿಗೊಮ್ಮೆ ಪೌರಕಾರ್ಮಿಕರಿಗೆ ಆರೋಗ್ಯ ತಪಾಸಣೆ ನಡೆಸಲಾಗುವುದು ಎಂದರು. ಪುರಸಭೆ ಮುಖ್ಯಾಧಿಕಾರಿ ಪಿ. ಸುರೇಶ್, ಸಮತಾ ಟ್ರಸ್ಟ್ ಅಧ್ಯಕ್ಷ ಎಂ.ಬಿ.ರವೀಂದ್ರ, ಹಾಗೂ ತಾಲೂಕು ಆದಿ ಕರ್ನಾಟಕ. ಮಹಾಸಭಾ ಅಧ್ಯಕ್ಷ ಹೈರಿಗೆ ಶಿವರಾಜು, ಮುಖಂಡರಾದ ಭೀಮನಹಳ್ಳಿ ಸೋಮೇಶ್, ಕುಮಾರಸ್ವಾಮಿ, ಮರಲಿಂಗಯ್ಯ, ಸ್ವರಾಲಯ ಮ್ಯಾಜಿಕಲ್ ಟ್ರಸ್ಟ್ ಅಧ್ಯಕ್ಷ ಸಿದ್ದರಾಜು, ನಂಬಿಕೆ ಪ್ರಾಡೆಕ್ಟ್ ನ ಮ್ಯಾನೇಜರ್ ಕೃಷಯ್ಯ ಸೇರಿದಂತೆ ಅನೇಕರು ಇದ್ದರು.

# ಅಭಿವೃದ್ಧಿ ಕಾಮಗಾರಿಗೆ ಗುದ್ದಲಿಪೂಜೆ

ಚಾಮರಾಜನಗರ, ಮೂಡಲಮೋಳೆ ಗ್ರಾಮಕ್ಕೆ ಶಾಸಕ ಸಿ.ಪುಟ್ಟರಂಗಶೆಟ್ಟಿ ಭೇಟಿ? ನಿವಾಸಿಗಳಿಂದ ಅಹವಾಲು ಸ್ವೀಕಾರ. ವಿಶೇಷ ಅಭಿವೃದ್ಧಿ ಯೋಜನೆಯಡಿ 50 ಲಕ್ಷ ರೂ.ವೆಚ್ಚದಲ್ಲಿ ಮೂಡಲಮೋಳೆಯಿಂದ ದೊಡ್ಡರಾಯಪೇಟೆ ಗ್ರಾಮ ಸಂಪರ್ಕ ಮುಖ್ಯರಸ್ತೆ ಅಭಿವೃದ್ಧಿ ಕಾಮಗಾರಿಗೆ ಶಾಸಕ ಸಿ,ಪುಟ್ಟರಂಗಶೆಟ್ಟಿ ಗುದ್ದಲಿಪೂಜೆ ನೆರವೇರಿಸಿದರು.

ಇದೇವೇಳೆ ಅವರು ಮಾತನಾಡಿ, ಮಳೆಯಾದಲ್ಲಿ ರಸ್ತೆಯಲ್ಲಿ ನೀರುನಿಂತು, ಜನರು ಓಡಾಡಲು ತೊಂದರೆಯಾಗುತ್ತಿದೆ ಎಂದು ನಿವಾಸಿಗಳು ತಮಗೆ ಅಹವಾಲು ಸಲ್ಲಿಸಿದ್ದರು. ನಿವಾಸಿಗಳ ಅಹವಾಲಿಗೆ ಸ್ಪಂದಿಸಿ ಇಂದು ಮುಖ್ಯರಸ್ತೆ ನಿರ್ಮಾಣ ಕಾಮಗಾರಿಗೆ ಗುದ್ದಲಿಪೂಜೆ ನೆರವೇರಿಸಿದ್ದೇನೆ. ಗುತ್ತಿಗೆದಾರರು ನಿಗಧಿತ ಅವಧಿಯಲ್ಲಿ ಕಾಮಗಾರಿ ಪೂರ್ಣಗೊಳಿಸಿ, ಸಾರ್ವಜನಿಕರಿಗೆ ಲೋಕಾರ್ಪಣೆ ಮಾಡಬೇಕು ಎಂದು ಸಲಹೆ ನೀಡಿದರು. ಸ್ಮಶಾನಕ್ಕೆ ತೆರಳುವ ರಸ್ತೆಗೆ ಸೂಕ್ತ ಅನುದಾನ ಮಂಜೂರುಮಾಡಿಸಿ, ಅಭಿವೃದ್ಧಿಪಡಿಸಿಕೊಡಬೇಕು ಎಂದು ಇದೇ ಸಂದರ್ಭದಲ್ಲಿ ನಿವಾಸಿಗಳು ಶಾಸಕರಿಗೆ ಮನವಿ ಮಾಡಿದರು. ನೂತನವಾಗಿ ರಸ್ತೆ ನಿರ್ಮಾಣಮಾಡಲು ರಸ್ತೆ ಪರಿಶೀಲನೆ ಮಾಡಿದರು. ಈ ಸಂದರ್ಭದಲ್ಲಿ ಚಂದ್ರ, ನಾಗರಾಜು, ಮಹದೇವಶೆಟ್ಟಿ, ಚಂದ್ರಶೇಖರ್, ಸಿದ್ದರಾಜು, ಗಿರೀಶ, ಶಂಕರ್, ಲಕ್ಷಣ್ಣ, ಚಿಕ್ಕಮ್ಮ, ಚಿನ್ನಸ್ವಾಮಿ, ಮಲ್ಲೇಶ್, ಸೋಮು, ಕೆಆರ್‌ಡಿಎಲ್ ಎಂಜಿನಿಯರ್ ಮಧು ಸೇರಿದಂತೆ ಗ್ರಾಮಸ್ಥರು ಹಾಜರಿದ್ದರು.



# ಜೂ.17, 18ರಂದು ಜಿಲ್ಲಾ ಪ್ರವಾಸ

ಚಾಮರಾಜನಗರ, ಕರ್ನಾಟಕ ರಾಜ್ಯ ಪಶ್ಚಿಮಘಟ್ಟ ಸಂರಕ್ಷಣಾ ಕಾರ್ಯಪಡೆ ಸಮಿತಿ ಅಧ್ಯಕ್ಷರಾದ ಮೊಹಮ್ಮದ ತಬ್ರೇಜ್ ಆಲಂ ಶರೀಫ್ ಅವರು ಜೂನ್ 17 ಹಾಗೂ 18ರಂದು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಜೂನ್ 17ರಂದು ಬೆಳಿಗ್ಗೆ 11 ಗಂಟೆಗೆ ಚಾಮರಾಜನಗರಕ್ಕೆ ಆಗಮಿಸಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾಧಿಕಾರಿಗಳ ಉಪಸ್ಥಿತಿಯಲ್ಲಿ ಗೋಪಿನಾಥಂ ತಮಿಳುನಾಡು ಗಡಿಗೆ ಹೊಂದಿಕೊಂಡ ಕಾವೇರಿ ನದಿಯ ಪರಿಸರದ ವನವಾಸಿಗರು, ಸೋಲಿಗ ಬುಡಕಟ್ಟು ಜನಾಂಗ ಇತರೆ ಹಳ್ಳಿಗಳ ಸಮಸ್ಯೆ ಪರಿಹಾರ ಇತ್ಯಾದಿ ಸಂಬಂಧ ಸಭೆ ಸಮಾಲೋಚನೆ ನಡೆಸುವರು. ಸಂಜೆ 4 ಗಂಟೆಗೆ ಮಾಜಿ ರಾಜ್ಯಪಾಲರು ಹಾಗೂ ಮಾಜಿ ಸಚಿವರಾದ ಬಿ. ರಾಚಯ್ಯ ರವರ ಸ್ಮಾರಕಕ್ಕೆ ತೆರಳಿ ಶಾಸಕರಾದ ಎ.ಆರ್. ಕೃಷ್ಣಮೂರ್ತಿ ರವರ ಉಪಸ್ಥಿತಿಯೊಂದಿಗೆ ಪುಷ್ಪಮಾಲೆ ಗೌರವ ಸಮರ್ಪಣೆ ಮಾಡುವರು. ಬಳಿಕ ಬಿಳಿಗಿರಿರಂಗನಬೆಟ್ಟಕ್ಕೆ ತೆರಳಿ ವಾಸ್ತವ್ಯ ಹೂಡುವರು. ಜೂನ್ 18ರಂದು ಬೆಳಿಗ್ಗೆ 10.15 ಗಂಟೆಗೆ ಶ್ರೀ ರಂಗನಾಥಸ್ವಾಮಿ ದೇವರ ದರ್ಶನ, ಸುತ್ತಲಿನ ಪರಿಸರ ಪರಿಶೀಲಿಸುವರು. ಅರ್ಚಕರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹಾಗೂ ಅರಣ್ಯ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸುವರು. ಮಧ್ಯಾಹ್ನ 12 ಗಂಟೆಗೆ ಅರಣ್ಯ ಅಧಿಕಾರಿಗಳ ಕಚೇರಿಯಲ್ಲಿ ಸೋಲಿಗ ಬುಡಕಟ್ಟು ಜನಾಂಗ, ಕಾಡು ಕುರುಬರ ಕಾಡಂಚಿನ ಸಮಸ್ಯೆಗಳ ಬಗ್ಗೆ ಅರಣ್ಯ ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸುವರು. ಅರಣ್ಯ ಅಧಿಕಾರಿಗಳೊಂದಿಗೆ ಇತರೆ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲಿಸುವರು. ಮಧ್ಯಾಹ್ನ 3 ಗಂಟೆಗೆ ಬೆಂಗಳೂರಿಗೆ ತೆರಳುವರು ಎಂದು ಪ್ರಕಟಣೆ ತಿಳಿಸಿದೆ.

# 18ರಿಂದ ಗಿರಿಜಾ ಕಲ್ಯಾಣ ಮಹೋತ್ಸವ

ಚಾಮರಾಜನಗರ, ನಗರದ ಶ್ರೀ ಚಾಮರಾಜೇಶ್ವರಸ್ವಾಮಿ ದೇವಸ್ಥಾನದಲ್ಲಿ ಶ್ರೀ ಕೆಂಪನಂಜಾಂಬಾ ಅಮ್ಮನವರ ಸಮೇತ ಶ್ರೀ ಚಾಮರಾಜೇಶ್ವರಸ್ವಾಮಿಯವರಿಗೆ ಬೆಳೆಯತಕ್ಕ ಶ್ರೀ ಗಿರಿಜಾ ಕಲ್ಯಾಣ ಮಹೋತ್ಸವ ಕಾರ್ಯಕ್ರಮವು ಜೂನ್ 18 ರಿಂದ 23ರವರೆಗೆ ನಡೆಯಲಿದ್ದು, ಇದರ ಅಂಗವಾಗಿ ವಿವಿಧ ಪೂಜಾ ಕೈಂಕರ್ಯಗಳು ಜರುಗಲಿವೆ.



ಜೂನ್ 18ರಂದು ಸಂಜೆ 6 ಗಂಟೆಗೆ ಅನುಜ್ಞಾಪೂರ್ವಕ ಎಣ್ಣೆ ಅರಿಶಿನ ಪ್ರಧಾನ ನಂತರ ರಾತ್ರಿ 8 ಗಂಟೆಗೆ ವರಪೂಜಾ ಮಹೋತ್ಸವ, 19ರಂದು ಪಂಚಮಿ ಪ್ರಾತಃಕಾಲ 10 ಗಂಟೆಗೆ ಅಂಕುರಾರ್ಪಣ ಪೂರ್ವಕ ಕನ್ನಡಿ ಕಲಶ ತರುವುದು. ನಂತರ ಮಂಗಳಸ್ನಾನ ಬೆಳೆದು ನಾಂದಿ ನಡೆದು ಗ್ರಹಯಜ್ಞ ಪ್ರಾರಂಭವಾಗಿ ಸಂಜೆ 5 ಗಂಟೆಗೆ ಕಾಶಿಯಾತ್ರೆ ಮಹೋತ್ಸವವು ಬೆಳೆಯುತ್ತದೆ. ಅನಂತರ ರಾತ್ರಿ 8 ರಿಂದ 8.36 ಗಂಟೆಯವರೆಗೆ ಸಲ್ಲುವ ಶುಭ ಧನುರ್ ಲಗ್ನದಲ್ಲಿ ಅಕ್ಷತಾರೋಪಣೆ, ಧಾರಾಮಹೋತ್ಸವ, ಪ್ರಧಾನಹೋಮ, ಮಹಾಮಂಗಳಾರತಿ ನಡೆಯಲಿದೆ.

ಜೂನ್ 20ರಂದು ಷಷ್ಠಿ ಪ್ರಾತಃಕಾಲ ಔಪಾಸನೆ ಉರುಟಣೆ ಉಯ್ಯಾಲೋತ್ಸವವು ರಾತ್ರಿ ಔಪಾಸನೆ ಉಯ್ಯಾಲೋತ್ಸವ, 21 ರಂದು ಸಪ್ತಮಿ ಪ್ರಾತಃಕಾಲ ಔಪಾಸನೆ ಉರುಟಣೆ ಉಯ್ಯಾಲೋತ್ಸವವು ರಾತ್ರಿ ಔಪಾಸನೆ ಪಾಕಿನಿ ಮಹೋತ್ಸವವೂ ಇತ್ಯಾದಿ ಕಾರ್ಯಕ್ರಮಗಳು ನಡೆಯಲಿದೆ. 22 ರಂದು ಅಷ್ಟಮಿ ಪ್ರಾತಃಕಾಲ ಔಪಾಸನೆ ಉರುಟಣೆ ಉಯ್ಯಾಲೋತ್ಸವವು ರಾತ್ರಿ ಔಪಾಸನೆ ಶೇಷ ಹೋಮ, ನಾಕಬಲಿ, ಹೊಳಲು ಸುತ್ತುವುದು ಗಜಾರೋಹಣ ಪೂಜೆ, ಗೃಹಪ್ರವೇಶ ಮಹೋತ್ಸವ ಹಾಗೂ 23ರಂದು ನವಮಿ ಪ್ರಾತಃಕಾಲ ದೇವತಾ ಉದ್ವಾಸನೆ, ವಿವಾಹ ದೀಕ್ಷಾ ವಿಸರ್ಜನೆ ಆನಂತರ ಸ್ಥಂಭ ಪೂಜಾ ರಾತ್ರಿ ಪು??ಪಂದೋಳಿಕೋತ್ಸವ, ಶಯನೋತ್ಸವವೂ ನಡೆಯುತ್ತದೆ. ಪ್ರತಿದಿನ ಸಂಜೆ ಸಂಗೀತ, ಹರಿಕಥೆ, ಇತ್ಯಾದಿ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಸಡಗರದ ಆಚರಣೆಗೆ ಪೂರ್ವಭಾವಿ ಸಭೆ ನಿರ್ಧಾರ

# ಜೂ.30ರಂದು ಚಾ.ನಗರದಲ್ಲಿ ನಾಡಪ್ರಭು ಕೆಂಪೇಗೌಡ ಜಯಂತಿ

ಚಾಮರಾಜನಗರ: ಬೆಂಗಳೂರಿನ ಭವ್ಯ ನಿರ್ಮಾತೃ ನಾಡಪ್ರಭು ಕೆಂಪೇಗೌಡ ಅವರ ಜಯಂತಿ ಕಾರ್ಯಕ್ರಮವನ್ನು ನಗರದಲ್ಲಿ ಇದೇ ಜೂನ್ 30ರಂದು ಅತ್ಯಂತ ಸಡಗರ, ಸಂಭ್ರಮದಿಂದ ಆಚರಿಸಲು ನಿರ್ಧರಿಸಲಾಗಿದೆ.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿ ಟಿ.ಜವರೇಗೌಡ ಇವರ ಅಧ್ಯಕ್ಷತೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ಕೆಂಪೇಗೌಡ ಜನ್ಮದಿನಾಚರಣೆಯ ಪೂರ್ವಭಾವಿ ಸಭೆಯಲ್ಲಿ ಈ ಮಹತ್ವದ ತೀರ್ಮಾನ ಕೈಗೊಳ್ಳಲಾಯಿತು. ಕಾರ್ಯಕ್ರಮವನ್ನು ಅತ್ಯಂತ ಅಚ್ಚುಕಟ್ಟಾಗಿ ಮತ್ತು ಅರ್ಥಪೂರ್ಣವಾಗಿ ಆಯೋಜಿಸುವ ನಿಟ್ಟಿನಲ್ಲಿ ಸಭೆಯಲ್ಲಿದ್ದ ಸಮುದಾಯದ ಮುಖಂಡರು ಹಾಗೂ ವಿವಿಧ ಸಂಘ–ಸಂಸ್ಥೆಗಳ ಪ್ರತಿನಿಧಿಗಳಿಂದ ಸಲಹೆ ಮತ್ತು ಅಭಿಪ್ರಾಯಗಳನ್ನು ಆಲಿಸಲಾಯಿತು.

### ವಿದ್ಯಾರ್ಥಿಗಳಿಗೆ ಸ್ಪರ್ಧೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳ ಆಯೋಜನೆ

ನಾಡಪ್ರಭು ಕೆಂಪೇಗೌಡ ಅವರ ಅಪ್ರತಿಮ ಜೀವನ ಸಾಧನೆ ಮತ್ತು ಅವರ ಅಭಿವೃದ್ಧಿಪರ ಚಿಂತನೆಗಳನ್ನು ಇಂದಿನ ಯುವ ಪೀಳಿಗೆಗೆ ಮತ್ತು ಶಾಲಾ ಮಕ್ಕಳಿಗೆ ಪರಿಚಯಿಸುವ ಉದ್ದೇಶದಿಂದ ಶಾಲಾ–ಕಾಲೇಜು ವಿದ್ಯಾರ್ಥಿಗಳಿಗೆ ವಿಶೇಷ ಭಾಷಣ ಹಾಗೂ ಪ್ರಬಂಧ ಸ್ಪರ್ಧೆಗಳನ್ನು ಏರ್ಪಡಿಸಬೇಕು ಎಂದು ಮುಖಂಡರು ಸಭೆಯಲ್ಲಿ ಒತ್ತಾಯಿಸಿದರು. ಮುಖ್ಯ ಕಾರ್ಯಕ್ರಮದಲ್ಲಿ ಕೆಂಪೇಗೌಡರ ದೂರದೃಷ್ಟಿಯ ಆಡಳಿತದ ಕುರಿತು ಬೆಳಕು ಚೆಲ್ಲುವಂತಹ ಪ್ರಖರ ಭಾಷಣಕಾರರನ್ನು ಆಹ್ವಾನಿಸಬೇಕು ಹಾಗೂ ಸಭಾ ಕಾರ್ಯಕ್ರಮ ಆರಂಭವಾಗುವ ಮುನ್ನ ವೇದಿಕೆಯಲ್ಲಿ ಸ್ಥಳೀಯ ಕಲಾವಿದರಿಂದ ಸುಗಮ ಸಂಗೀತ ಮತ್ತು ಗಾಯನ ಕಾರ್ಯಕ್ರಮ ಇರಬೇಕು ಎಂದು ಸಲಹೆ ನೀಡಿದರು. ಈ ಎಲ್ಲಾ ಪ್ರಮುಖ ಸಲಹೆಗಳನ್ನು ಜಿಲ್ಲಾಡಳಿತವು ಧನಾತ್ಮಕವಾಗಿ ಸ್ವೀಕರಿಸಿದೆ.



### ಶಿಷ್ಟಾಚಾರದಂತೆ ಆಮಂತ್ರಣ ಮತ್ತು ಅಧಿಕಾರಿಗಳ ಕಡ್ಡಾಯ ಹಾಜರಾತಿಗೆ ಆದೇಶ

ಸಭೆಯನ್ನುದ್ದೇಶಿಸಿ ಮಾತನಾಡಿದ ಹೆಚ್ಚುವರಿ ಜಿಲ್ಲಾಧಿಕಾರಿ ಟಿ. ಜವರೇಗೌಡ ಅವರು, ಜೂನ್ 30ರಂದು ಬೆಳಿಗ್ಗೆ 11 ಗಂಟೆಗೆ ನಗರದ ವರನಟ ಡಾ. ರಾಜ್‌ಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ಮುಖ್ಯ ಸಮಾರಂಭ ನಡೆಯಲಿದೆ ಎಂದರು. ಸರ್ಕಾರದ ಶಿಷ್ಟಾಚಾರದ ಪ್ರಕಾರವೇ ಆಹ್ವಾನ ಪತ್ರಿಕೆಗಳನ್ನು ಮುದ್ರಿಸಿ ಜಿಲ್ಲೆಯ ಎಲ್ಲಾ ಜನಪ್ರತಿನಿಧಿಗಳನ್ನು ಗೌರವಪೂರ್ವಕವಾಗಿ ಆಹ್ವಾನಿಸಲಾಗುವುದು. ವಿದ್ಯಾರ್ಥಿಗಳಿಗೆ ನಡೆಸುವ ಸ್ಪರ್ಧೆಗಳಲ್ಲಿ ವಿಜೇತರಾದ ಮಕ್ಕಳಿಗೆ ಅಂದೇ ವೇದಿಕೆಯಲ್ಲಿ ಪ್ರಮಾಣ ಪತ್ರ ಹಾಗೂ ಬಹುಮಾನ ವಿತರಿಸಲಾಗುವುದು. ಕಾರ್ಯಕ್ರಮದ ದಿನದಂದು ರಂಗಮಂದಿರವನ್ನು ತಳಿರುರಣಗಳಿಂದ ಭವ್ಯವಾಗಿ ಸಿಂಗರಿಸಬೇಕು ಹಾಗೂ ಜಿಲ್ಲಾ ಮತ್ತು ತಾಲೂಕು ಮಟ್ಟದ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಈ ಜಯಂತ್ಯುತ್ಸವದಲ್ಲಿ ಕಡ್ಡಾಯವಾಗಿ ಭಾಗವಹಿಸಬೇಕು ಎಂದು ಸಂಬಂಧಪಟ್ಟ ಇಲಾಖಾಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಈ ಉನ್ನತ ಮಟ್ಟದ ಪೂರ್ವಭಾವಿ ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ರಾಜು, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ವೆಂಕಟೇಶ್, ನಗರಸಭೆ ಪೌರಾಯುಕ್ತ ಪರಶುರಾಮ ಎಂ. ಛಲವಾದಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಚಿದಂಬರ ಹಾಗೂ ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ಸುಷ್ಮಾ ಉಪಸ್ಥಿತರಿದ್ದರು. ಇವರೊಂದಿಗೆ ಸಮುದಾಯದ ಪ್ರಮುಖ ಮುಖಂಡರಾದ ಸುದರ್ಶನಗೌಡ, ಚ?.ರಂ. ಶ್ರೀನಿವಾಸಗೌಡ, ಪುಟ್ಟಸ್ವಾಮಿಗೌಡ, ಸಿ.ಬಿ. ನಾಗೇಂದ್ರೇಗೌಡ, ವೆಂಕಟರಮಣಸ್ವಾಮಿ ಪಾಪು, ಪಣ್ಯದಹುಂಡಿ ರಾಜು, ಚಿನ್ನಮುತ್ತು, ಮಹೇಶ್‌ಗೌಡ, ಕರಿಯನಕಟ್ಟೆ ಚಿನ್ನಸ್ವಾಮಿ, ಸೋಮಣ್ಣ, ರವಿ, ರಘು, ನಾಗರಾಜು, ಪ್ರಕಾಶ್, ಸೋಮಶೇಖರ್, ಚಿಕ್ಕರಂಗೇಗೌಡ, ಆರ್. ಮಹೇಶ್, ಗೋವಿಂದರಾಜು, ರವಿಚಂದ್ರಪ್ರಸಾದ್, ಸಿ.ಎಂ. ನರಸಿಂಹಮೂರ್ತಿ, ಸಿ.ಎನ್. ಮಹೇಶ್ ಸೇರಿದಂತೆ ಅಧಿಕಾರಿಗಳು ಭಾಗವಹಿಸಿದ್ದರು.

## ಕಿಡಿಗೇಡಿಗಳ ಬಂಧನಕ್ಕೆ ಆಗ್ರಹ



ಮೈಸೂ: ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ಗೆ ಅಪಮಾನ ಮಾಡುವ ಕಿಡಿಗೇಡಿಗಳ ವಿರುದ್ಧ ರಾಷ್ಟ್ರದ್ರೋಹ ಪ್ರಕರಣ ದಾಖಲಿಸಿ ಅವರುಗಳನ್ನು ರಾಜ್ಯಗಳಿಂದಲೇ ಶಾಶ್ವತ ಗಡಿಪಾರು ಮಾಡಬೇಕೆಂದು ಒತ್ತಾಯಿಸಿ ದಲಿತ ಸಂಘರ್ಷ ಸಮಿತಿ ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನಾ ಧರಣಿ ನಡೆಸಲಾಯಿತು.

ಅಂಬೇಡ್ಕರ್ ಭಾರತದ ಸಮಸ್ತ ಶೋಷಿತ-ಹಿಂದುಳಿದವರ ಪರವಾಗಿ ಜೀವಿತವಿಡೀ ಹೋರಾಡಿ ಅಧಿಕಾರ ತಂದುಕೊಟ್ಟ ರಾಷ್ಟ್ರ ನಾಯಕ. ಆದರೆ, ಇತ್ತೀಚಿನ ದಿನಗಳಲ್ಲಿ ಹಿಂದುಳಿದ ವರ್ಗಗಳವರಿಂದಲೇ ಅಂಬೇಡ್ಕರ್ ಭಾವಚಿತ್ರಕ್ಕೆ ಅಪಮಾನಗಳಾಗುತ್ತಿರುವುದು ಶೋಚನೀಯ. ಚಾಮರಾಜನಗರದ ಮಸಣಾಪುರ, ಮೈಸೂರಿನ ವಾಜಮಂಗಲದ ಘಟನೆಗಳನ್ನು ಗಮನಿಸಿದರೆ ನಮ್ಮನ್ನು ಆಳುವ ಸರ್ಕಾರದ ಬೇಜವಾಬ್ದಾರಿ ಎದ್ದು ಕಾಣುತ್ತದೆ. ಅಂಬೇಡ್ಕರ್‌ಗೆ ಮಾಡಿದ ಅಪಮಾನ ಈ ರಾಷ್ಟ್ರಕ್ಕೆ ಮಾಡಿದ ದ್ರೋಹ. ಹೀಗಾಗಿ ಅಂಬೇಡ್ಕರ್‌ಗೆ ಅವಮಾನ ಮಾಡಿದ ಕಿಡಿಗೇಡಿಗಳ ವಿರುದ್ಧ ರಾಷ್ಟ್ರದ್ರೋಹದ ಪ್ರಕರಣ ದಾಖಲಿಸಿ ಬಂಧಿಸುವುದಲ್ಲದೇ, ಅವರುಗಳನ್ನು ಈ ರಾಜ್ಯದಿಂದಲೇ ಶಾಶ್ವತ ಗಡಿಪಾರು ಮಾಡಬೇಕೆಂದು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ಬನ್ನಹಳ್ಳಿ ಸೋಮಯ್ಯ, ಸಣ್ಣಕುಮಾರ್, ಅನುಷಾ, ಬಸವರಾಜು, ಧಮ್ಮ ಅಶೋಕ, ಪೂರ್ಣಿಮಾ, ಉದಯ್ ಭಾಗವಹಿಸಿದ್ದರು.

## ಬೀದಿಬದಿ ಅಂಗಡಿಗಳ ತರವಿಗೆ ಆದೇಶ

ಗುಂಡ್ಲುಪೇಟೆ: ಪಟ್ಟಣದ ಸಾರ್ವಜನಿಕ ಗ್ರಂಥಾಲಯದ ಮುಂಭಾಗ ಬೀದಿಬದಿ ವ್ಯಾಪಾರಿಗಳಿಂದ ಉಂಟಾಗುತ್ತಿದ್ದ ದುರ್ನಾತ, ಅಶುಚಿತ್ವ ಹಾಗೂ ಸಾರ್ವಜನಿಕರಿಗೆ ಆಗುತ್ತಿದ್ದ ತೊಂದರೆಗಳನ್ನು ನಿವಾರಿಸಲು ಕರ್ನಾಟಕ ಉಪ ಲೋಕಾಯುಕ್ತರ ಆದೇಶದ ಮೇರೆಗೆ ಪುರಸಭೆ ಕ್ರಮ ಕೈಗೊಂಡಿದೆ.

ಈ ಕುರಿತು ಪುರಸಭೆ ಮುಖ್ಯಾಧಿಕಾರಿ ಎಸ್. ಶರವಣ ಅವರು ಮಾಹಿತಿ ನೀಡಿದ್ದು, ವಿದ್ಯಾರ್ಥಿಗಳು, ಯುವಕರು ಹಾಗೂ ಪುಸ್ತಕ ಪ್ರೇಮಿಗಳಿಗೆ ಅನುಕೂಲಕರ ವಾತಾವರಣ ಕಲ್ಪಿಸುವ ಉದ್ದೇಶದಿಂದ ಹಲವು ಕ್ರಮಗಳನ್ನು ಜಾರಿಗೊಳಿ ಸಲಾಗಿದೆ ಎಂದು ತಿಳಿಸಿದ್ದಾರೆ.

ಗ್ರಂಥಾಲಯದ ಮುಂಭಾಗದಲ್ಲಿ ಸಾರ್ವಜನಿಕರಿಗೆ ತೊಂದರೆ ಉಂಟುಮಾಡುತ್ತಿದ್ದ ಹಾಗೂ ದುರ್ನಾತಕ್ಕೆ ಕಾರಣವಾಗಿದ್ದ ಫಾಸ್ಟ್‌ಫುಡ್ ಮತ್ತು ಮಾಂಸಾಹಾರ ಮಾರಾಟದ ಅಂಗಡಿಗಳನ್ನು ತೆರವುಗೊಳಿಸಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿದೆ. ಅಲ್ಲದೆ, ಗ್ರಂಥಾಲಯದ ಸುತ್ತಮುತ್ತಲಿನ ಪ್ರದೇಶವನ್ನು ಸಂಪೂರ್ಣವಾಗಿ ಸ್ವಚ್ಛಗೊಳಿಸಿ ಸ್ಯಾನಿಟೈಸ್ ಮಾಡಲು ಪೌರಕಾರ್ಮಿಕರ ವಿಶೇಷ ತಂಡವನ್ನು ನಿಯೋಜಿಸಲಾಗಿದೆ.

ಇನ್ನು ಮುಂದೆ ಈ ಪ್ರದೇಶದಲ್ಲಿ ಕಸ ಸಂಗ್ರಹವಾಗದಂತೆ ನಿರಂತರ ನಿಗಾ ವಹಿಸಲಾಗುವುದು. ವಾಣಿಜ್ಯ ಮಳಿಗೆಗಳು ಒಣ ಮತ್ತು ಹಸಿ ಕಸವನ್ನು ಸಮರ್ಪಕವಾಗಿ ವಿಲೇವಾರಿ ಮಾಡುವಂತೆ ಸೂಚನೆ ನೀಡಲಾಗಿದ್ದು, ನಿಯಮ ಉಲ್ಲಂಘಿಸುವವರ ವಿರುದ್ಧ ದಂಡಾತ್ಮಕ ಕ್ರಮ



ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಲಾಗಿದೆ.

ಲೋಕಾಯುಕ್ತರ ನಿರ್ದೇಶನದಂತೆ ಗ್ರಂಥಾಲಯದ ಸುತ್ತಮುತ್ತಲಿನ ಪ್ರದೇಶದಲ್ಲಿ ಭವಿಷ್ಯದಲ್ಲಿ ಯಾವುದೇ ರೀತಿಯ ಅತಿಕ್ರಮಣ ಅಥವಾ ಸಾರ್ವಜನಿಕ ಉಪಟಳ ನಡೆಯದಂತೆ ತಡೆಯಲು ಸ್ಥಳೀಯ ಪೊಲೀಸ್ ಇಲಾಖೆ ಹಾಗೂ ಗ್ರಂಥಾಲಯ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಸೂಕ್ತ ಬಂದೋಬಸ್ತ್ ಕಲ್ಪಿಸಲಾಗುವುದು ಎಂದು ತಿಳಿಸಿದ್ದಾರೆ. ಕೈಗೊಂಡಿರುವ ಎಲ್ಲಾ ಕ್ರಮಗಳ ಕುರಿತು ನಿಗದಿತ ಅವಧಿಯೊಳಗೆ ಲೋಕಾಯುಕ್ತರಿಗೆ ಸಮಗ್ರ ವರದಿ ಸಲ್ಲಿಸಲಾಗುವುದು. ಸಾರ್ವಜನಿಕರ ಆರೋಗ್ಯ ರಕ್ಷಣೆ ಹಾಗೂ ಓದುಗರಿಗೆ ಪ್ರಶಾಂತ ವಾತಾವರಣ ನಿರ್ಮಿಸುವುದು ಪುರಸಭೆಯ ಪ್ರಮುಖ ಆದ್ಯತೆಯಾಗಿದೆ ಎಂದು ಮುಖ್ಯಾಧಿಕಾರಿ ಎಸ್. ಶರವಣ ತಿಳಿಸಿದ್ದಾರೆ.

### ಯುವಕನ ಮೇಲೆ ಮಾರಣಾಂತಿಕ ಹಲ್ಲೆ

## ಜೂ.19ರಂದು ಬೃಹತ್ ಪ್ರತಿಭಟನೆ



ಚಾಮರಾಜನಗರ: ತಾಲ್ಲೂಕಿನ ಮಸಣಾಪುರ ಗ್ರಾಮದಲ್ಲಿ ಡಾ.ಅಂಬೇಡ್ಕರ್ ಭಾವಚಿತ್ರಕ್ಕೆ ಅಪಮಾನ ಮಾಡಿದ ಸಂಬಂದ ಚಂದ್ರು ಎಂಬಾತನನ್ನು ಕಂಬಕ್ಕೆ ಕಟ್ಟಿ ಚಪ್ಪಲಿ ಹಾರ ಹಾಕಿ ಮಾರಣಾಂತಿಕ ಹಲ್ಲೆ ನಡೆಸಿದ ವ್ಯಕ್ತಿಗಳನ್ನು ಬಂಧಿಸಿ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ಜೂ, 19 ರಂದು ಚಾಮರಾಜನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಗುತ್ತದೆ ಎಂದು ಕರ್ನಾಟಕ ರಾಜ್ಯ ಉಪ್ಪಾರ ಎಸ್ಟಿ ಮೀಸಲಾತಿ ಹೋರಾಟ ಸಮಿತಿ ಅಧ್ಯಕ ಬಾಗಳಿ ರೇವಣ್ಣ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಚಂದ್ರು ಎಂಬಾತ ತಪ್ಪು ಮಾಡಿದ್ದರೇ ಆತನ ವಿರುದ್ದ ಕ್ರಮ ಕೈಗೊಂಡು ಶಿಕ್ಷೆ ನೀಡಲಿ ತಮ್ಮದೇನು ತಕರಾರಿಲ್ಲ ಆದರೆ ಕಾನೂನಿನ ವಿರುದ್ದವಾಗಿ ಯುವಕನನ್ನು ಕಟ್ಟಿಹಾಕಿ ಚಿತ್ರಹಿಂಸೆ ನೀಡಲಾಗಿದೆ ಈಗ ಆತ ಆಸ್ಪತ್ರೆಯಲ್ಲಿ ಸಾವು ಬದುಕಿನ ನಡುವೆ ಹೋರಾಟ ಮಾಡುತ್ತಿದ್ದಾನೆ ಎಂದು ಹೇಳಿದರು.

ಘಟನೆಯ ಬಳಿಕ ಮಸಣಾಪುರ ಗ್ರಾಮಕ್ಕೆ ಭೇಟಿ ನೀಡಿದ್ದ ಶಾಸಕ ಎ.ಆರ್.ಕೃಷ್ಣಮೂರ್ತಿ ಮತ್ತು ಮಾಜಿ ಶಾಸಕ ಎನ್.ಮಹೇಶ್ ಗ್ರಾಮದಲ್ಲಿ ಶಾಂತಿ, ಸುವ್ಯವಸ್ಥೆ ಕಾಪಾಡಿಕೊಳ್ಳಲು ಗ್ರಾಮಸ್ಥರ ಮನವೊಲಿಸುವ ಬದಲು ಪ್ರಚೋದನಕಾರಿ ಹೇಳಿಕೆ ನೀಡಿರುವುದು ಸರಿಯಲ್ಲ ಎಂದರು. ಯುವಕನನ್ನು ಮನಬದಂತೆ ಥಳಿಸಿ ಮಾನಸಿಕ ಹಿಂಸೆ ನೀಡಿದರನ್ನು ಕೂಡಲೇ ಬಂಧಿಸಬೇಕು ಹಾಗೂ ಯುವಕನ ಮೇಲೆ ಉದ್ರಿಕ್ತ ಗುಂಪು ಹಲ್ಲೆ ಮಾಡುತ್ತಿದ್ದರೂ ಕ್ರಮ ಜರುಗಿಸದೆ ಮೌನವಾಗಿದ್ದ ಯಳಂದೂರು ಪಟ್ಟಣದ ಸಬ್ ಇನ್ ಸ್ಪೆಕ್ಟರ್ ಅವರನ್ನು ಅಮಾನತು ಮಾಡಬೇಕು ಎಂದು ಒತ್ತಾಯಿಸಿದರು.

ಮುಖಂಡ ಮಹೇಶ್ ಉಪ್ಪಾರ್ ಮಾತನಾಡಿ ಅಂಬೇಡ್ಕರ್ ಭಾವಚಿತ್ರಕ್ಕೆ ಅಪಮಾನ ಮಾಡಿರುವುದು ಖಂಡನೀಯ ತಪ್ಪು ಮಾಡಿದ ವ್ಯಕ್ತಿಗೆ ಶಿಕ್ಷೆಯಾಗಲಿ ಆದರೆ ಒಬ್ಬ ವ್ಯಕ್ತಿ ಮಾಡಿದ ತಪ್ಪಿಗೆ ಕೆಲವರು ಸಾಮಾಜಿಕ ಜಾಲತಾಣಗಳಲ್ಲಿ ಜನಾಂಗವನ್ನು ನಿಂದಿಸುವ ಕೆಲಸ ಮಾಡುತ್ತಿದ್ದು ಇಂತವರ ವಿರುದ್ಧ ಕ್ರಮವಹಿಸಬೇಕು ಎಂದು ಆಗ್ರಹಿಸಿದರು. ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ಮಂಜುನಾಥ ಸ್ವಾಮಿ, ಆನಂದ್, ನಟರಾಜು, ಮಹೇಶ್, ನಾಗರಾಜು, ಮಂಗಳಮ್ಮ ಉಪಸ್ಥಿತರಿದ್ದರು.

**ಹುಣಸೂರು ಯೋಜನಾ ಪ್ರಾಧಿಕಾರ, ಹುಣಸೂರು**
**ಮೊದಲನೇ ಮಹಡಿ, ಎಸ್.ಜೆ.ಆರ್.ವೈ ಕಟ್ಟಡ,**
**ನಗರ ಸಭೆ ಆವರಣ, ಹುಣಸೂರು-571105**
**Gmail.hunsurplanning@gmail.com ದೂರವಾಣಿ:08222-295122**
**ಸಂ.ಹು.ಯೋ.ಪ್ರಾ/ಮೂ.ಗ್ರಾ/ಭೂ.ಉ.ಬ/62/2026-27 ದಿನಾಂಕ: 10.06.2026**

**ಸಾರ್ವಜನಿಕ ಪ್ರಕಟಣೆ**

(ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14(ಎ) ರನ್ವಯ)

ಮೈಸೂರು ಜಿಲ್ಲೆ, ಹುಣಸೂರು ತಾಲ್ಲೂಕು, ಕಸಬಾ ಹೋಬಳಿ, ಮೂಕನಹಳ್ಳಿ ಗ್ರಾಮದ ಸ.ನಂ:133/17ರಲ್ಲಿ 0ಎ-09.08ಗುಂ ವಿಸ್ತೀರ್ಣದ ಜಮೀನನ್ನು ಸರ್ಕಾರದಿಂದ ಅನುಮೋದನೆಯಾದ ಹುಣಸೂರು ವಿಸ್ತರಿತ ಸ್ಥಳೀಯ ಯೋಜನಾ ಪ್ರದೇಶದಲ್ಲಿ ಕೃಷಿ/ವ್ಯವಸಾಯ ವಲಯದಲ್ಲಿ ಕಾಯ್ದಿರಿಸಲಾಗಿದ್ದು, ಸದರಿ ವಲಯದಿಂದ ವಾಣಿಜ್ಯ ವಲಯಕ್ಕೆ ಭೂಉಪಯೋಗ ಬದಲಾವಣೆ ಕೋರಿ ಶ್ರೀ.ರೇಣುಕಪ್ಪ.ಎಸ್ ಬಿನ್ ಸಿದ್ದಗಂಗಪ್ಪ ಇವರು ಪ್ರಾಧಿಕಾರಕ್ಕೆ ಅರ್ಜಿ ಸಲ್ಲಿಸಿರುತ್ತಾರೆ. ಅರ್ಜಿದಾರರು ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿಯು ಈ ಕೆಳಕಂಡಂತಿರುತ್ತದೆ. ಮೈಸೂರು ಜಿಲ್ಲೆ, ಹುಣಸೂರು ತಾಲ್ಲೂಕು, ಕಸಬಾ ಹೋಬಳಿ, ಮೂಕನಹಳ್ಳಿ ಗ್ರಾಮದ ಸ.ನಂ:133/17ರಲ್ಲಿ 0ಎ-09.08ಗುಂ ವಿಸ್ತೀರ್ಣದ ಜಮೀನು ಸರ್ಕಾರದಿಂದ ಅನುಮೋದನೆಯಾಗಿರುವ ಹುಣಸೂರು ಪಟ್ಟಣದ ಸರ್ಕಾರದಿಂದ ಅನುಮೋದನೆಯಾದ ಹುಣಸೂರು ವಿಸ್ತರಿತ ಸ್ಥಳೀಯ ಯೋಜನಾ ಪ್ರದೇಶದಲ್ಲಿ ವ್ಯವಸಾಯ/ಕೃಷಿ ವಲಯದಲ್ಲಿದ್ದು ವಾಣಿಜ್ಯ ಉದ್ದೇಶಕ್ಕೆ ಭೂ ಉಪಯೋಗ ಬದಲಾವಣೆ ಪಡೆದು ಸದರಿ ವಾಣಿಜ್ಯ ಉದ್ದೇಶಕ್ಕೆ ಭೂ ಪರಿವರ್ತನೆ ಆದ ನಂತರ ವಾಣಿಜ್ಯ ವಿನ್ಯಾಸ ನಕ್ಷೆಗೆ ಅನುಮೋದನೆ ಪಡೆದು ವಾಣಿಜ್ಯ ಬಡಾವಣೆಯನ್ನು ನಿರ್ಮಿಸಿ ಸಾರ್ವಜನಿಕರಿಗೆ ಮತ್ತು ಬಡವರಿಗೆ ಅನುಕೂಲವಾಗುವಂತೆ ಅಂಗಡಿಮುಂಗಟ್ಟುಗಳನ್ನು ನಿರ್ಮಿಸಿ ಕೆಲಸ-ಕಾರ್ಯಗಳನ್ನು ನೀಡುವ ಸಾರ್ವಜನಿಕ ಹಿತಾಸಕ್ತಿ ಅಂಶವನ್ನು ಹೊಂದಿರುತ್ತೇವೆ ಎಂದು ಅರ್ಜಿದಾರರು ತಿಳಿಸಿರುತ್ತಾರೆ. ಆದ್ದರಿಂದ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14(ಎ) ರನ್ವಯ ಪ್ರಕಾರ ವ್ಯವಸಾಯ/ಕೃಷಿ ವಲಯದಿಂದ ವಾಣಿಜ್ಯ ಉದ್ದೇಶಕ್ಕೆ ಭೂಉಪಯೋಗ ಬದಲಾವಣೆ ಮಾಡುವ ಸಂಬಂಧ ಸಾರ್ವಜನಿಕರಿಂದ ಯಾವುದೇ ಸಲಹೆ/ಆಕ್ಷೇಪಣೆಗಳಿದ್ದಲ್ಲಿ ಈ ಪ್ರಕಟಣೆ ಹೊರಡಿಸಿದ ದಿನಾಂಕದಿಂದ 07 ದಿನಗಳ ಒಳಗಾಗಿ ಸದಸ್ಯ ಕಾರ್ಯದರ್ಶಿಗಳು, ಹುಣಸೂರು ಯೋಜನಾ ಪ್ರಾಧಿಕಾರ, ಹುಣಸೂರು ಇವರಿಗೆ ಲಿಖಿತವಾಗಿ/ನೋಂದಾಯಿತ ಅಂಚೆ ಮೂಲಕ ಸಲ್ಲಿಸಲು ತಿಳಿಸಲಾಗಿದೆ. ಅವಧಿ ಮುಗಿದ ನಂತರ ಬರುವ ಸಲಹೆ/ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

**ಸಹಿ/- (ಶ್ರೀ.ಹೆಚ್.ಪಿ.ಅಮರ್‌ನಾಥ್)**
**ಅಧ್ಯಕ್ಷರು**
**ಹುಣಸೂರು ಯೋಜನಾ ಪ್ರಾಧಿಕಾರ,**
**ಹುಣಸೂರು**

**ಸಹಿ/- (ಶ್ರೀಮತಿ.ಹೆಚ್.ಕೆ.ರೇಣುಕ)**
**ಸದಸ್ಯ ಕಾರ್ಯದರ್ಶಿಗಳು ಹಾಗೂ**
**ಸಹಾಯಕ ನಿರ್ದೇಶಕರು**
**ಹುಣಸೂರು ಯೋಜನಾ ಪ್ರಾಧಿಕಾರ**
**ಹುಣಸೂರು**

DIPR/DDMYS/315/KSMCA/225/2026-27

# 21ರಂದು ಅಂತರಾಷ್ಟ್ರೀಯ ಯೋಗ ದಿನ

## ಸಕಲ ಸಿದ್ಧತೆಗೆ ಹೆಚ್ಚುವರಿ ಜಿಲ್ಲಾಧಿಕಾರಿ ಟಿ. ಜವರೇಗೌಡ ಸೂಚನೆ

ಚಾಮರಾಜನಗರ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಆಯುಷ್ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಜಂಟಿ ಸಹಯೋಗದೊಂದಿಗೆ ನಗರದಲ್ಲಿ ಇದೇ ಜೂನ್ 21ರಂದು ಹಮ್ಮಿಕೊಳ್ಳಲಾಗಿರುವ 12ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ಅತ್ಯಂತ ಯಶಸ್ವಿಯಾಗಿ ಆಯೋಜಿಸಲು ಸಕಲ ಸಿದ್ಧತೆಗಳನ್ನು ಕೈಗೊಳ್ಳುವಂತೆ ಹೆಚ್ಚುವರಿ ಜಿಲ್ಲಾಧಿಕಾರಿ ಟಿ. ಜವರೇಗೌಡ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಿದ್ದರು.

**ಪೊಲೀಸ್ ಮೈದಾನದಲ್ಲಿ ಯೋಗೋತ್ಸವ: ಸಾರ್ವಜನಿಕರ ಪಾಲ್ಗೊಳ್ಳುವಿಕೆಗೆ ಕರೆ**

ನಗರದ ಜಿಲ್ಲಾ ಪೊಲೀಸ್ ಕವಾಯತು ಮೈದಾನದಲ್ಲಿ ಜೂನ್ 21ರಂದು ಬೆಳಿಗ್ಗೆ 6.30 ಗಂಟೆಗೆ ಯೋಗ ದಿನಾಚರಣೆ ಕಾರ್ಯಕ್ರಮವು ಆರಂಭವಾಗಲಿದ್ದು, ಇದರಲ್ಲಿ ಜಿಲ್ಲೆಯ ವಿದ್ಯಾರ್ಥಿಗಳು, ಸಾರ್ವಜನಿಕರು ಹಾಗೂ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರು ಸಕ್ರಿಯವಾಗಿ ಭಾಗವಹಿಸಬೇಕು ಎಂದು ಹೆಚ್ಚುವರಿ ಜಿಲ್ಲಾಧಿಕಾರಿಗಳು ತಿಳಿಸಿದರು. ಶಾಲಾ-ಕಾಲೇಜುಗಳು, ನರ್ಸಿಂಗ್ ಕಾಲೇಜುಗಳು, ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳು, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ನೆಹರು ಯುವ ಕೇಂದ್ರ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಲ್ಲಿ ನೋಂದಾಯಿತ



### ಮೂಲಸೌಕರ್ಯಗಳ ಸಿದ್ಧತೆ ಹಾಗೂ 'ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ' ಘೋಷವಾಕ್ಯ

ಯೋಗ ದಿನಾಚರಣೆ ನಡೆಯುವ ಮೈದಾನವನ್ನು ಸಂಪೂರ್ಣವಾಗಿ ಸ್ವಚ್ಛಗೊಳಿಸಿ ಸಜ್ಜುಗೊಳಿಸಬೇಕು ಎಂದು ನಗರಸಭೆ ಅಧಿಕಾರಿಗಳಿಗೆ ಸೂಚಿಸಿದ ಜವರೇಗೌಡ ಅವರು, ಯೋಗಾಭ್ಯಾಸದಲ್ಲಿ ಪಾಲ್ಗೊಳ್ಳುವ ಎಲ್ಲರಿಗೂ ಶುದ್ಧ ಕುಡಿಯುವ ನೀರು ಹಾಗೂ ಲಘು ಉಪಹಾರದ ಸಮರ್ಪಕ ವ್ಯವಸ್ಥೆಯನ್ನು ಕಲ್ಪಿಸಬೇಕು ಎಂದರು. ಯಾವುದೇ ತುರ್ತು ಆರೋಗ್ಯ ಸಮಸ್ಯೆಗಳು ಎದುರಾದಲ್ಲಿ ತಕ್ಷಣ ಸ್ಪಂದಿಸಲು ವೈದ್ಯರು, ಆರೋಗ್ಯ ಸಿಬ್ಬಂದಿ ಹಾಗೂ ಆಂಬ್ಯುಲೆನ್ಸ್ ವ್ಯವಸ್ಥೆಯನ್ನು ಸ್ಥಳದಲ್ಲಿ ಕಾಯ್ದಿರಿಸಬೇಕು ಎಂದು ಆರೋಗ್ಯ ಇಲಾಖೆಗೆ ನಿರ್ದೇಶನ ನೀಡಿದರು. ಈ ಬಾರಿಯ ಅಂತರಾಷ್ಟ್ರೀಯ ಯೋಗ ದಿನಾಚರಣೆಯು 'ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ' ಎಂಬ ವಿಶೇಷ ಘೋಷವಾಕ್ಯದೊಂದಿಗೆ ನಡೆಯುತ್ತಿದ್ದು, ಎಲ್ಲ ಇಲಾಖೆಗಳು ಪರಸ್ಪರ ಸಮನ್ವಯತೆಯಿಂದ ಕಾರ್ಯನಿರ್ವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಯೋಗ ದಿನಾಚರಣೆಯ ಅಧಿಕೃತ ಬಿತ್ತಿಚಿತ್ರವನ್ನು (ಪೋಸ್ಟರ್) ಬಿಡುಗಡೆ ಮಾಡಲಾಯಿತು.

ವಾಗಿರುವ ವಿವಿಧ ಯುವ ಸಂಸ್ಥೆಗಳು ಈ ಮಹತ್ವದ ಕಾರ್ಯಕ್ರಮದಲ್ಲಿ ಕಡ್ಡಾಯವಾಗಿ ಪಾಲ್ಗೊಳ್ಳಬೇಕು ಎಂದ ಅವರು, ಪತಂಜಲಿ ಯೋಗ ಸಂಸ್ಥೆ ಸೇರಿದಂತೆ ಜಿಲ್ಲೆಯ ಎಲ್ಲಾ ಯೋಗಾಸಕ್ತ ಸಂಸ್ಥೆಗಳು ಮತ್ತು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಈ ದಿನವನ್ನು ಅತ್ಯಂತ ಟುಟುಚಿಣಡಿಜ ಅರ್ಥಪೂರ್ಣವಾಗಿಸಬೇಕು ಎಂದು ಮನವಿ ಮಾಡಿದರು.

**ಸಭೆಯಲ್ಲಿ ಅಧಿಕಾರಿಗಳ ಉಪಸ್ಥಿತಿ**

ಈ ಉನ್ನತ ಮಟ್ಟದ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಜಿ. ಹೊನ್ನರಾಜು, ಜಿಲ್ಲಾ ಆಯುಷ್ ಅಧಿಕಾರಿ ಡಾ. ಸತೀಶ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಚಿದಂಬರ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಚಂದ್ರಪಾಟೀಲ್ ಹಾಗೂ ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಪುಟ್ಟಗೌರಮ್ಮ ಉಪಸ್ಥಿತರಿದ್ದರು. ಇವರೊಂದಿಗೆ ಕೆಎಸ್‌ಆರ್‌ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿ ಎಸ್.ಬಿ. ನಾಗರಾಜು, ಸಿಮ್ಸ್ ಪ್ರಾಂಶುಪಾಲರಾದ ಡಾ. ಆರ್.ಟಿ. ಅಜಯ್, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ವಿಶ್ವನಾಥ್, ಜಿಲ್ಲಾ ಶಸ್ತ್ರಚಿಕಿತ್ಸಕರಾದ ಡಾ. ಚಿನ್ನಭೋವಿ, ಪತಂಜಲಿ ಯೋಗ ಶಿಕ್ಷಣ ಸೇವಾ ಸಮಿತಿಯ ಜಿಲ್ಲಾ ಪ್ರಧಾನ ಸಂಚಾಲಕರಾದ ಬಿ.ಪಿ. ಪ್ರಕಾಶ್, ಚಾಮರಾಜನಗರ ನಗರಸಭೆ ಪೌರಾಯುಕ್ತರಾದ ಪರಶುರಾಮ ಎಂ. ಛಲವಾದಿ ಹಾಗೂ ಸಿಮ್ಸ್ ನರ್ಸಿಂಗ್ ಕಾಲೇಜಿನ ಪ್ರಾಂಶುಪಾಲರಾದ ಎನ್. ನಮ್ರತಾ ಸೇರಿದಂತೆ ಹಲವು ಪ್ರಮುಖ ಇಲಾಖಾ ಅಧಿಕಾರಿಗಳು ಭಾಗವಹಿಸಿದ್ದರು.

# ದೌರ್ಜನ್ಯ ಪ್ರಕರಣದಲ್ಲಿ ಹೆಚ್ಚಿದ ಪ್ರತಿದೂರು: ಆಯೋಗದ ಅಧ್ಯಕ್ಷರ ಕಳವಳ

ಮೈಸೂರು: ದೌರ್ಜನ್ಯಕ್ಕೆ ಒಳಗಾದ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಜನರ ಮೇಲೆ ಕೌಂಟರ್ ದೂರು ದಾಖಲಾಗುತ್ತಿರುವುದಕ್ಕೆ ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಅಧ್ಯಕ್ಷ ಡಾ.ಮೂರ್ತಿ ಎಲ್ ಕಳವಳ ವ್ಯಕ್ತಪಡಿಸಿದರು.

ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ನಡೆದ ಆಯೋಗದ ಸ'?ಯಲ್ಲಿ ಪ್ರತಿ ದೂರು ದಾಖಲಿಸಿ ದೌರ್ಜನ್ಯಕ್ಕೆ ಒಳಗಾದವರಿಗೆ ಕಿರುಕುಳ ಕೊಡಲಾಗುತ್ತಿದೆ ಎಂದು ಅನೇಕ ಮನವಿಯನ್ನು ಸ್ವೀಕರಿಸಿದ ಅವರು, ಕೌಂಟರ್ ದೂರು ದಾಖಲು ಮಾಡುವುದು ರಾಜ್ಯವ್ಯಾಪಿ ಹೆಚ್ಚುತ್ತಿದೆ. ಪೊಲೀಸರು ಉದ್ದೇಶಪೂರ್ವಕವಾಗಿ ಪ್ರತಿ ದೂರು ದಾಖಲು ಮಾಡಿದ್ದರೆ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದರು.

**ಆತ್ಮಹತ್ಯೆಗೆ ಅವಕಾಶ ಕೊಡಿ**

ನಮ್ಮ ಜಾಗದ ಮೇಲೆ ಅಕ್ರಮ ಪ್ರವೇಶ ಮಾಡಿದ್ದನ್ನು ಪ್ರಶ್ನಿಸಿದ್ದಕ್ಕೆ ನನ್ನ ಮೇಲೆ ದೈಹಿಕವಾಗಿ ಹಲ್ಲೆ ನಡೆಸಿ ಕೊಲೆ ಬೆದರಿಕೆ ಹಾಕಿದವನ ವಿರುದ್ಧ ದೂರು ಕೊಟ್ಟರೂ ಪೊಲೀಸರು ಯಾವುದೇ ಕ್ರಮಕೈಗೊಂಡಿಲ್ಲ. ನಮ್ಮ ಕಷ್ಟ ಕೇಳದಿದ್ದ ಮೇಲೆ ಆತ್ಮಹತ್ಯೆಗೆ ಅವಕಾಶ ಮಾಡಿಕೊಡಬೇಕು ಎಂದು ಹುಣಸೂರು ತಾಲೂಕಿನ ಕಟ್ಟೆಮಳಲವಾಡಿ ಮಹದೇವಮ್ಮ ಆಯೋಗದ ಅಧ್ಯಕ್ಷ ಡಾ.



ಮೂರ್ತಿ ರನ್ನು ಒತ್ತಾಯಿಸಿದರು. ಎಚ್.ಡಿ. ಕೋಟೆ ಪುರಸಭೆ ಅಧಿಕಾರಿಗಳು ಸ್ಥಳೀಯ ಮುಖಂಡರೊಂದಿಗೆ ಸೇರಿ ತಮ್ಮ ಮೇಲೆ ದಬ್ಬಾಳಿಕೆ ಮಾಡುತ್ತಿದ್ದಾರೆ ಎಂದು ಮಹಿಳೆಯೊಬ್ಬರು ಅವಲತ್ತುಕೊಂಡರು. ನಮ್ಮ ಜಾಗಕ್ಕೆ ಬೇರೆಯವರು ಅತಿಕ್ರಮ ಪ್ರವೇಶ ಮಾಡಿದ್ದಾರೆ. ಅದನ್ನು ಪ್ರಶ್ನಿಸಿದರೆ ಜಾಗ ಖಾಲಿ ಮಾಡುವಂತೆ ದಬಾಯಿಸುತ್ತಿದ್ದಾರೆ. ನ್ಯಾಯ ದೊರಕಿಸಿಕೊಡಬೇಕೆಂದು ಕೋರಿದರು.

ವರುಣಾ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿಯೇ ಜಿಲ್ಲಾಡಳಿತವೇ ದಲಿತರ ಭೂಮಿಯನ್ನು ವಶಕ್ಕೆ ಪಡೆದುಕೊಳ್ಳುತ್ತಿದೆ. ಎಸ್‌ಎಸ್ಸಿ, ಎಸ್ಟಿ ಜನಗಳ ಕುಂದುಕೊರತೆ ಸಭೆ ಕರೆಯುವಂತೆ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದರೆ ಎಸ್ಸಿ, ಎಸ್ಟಿ ಆಯೋಗ ಸಭೆ ನಡೆಸುತ್ತದೆಂದು ಬೇಜವಾಬ್ದಾರಿ ಉತ್ತರ ಕೊಡುತ್ತಾರೆ ಎಂದು ದೂರಿದರು. ಕೆ.ಆರ್. ನಗರ ನಗರ ತಾಲೂಕಿನ ದಸಂಸ ಮುಖಂಡ ದಿವಾಕರ್ ಕೆ.ಆರ್.ನಗರ ತಾಲೂಕಿನಲ್ಲಿ ವಿವಿದೆಡೆ ವಾಸವಿರುವ ಅಲೆಮಾರಿ ಜನರಿಗೆ ನಿವೇಶನ, ಮನೆಗಳನ್ನು ನಿರ್ಮಿಸಿಕೊಡಬೇಕು ಎಂದು ಮನವಿ ಸಲ್ಲಿಸಿದರು. ಒಳ ಮೀಸಲಾತಿ ಅನುಷ್ಠಾನಕ್ಕೆ ತರಬೇಕು ಮತ್ತು ಬೋವಿ ಜನಾಂಗವನ್ನು ಪರಿಶಿಷ್ಟ ಜಾತಿ ಪಟ್ಟಿಯಿಂದ ತೆಗೆಯಬೇಕು ಎಂದು ರಾಜಣ್ಣ ಆಗ್ರಹಿಸಿದರು.

ಕಾಂಗ್ರೆಸ್ ಮುಖಂಡ ನಾಗವಾಲ ನರೇಂದ್ರ, ಈಚೆಗೆ ಚಾ.ನಗರದ ಮಸಣಪುರದಲ್ಲಿ ಅಂಬೇಡ್ಕರ್ ಭಾವ ಚಿತ್ರಕ್ಕೆ ಅಪಮಾನ ಮಾಡಲಾಗಿದೆ. ಆಗಾಗ್ಗೆ ಬಾಬಾ ಸಾಹೇಬರ ಭಾವಚಿತ್ರಗಳಿಗೆ ಅಪಮಾನ ಮಾಡುತ್ತಿರುವುದನ್ನು ತಡೆಯಲು ಕಟ್ಟುನಿಟ್ಟಿನ ನಿರ್ದೇಶನ ಕೊಡಬೇಕು ಎಂದು ಆಗ್ರಹಿಸಿದರು.

ಗಾಂಧಿನಗರದ ಹೋರಾಟಗಾರ ಮಂಜುನಾಥ್, ಕನ್ನಡ ಪರ ಹೋರಾಟಗಾರರ ಪ್ರಕರಣಗಳನ್ನು ಹಿಂಪಡೆದಂತೆ ದಲಿತ ಸಂಘಟನೆಗಳ ಮೇಲಿರುವ ಪ್ರಕರಣಗಳನ್ನು ಹಿಂಪಡೆಯಬೇಕು ಎಂದು ಕೋರಿದರು. ಮಲ್ಲಹಳ್ಳಿ ನಾರಾಯಣ್, ದಸಂಸ ಜಿಲ್ಲಾ ಸಂಚಾಲಕ ಆಲಗೂಡು ಶಿವಕುಮಾರ್ ಮಾತನಾಡಿದರು. 100ಕ್ಕೂ ಅರ್ಜಿಗಳು ಸ್ವೀಕೃತವಾದವು.ವಿಧಾನ ಪರಿಷತ್ ಸದಸ್ಯ ಸಿ.ಎನ್ ಮಂಜೇಗೌಡ, ಎಸ್ಸಿ/ಎಸ್ಟಿ ಆಯೋಗದ ಸದ್ಯ ದಿವಾಕರ್, ಗೀತಾ ತಾಮೋಷಿ, ಎಂ ತುಂಬಯ್ಯ, ಕಾರ್ಯದರ್ಶಿಗಳಾದ ಡಾ.ಹೆಚ್.ಎನ್.ಶಿವರಾಮ, ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ, ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್, ಜಿಪಂ ಸಿಇಒ ಎಸ್. ಯುಕೇಶ್ ಕುಮಾರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ್ ಬಾಲದಂಡಿ, ಪಾಲಿಕೆ ಆಯುಕ್ತ ಶೇಕ್ ತನ್ವಿರ್ ಆಸೀಫ್ ಉಪಸ್ಥಿತರಿದ್ದರು.

**ಸಂಶೋಧಕರ ಶಿಷ್ಯ ವೇತನಕ್ಕೆ ಕ್ರಮ**

ಮೈಸೂರು: ಮೈಸೂರು ವಿವಿಯ ಸಂಶೋಧನ ವಿದ್ಯಾರ್ಥಿಗಳಿಗೆ ಒಂದು ವರ್ಷದಿಂದ ಶಿಷ್ಯ ವೇತನ ಮಂಜೂರು ಮಾಡಿಲ್ಲ. ದಲಿತ ವಿದ್ಯಾರ್ಥಿಗಳಿಗೆ ಮೀಸಲಿಟ್ಟ ಹಣವನ್ನು ಅನ್ಯ ಉದ್ದೇಶಕ್ಕೆ ಖರ್ಚು ಮಾಡುತ್ತಿದ್ದಾರೆ. ಎಲ್ಲದಕ್ಕೂ ದುಡ್ಡಿಲ್ಲ ಎಂದು ಕುಲಪತಿಗಳು ಉತ್ತರ ಕೊಡುತ್ತಿದ್ದಾರೆ. ಪೊಲೀಸರು ಪ್ರತಿ'ಟನೆ ಮಾಡುವವರನ್ನು ತಡೆಯುತ್ತಿದ್ದಾರೆ ಎಂದು ಸಂಶೋಧನಾ ವಿದ್ಯಾರ್ಥಿಗಳು ಆಯೋಗಕ್ಕೆ ಮನವಿ ಸಲ್ಲಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಆಯೋಗದ ಅಧ್ಯಕ್ಷ ಡಾ.ಮೂರ್ತಿ ತುರ್ತು ಕ್ರಮವಹಿಸುವ ಭರವಸೆ ನೀಡಿದರು.

**ಜಿಲ್ಲಾ ಮಟ್ಟದ ಅಧಿಕಾರಿಗಳ ಗೈರಿಗೆ ಆಕ್ಷೇಪ**

ಮೈಸೂರು: ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಮಹತ್ವದ ಸಭೆಗೆ ಜಿಲ್ಲಾ ಮಟ್ಟದ ಅsಕಾರಿಗಳು ಗೈರಾಗಿರುವುದಕ್ಕೆ ಸಂವಿಧಾನ ಸಂರಕ್ಷಣಾ ಹೋರಾಟ ಸಮಿತಿ ರಾಜ್ಯಾಧ್ಯಕ್ಷ ಎನ್.ಭಾಸ್ಕರ್ ಆಕ್ಷೇಪ ವ್ಯಕ್ತಪಡಿಸಿದರು. ಸಭೆಯಲ್ಲಿದ್ದ ಇತರ ಮುಖಂಡರು ಇದಕ್ಕೆ ದನಿಗೂಡಿಸಿದರು. ಅsಕಾರಿಗಳ ಸಮ್ಮುಖದಲ್ಲಿ ಅರ್ಜಿಗಳ ವಿಲೇವಾರಿ ಮಾಡಬೇಕೆಂದು ಆಗ್ರಹಿಸಿದರು. ಒಳ ಮೀಸಲಾತಿ ಜಾರಿಗೊಂಡು ಒಂದೂವರೆ ತಿಂಗಳಾಗಿದೆ. ಈವರೆಗೆ ಎಬಿಸಿ ಪ್ರಮಾಣ ಪತ್ರಗಳನ್ನು ನೀಡುತ್ತಿಲ್ಲ. ಆದರೆ, ವಿದ್ಯಾರ್ಥಿಗಳು ಪ್ರವೇಶಾತಿ ಸಂದ'ದಲ್ಲಿ ತೊಂದರೆ ಅನು'ವಿಸುತ್ತಿದ್ದಾರೆ. ಹಳೆಯ ಪ್ರಮಾಣ ಪತ್ರಕ್ಕೆ ಪ್ರವೇಶಾತಿ ಕೊಡಬೇಕು. ಸಿಪಿಸಿ ಪಾಲಿಟೆಕ್ನಿಕ್‌ನಲ್ಲಿ ರೋಸ್ಟರ್ ಬಿಂದು ಪ್ರಕಟಿಸುವಂತೆ ಆಯೋಗದ ಅಧ್ಯಕ್ಷರು ಸೂಚನೆ ಕೊಡಬೇಕು ಎಂದು ಒತ್ತಾಯಿಸಿದರು.

### ಮೂಲಸೌಕರ್ಯ ಹಾಗೂ ಶಾಲಾ ಸೌಲಭ್ಯಗಳ ವೀಕ್ಷಣೆ ಮಾಡಿದ ಮೋನಾ ರೋಟ್

## ಗುಂಡ್ಲುಪೇಟೆ: ಗ್ರಾಪಂಗಳಿಗೆ ಜಿಪಂ ಸಿಇಒ ಭೇಟಿ

ಗುಂಡ್ಲುಪೇಟೆ: ತಾಲೂಕಿನ ಪ್ರಮುಖ ಗ್ರಾಮ ಪಂಚಾಯಿತಿಗಳಾದ ಚಿಕ್ಕಾಟಿ, ಹೊರೆಯಾಲ ಹಾಗೂ ಕೋಟೆಕೆರೆ ಕಚೇರಿಗಳಿಗೆ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋಟ್ ಭೇಟಿ ನೀಡಿದ್ದರು.

ಈ ಭೇಟಿಯ ಅವಧಿಯಲ್ಲಿ ಪಂಚಾಯಿತಿ ವ್ಯಾಪ್ತಿಯಲ್ಲಿ ನಡೆಯುತ್ತಿರುವ ವಿವಿಧ ಅಭಿವೃದ್ಧಿ ಯೋಜನೆಗಳ ಪ್ರಗತಿ ಹಾಗೂ ದೈನಂದಿನ ಆಡಳಿತಾತ್ಮಕ ಕಾರ್ಯಗಳ ಚುರುಕುತನದ ಕುರಿತು ಅಧಿಕಾರಿಗಳು ಕೂಲಂಕಷವಾಗಿ ಪರಿಶೀಲನೆ ನಡೆಸಿದರು.

**ಅಭಿವೃದ್ಧಿ ಯೋಜನೆಗಳು ಮತ್ತು ತೆರಿಗೆ ಪರಿಶೀಲನೆ**

ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಬಾಕಿ ಇರುವ ತೆರಿಗೆ ವಸೂಲಾತಿಯ ಪ್ರಸ್ತುತ ಪ್ರಗತಿಯನ್ನು ಪರಿಶೀಲಿಸಿದ ಸಿಇಒ ಅವರು, ನಿಗದಿತ ಗುರಿಯನ್ನು ಸಕಾಲದಲ್ಲಿ ತಲುಪಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಇದರೊಂದಿಗೆ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ



ಯೋಜನೆ (ನರೇಗಾ) ಹಾಗೂ ಸ್ವಚ್ಛ ಭಾರತ್ ಮಿಷನ್ (ಎಸ್‌ಬಿಎಂ) ಅಡಿಯಲ್ಲಿ ಕೈಗೊಳ್ಳಲಾಗಿರುವ ವಿವಿಧ ಪ್ರಗತಿ ಹಂತದ ಕಾಮಗಾರಿಗಳ ಪ್ರಮುಖ ಕಡತಗಳನ್ನು ಹತ್ತಿರದಿಂದ ವೀಕ್ಷಿಸಿ, ಸರ್ಕಾರಿ ಯೋಜನೆಗಳು ಅರ್ಹ ಫಲಾನುಭವಿಗಳನ್ನು ತಲುಪುವಂತೆ ಮಾರ್ಗದರ್ಶನ ನೀಡಿದರು.


**ಮೂಲಸೌಕರ್ಯ ಹಾಗೂ ಶಾಲಾ ಸೌಲಭ್ಯಗಳ ವೀಕ್ಷಣೆ**

ಪಂಚಾಯಿತಿ ಕಚೇರಿಗಳಷ್ಟೇ ಅಲ್ಲದೆ, ಆಯಾ ಗ್ರಾಮಗಳ ಅಂಗನವಾಡಿ ಕೇಂದ್ರಗಳು, ಸಾರ್ವಜನಿಕ ಗ್ರಂಥಾಲಯಗಳು ಹಾಗೂ ಸರ್ಕಾರಿ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೂ ಅಧಿಕಾರಿಗಳು ಭೇಟಿ ನೀಡಿದರು. ಅಲ್ಲಿನ ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ಒದಗಿಸಲಾಗುತ್ತಿರುವ ಮೂಲ ಸೌಕರ್ಯಗಳು, ಕುಡಿಯುವ ನೀರು ಮತ್ತು ಶೌಚಾಲಯ ಸೇರಿದಂತೆ ಇತರೆ ಸೌಲಭ್ಯಗಳ ಲಭ್ಯತೆಯ ಬಗ್ಗೆ ಸ್ಥಳದಲ್ಲೇ ಮಾಹಿತಿ ಪಡೆದುಕೊಂಡು, ವ್ಯವಸ್ಥೆಯನ್ನು ಸದಾ ಸುಸ್ಥಿತಿಯಲ್ಲಿಡುವಂತೆ ಕಟ್ಟುನಿಟ್ಟಾಗಿ ತಿಳಿಸಿದರು.

ಈ ಮಹತ್ವದ ಪರಿಶೀಲನಾ ಭೇಟಿಯ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, ವಿವಿಧ ಯೋಜನಾಧಿಕಾರಿಗಳು, ಕ್ಷೇತ್ರ ಶಿಕ್ಷಣಾಧಿಕಾರಿ (ಬಿಇಒ), ಸಹಾಯಕ ನಿರ್ದೇಶಕರು, ತಾಲೂಕು ಪಂಚಾಯಿತಿ ವ್ಯವಸ್ಥಾಪಕರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು (ಪಿಡಿಒ) ಹಾಗೂ ಇಲಾಖೆಯ ಸಿಬ್ಬಂದಿಗಳು ಹಾಜರಿದ್ದು ಅಗತ್ಯ ಮಾಹಿತಿ ಒದಗಿಸಿದರು.

## ಕೂಲಿ ಕಾರ್ಮಿಕ ಸಾವು: ಮಾಲೀಕನ ಮೇಲೆ ಆರೋಪ

ಎಚ್.ಡಿ.ಕೋಟೆ: ಬೀಚನಹಳ್ಳಿ ಸಮೀಪದ ಗಣೇಶನಗುಡಿ ಗ್ರಾಮದ ತೋಟದಲ್ಲಿ ಕೆಲಸ ಮಾಡುತ್ತಿದ್ದ ಕಾರ್ಮಿಕನ ಮೇಲೆ, ಜಮೀನಿನ ಮಾಲೀಕನ ಜೊತೆ ಮತ್ತೊಬ್ಬ ಶಾಮೀಲಾಗಿ ಹಲ್ಲೆ ಮಾಡಿದ್ದರ ಪರಿಣಾಮ ಚಂದ್ರ ಸಾವನ್ನಪ್ಪಿದ್ದಾನೆ ಎಂದು ಮೃತನ ಸಂಬಂಧಿ ಲೀಲಾ ಆರೋಪಿಸಿದ್ದಾರೆ.



ತಾಲೂಕಿನ ನೆಮ್ಮನಹಳ್ಳಿ ಗ್ರಾಮದ ನಿವಾಸಿ ಚಂದ್ರ(48) ಮೃತ ವ್ಯಕ್ತಿ. ಈತ ಮಧು ಎಂಬುವವರ ತೋಟದಲ್ಲಿ ಕೂಲಿ ಕಾರ್ಮಿಕನಾಗಿ ಕೆಲಸ ಮಾಡುತ್ತಿದ್ದ ಚಂದ್ರ, ತೋಟದ ಕೆಲಸಕ್ಕೆ ಆಗಿಂದಾಗೆ ತಪ್ಪಿಸಿಕೊಳ್ಳುತ್ತಿದ್ದರಿಂದ ಮಾಲೀಕ ಮಧು ಹಾಗೂ ನಂದೀಶ ಅವರು ಚಂದ್ರನನಿಗೆ ಕೈಗಳಿಂದ ಗುದ್ದಿ, ಕಾಲಿನಿಂದ ಒದ್ದು ಹಲ್ಲೆ ಮಾಡಿದ್ದರಿಂದ ಚಂದ್ರ ಮೃತಪಟ್ಟಿರುವುದಾಗಿ ಪ್ರತ್ಯಕ್ಷದರ್ಶಿ ಮೃತನ ಅತ್ತಿಗೆ ಲೀಲಾ ಅಂತರಸಂತೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಘಟನೆಯ ವಿವರಣೆ ನೀಡಿದೆ ಮೃತನ ಸಂಬಂಧಿ ಲೀಲಾ, ಇಬ್ಬರ ಹೊಡೆತದಿಂದ ಹೊಟ್ಟೆ ನೋವು ಕಾಣಿಸಿಕೊಂಡ ಪರಿಣಾಮ ಎಚ್.ಡಿ.ಕೋಟೆ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗಿತ್ತು. ಚಿಕಿತ್ಸೆಯಿಂದ ಚಂದ್ರುವಿನ ಹೊಟ್ಟೆ ನೋವು ನಿಯಂತ್ರಣಕ್ಕೆ ಬಾರದೇ ಇರುವುದರಿಂದ, ವೈದ್ಯರ ಸಲಹೆಯಂತೆ ಹೆಚ್ಚಿನ ಚಿಕಿತ್ಸೆಗೆ ಜಿಲ್ಲಾಸ್ಪತ್ರೆಗೆ ಕರೆದೊಯ್ಯಲು ಸಜ್ಜುಗೊಳ್ಳುತ್ತಿದ್ದಾಗ, ಅಷ್ಟರಲ್ಲಿ ಸ್ಥಳಕ್ಕಾಗಮಿಸಿದ ಮಧು ಮತ್ತು ನಂದೀಶ ಆಸ್ಪತ್ರೆಗೆ ಏಕೆ ಬಂದಿದ್ದೀರೆಂದು ಚಂದ್ರನನ್ನು ಅವರ ಕಾರಿನಲ್ಲೇ ಮತ್ತೆ ತೋಟಕ್ಕೆ ಕರೆದುಕೊಂಡು ಹೋದರೆಂದು ತಿಳಿದು ಬಂದಿದೆ.

ತೋಟದಲ್ಲಿ ಮತ್ತೆ ಹಲ್ಲೆ ನೆಡಸಿದಾಗ ಚಂದ್ರ ನಿತ್ರಾಣಗೊಳ್ಳುತ್ತಿದ್ದಂತೆಯೇ ಆಸ್ಪತ್ರೆಗೆ ಕರೆದೊಯ್ಯಲು ತುರ್ತುವಾಹನಕ್ಕೆ ಕರೆ ಮಾಡಿದಾಗ ವಾಹನ ಸ್ಥಳಕ್ಕೆ ಬರುವಷ್ಟರಲ್ಲಿ ಚಂದ್ರ ಮೃತಪಟ್ಟಿದ್ದಾರೆ ಎಂದು ತಿಳಿಸಿದರು.

ಮೃತನಿಗೆ ಪತ್ನಿ ಹಾಗೂ ಇಬ್ಬರು ಮಕ್ಕಳಿದ್ದಾರೆ. ತಾಲೂಕು ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆಯ ನಂತರ ವಾರಸುದಾರರಿಗೆ ಮೃತದೇಹ ಹಸ್ತಾಂತರಿಸಲಾಯಿತು. ಈ ಕುರಿತು ಪ್ರಕರಣದ ತನಿಖೆ ಮುಂದುವರೆದಿದೆ.

# ಸಂಕ್ಷಿಪ್ತ ಸುದ್ದಿ

## ಪರೀಕ್ಷಾ ಕೇಂದ್ರದ ಸುತ್ತ ನಿಷೇಧಾಜ್ಞೆ

**ಮಡಿಕೇರಿ:** ನಗರದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಜೂನ್, 21 ರಂದು 2026 ರ ರೀ-ನೀಟ್(ಯುಜಿ) ಪರೀಕ್ಷೆ ನಡೆಯಲಿದ್ದು, ಈ ಪರೀಕ್ಷಾ ಕೇಂದ್ರದಲ್ಲಿ ಯಾವುದೇ ಅವ್ಯವಹಾರಗಳಿಲ್ಲದೆ ಸುಗಮವಾಗಿ ಪರೀಕ್ಷೆ ನಡೆಸುವ ಸಲುವಾಗಿ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ 2023 ರ ಕಲಂ 163 ರಡಿ ದತ್ತವಾದ ಅಧಿಕಾರದಂತೆ ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿನ ಪ್ರದೇಶವನ್ನು ನಿರ್ಬಂಧಿತ ಸ್ಥಳ ಎಂದು ಘೋಷಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಎಸ್.ಜೆ.ಸೋಮಶೇಖರ್ ಅವರು ಆದೇಶಿಸಿದ್ದಾರೆ.

ಈ ವ್ಯಾಪ್ತಿಯಲ್ಲಿರುವ ಎಲ್ಲಾ ಜೆರಾಕ್ಸ್ ಅಂಗಡಿ ಮತ್ತು ಸೈಬರ್ ಸೆಂಟರ್‌ಗಳನ್ನು ಮುಚ್ಚಿಸತಕ್ಕದೆಂದು ಸಹ ತಿಳಿಸಿದ್ದಾರೆ. ಈ ಆದೇಶವು ಪರೀಕ್ಷಾ ದಿನದಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 5.30 ಗಂಟೆಯವರೆಗೆ ಮಾತ್ರ ಚಾಲ್ತಿಯಲ್ಲಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಎಸ್.ಜೆ.ಸೋಮಶೇಖರ್ ಅವರು ತಿಳಿಸಿದ್ದಾರೆ.

## ಜೂ.20 ರಂದು ನೇರ ಸಂದರ್ಶನ



**ಮಡಿಕೇರಿ:** ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಮಡಿಕೇರಿ, ಕೊಡಗು ಜಿಲ್ಲೆ, ಇವರ ವತಿಯಿಂದ ಜೂನ್, 20 ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆವರೆಗೆ ಪೃಥ್ವಿ ಜ್ಯುವೆಲ್ಲರಿ ಕುಶಾಲನಗರ, ಇಲ್ಲಿ ನೇರ ಸಂದರ್ಶನ ಆಯೋಜಿಸಲಾಗಿದೆ. ಈ ನೇರ ಸಂದರ್ಶನದಲ್ಲಿ 'ಪೃಥ್ವಿ ಜ್ಯುವೆಲ್ಲರಿ ಕುಶಾಲನಗರ' ಇವರು ತಮ್ಮ ಸಂಸ್ಥೆಗಳಲ್ಲಿ ಖಾಲಿಯಿರುವ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಿದ್ದಾರೆ.

ಈ ನೇರ ಸಂದರ್ಶನದಲ್ಲಿ ಎಸ್‌ಎಸ್‌ಎಲ್‌ಸಿ, ಪಿಯುಸಿ, ಪದವಿ ಹಾಗೂ ಸ್ನಾತಕೋತರ ಪದವಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಭಾಗವಹಿಸಿ ಉದ್ಯೋಗದ ನೆರವು ಪಡೆಯಬಹುದಾಗಿದೆ. ಅಭ್ಯರ್ಥಿಗಳು ವಿದ್ಯಾರ್ಹತೆಯ ಮೂಲ ದಾಖಲಾತಿಗಳು, ಅನುಭವ ಪ್ರಮಾಣಪತ್ರ (ಅನ್ವಯಿಸುವವರಿಗೆ ಮಾತ್ರ) ಹಾಗೂ ಸ್ವ-ವಿವರಗಳ ಪ್ರತಿಗಳೊಂದಿಗೆ ನೇರ ಸಂದರ್ಶನಕ್ಕೆ ಹಾಜರಾಗುವಂತೆ ಜಿಲ್ಲಾ ಉದ್ಯೋಗಾಧಿಕಾರಿ ಸಿ.ಬಿ.ಮಂಜುನಾಥ ಅವರು ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗೆ ಜಾಬ್ ಕೋಆರ್ಡಿನೇಟರ್ 8296020826 ನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿ ಮಂಜುನಾಥ್ ಅವರು ತಿಳಿಸಿದ್ದಾರೆ.

### ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆ

# ದೌರ್ಜನ್ಯಕ್ಕೊಳಗಾದ ಸಂತ್ರಸ್ತರಿಗೆ ಪರಿಹಾರ ನೀಡಲು ಅಗತ್ಯ ಕ್ರಮ ವಹಿಸಿ: ಜಿಲ್ಲಾಧಿಕಾರಿ

**ಮಂಡ್ಯ:** ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಂಗಳವಾರ ಜಿಲ್ಲಾಧಿಕಾರಿ ಡಾ ಕುಮಾರ ಅಧ್ಯಕ್ಷತೆಯಲ್ಲಿ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ (ದೌರ್ಜನ್ಯ ಪ್ರತಿಬಂಧಕ) ಕಾಯ್ದೆಯಡಿ ದಲಿತರ ಮೇಲಿನ ದೌರ್ಜನ್ಯ ತಡೆಗಟ್ಟಲು, ಪರಿಹಾರ ವಿತರಣೆ ಮತ್ತು ಸಾಮಾಜಿಕ ಭದ್ರತೆ ಪರಿಶೀಲನೆ ಸಂಬಂಧ ಸಭೆ ನಡೆಯಿತು.

ಈ ಸಂದರ್ಭದಲ್ಲಿ ಜಿಲ್ಲೆಯಲ್ಲಿ ದಲಿತರ ದೌರ್ಜನ್ಯ ನಡೆಯದಂತೆ ಎಲ್ಲ ತಾಲೂಕು ಆಡಳಿತಗಳಿಗೆ ಈಗಾಗಲೇ ಆದೇಶಿಸಿದ್ದು, ಎಲ್ಲ ವರ್ಗದವರೂ ಸಮಾನತೆಯಿಂದ ಸಹಬಾಳ್ವೆ ನಡೆಸುವಂತೆ ಸಾರ್ವಜನಿಕರಿಗೆ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ. ಆದೇಶ ಉಲ್ಲಂಘಿಸಿ,



ದಲಿತರ ಶೋಷಣೆ ನಡೆದಿರುವುದು ಗಮನಕ್ಕೆ ಬಂದರೆ ತಕ್ಷಣವೇ ನಿರ್ದಾಕ್ಷಿಣ್ಯ ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜನವರಿ 2026 ರಿಂದ ಜೂನ್ ವರೆಗೆ 43 ದೌರ್ಜನ್ಯ ಪ್ರಕರಣಗಳು ದಾಖಲಾಗಿದ್ದು ದೌರ್ಜನ್ಯ ಪ್ರಕರಣಗಳು ನಡೆದ ತಕ್ಷಣವೇ ಎಫ್.ಐ.ಆರ್ ದಾಖಲಿಸಿಕೊಳ್ಳುವುದು ಹಾಗೂ ದೌರ್ಜನ್ಯಕ್ಕೊಳಗಾದವರಿಗೆ ತ್ವರಿತ ನ್ಯಾಯ ಒದಗಿಸಲು ಅಗತ್ಯ ಕ್ರಮವಹಿಸಬೇಕು ಎಂದು ಅವರು ತಿಳಿಸಿದರು.

ದೇವಸ್ಥಾನಗಳಲ್ಲಿ ದಲಿತರ ಪ್ರವೇಶ ನಿರಾಕರಣೆಯು ಕಾನೂನುಬಾಹಿರ ಮತ್ತು ಅಮಾನವೀಯ. ದೇವಸ್ಥಾನ ಪ್ರವೇಶದ ಕುರಿತು ಸಮಾಜದಲ್ಲಿ ಅರಿವು ಮೂಡಿಸಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಹಾಗೂ ಸಾರ್ವಜನಿಕರಲ್ಲಿ, ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ದೌರ್ಜನ್ಯ ಪ್ರತಿಬಂಧಕ ಕಾಯ್ದೆಗಳ ಬಗ್ಗೆ ಅರಿವು ಮೂಡಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲಾ ಜಾಗೃತಿ ಹಾಗೂ ಉಸ್ತುವಾರಿ ಸಭೆಗಳನ್ನು ನಿಯಮಿತವಾಗಿ ಪೊಲೀಸ್ ಇಲಾಖೆಯಲ್ಲಿಯೂ ನಡೆಸುವುದರಿಂದ ದೌರ್ಜನ್ಯ ಪ್ರಕರಣಗಳಿಗೆ ಬೇಗನೆ ನ್ಯಾಯ ಸಿಗಲು ಮತ್ತು ಸಮಾಜದಲ್ಲಿ ಶಾಂತಿ ಕಾಪಾಡಲು ಸಹಾಯವಾಗುತ್ತದೆ ಎಂದು ಸಭೆಯಲ್ಲಿ ಜಾಗೃತ ಸಮಿತಿ ಸದಸ್ಯರಾದ ಸೋಮಶೇಖರ್ ಕೆರೆಗೋಡು ಅವರು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ ಶೋಭಾರಾಣಿ, ಉಪವಿಭಾಗಾಧಿಕಾರಿ ಶಿವಮೂರ್ತಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಶ್ರೀನಿವಾಸ್ ಸೇರಿದಂತೆ ಜಾಗೃತ ಸಮಿತಿ ಸದಸ್ಯರಾದ ಆನಂದ್, ಸೋಮಶೇಖರ್ ಕೆರೆಗೋಡು, ಟಿ. ಸಿ. ಗುರಪ್ಪ, ಕೆ. ನರಸಿಂಹಮೂರ್ತಿ, ಸಿ. ಮಾಧು, ಬಿ. ಟಿ. ವಿಶ್ವನಾಥ್ ಹಾಗೂ ನಾಗರತ್ನ ಅವರು ಪಾಲ್ಗೊಂಡಿದ್ದರು.

# ಡೀಮ್ಡ್ ಅರಣ್ಯ ಜಮೀನುಗಳ ಜಂಟಿ ಸರ್ವೆ ತ್ವರಿತವಾಗಿ ಪೂರ್ಣಗೊಳಿಸಲು ಡಿಸಿ ಸೂಚನೆ

**ಮಂಡ್ಯ:** ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ಹಾಗೂ ರಾಜ್ಯ ಸರ್ಕಾರದ ಆದೇಶದಲ್ಲಿ ಜಿಲ್ಲೆಯಲ್ಲಿ ಡೀಮ್ಡ್ ಫಾರೆಸ್ಟ್ ಅರಣ್ಯ ಜಮೀನನ್ನು ಮರು ಅಳತೆ ಮಾಡಲು ಸೂಚನೆ ಹಿನ್ನೆಲೆಯಲ್ಲಿ ತಾಲ್ಲೂಕು ಮಟ್ಟದಲ್ಲಿ ಅರಣ್ಯ ಇಲಾಖೆ ಮತ್ತು ಸರ್ವೆ ಇಲಾಖೆ ಜೊತೆಗೂಡಿ ಜಂಟಿ ಸರ್ವೆಯನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು

ಈ ಸಂಬಂಧ ನಡೆದ ಸಭೆಯಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿ, ಮಂಡ್ಯ ವಿಭಾಗ, ಉಪವಿಭಾಗಾಧಿಕಾರಿ ಮಂಡ್ಯ ಹಾಗೂ ಪಾಂಡವಪುರ ಮತ್ತು ಜಿಲ್ಲೆಯ ಎಲ್ಲಾ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು, ತಹಶೀಲ್ದಾರರು, ವಲಯ ಅರಣ್ಯಾಧಿಕಾರಿಗಳಿಗೆ ಸೂಚಿಸಲಾಯಿತು.

ಜಿಲ್ಲೆಯಲ್ಲಿ ಒಟ್ಟು 33 ಸಾವಿರ ಹೆಕ್ಟೇರ್ ಭೂಮಿ ಈ ಹಿಂದೆ ಡೀಮ್ಡ್ ಅರಣ್ಯ



ಪ್ರದೇಶವೆಂದು ಅಧಿಸೂಚಿತಗೊಂಡಿದ್ದು ವಾಸ್ತವವಾಗಿ ಅರಣ್ಯದ ಗುಣ ಲಕ್ಷಣಗಳಿರುವ ಜಾಗವನ್ನು ಅರಣ್ಯ ಇಲಾಖೆಗೆ ವಹಿಸಲು ಮತ್ತು ಅರಣ್ಯ ಗುಣ ಲಕ್ಷಣ ಇಲ್ಲದಿದ್ದರೂ ಅಂತಹ ಜಮೀನುಗಳನ್ನು ಡೀಮ್ಡ್ ಫಾರೆಸ್ಟ್ ಪಟ್ಟಿಯಿಂದ ಹೊರತುಪಡಿಸುವ ಉದ್ದೇಶದಿಂದ ಜಂಟಿ ಸರ್ವೆಯನ್ನು ನಡೆಸಲಾಗುತ್ತಿದ್ದು ಕಂದಾಯ, ಅರಣ್ಯ ಹಾಗೂ ಸರ್ವೆ ಇಲಾಖೆ ಯವರಿಗೆ ಜಂಟಿ ಸರ್ವೆ ಕಾರ್ಯ ಶೀಘ್ರವಾಗಿ ಪೂರ್ಣಗೊಳಿಸುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು

ಅಲ್ಲದೆ, ಪರಿಭಾವಿತ ಅರಣ್ಯ ಪಟ್ಟಿಯಿಂದ ಹೊರಗಿಡಲಾಗುವ ಜಮೀನುಗಳನ್ನು ವಸತಿ ಯೋಜನೆಗಳು, ಕುಡಿಯುವ ನೀರಿನ ಯೋಜನೆಗಳು ಹಾಗೂ ಇತರೆ ಸಾರ್ವಜನಿಕ ಉದ್ದೇಶಗಳಿಗೆ ಕಾಯ್ದಿರಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಿತ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಯಿತು.


ಸಭೆಯಲ್ಲಿ ಮಂಡ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ, ಮಂಡ್ಯ ಹಾಗೂ ಪಾಂಡವಪುರ ಉಪವಿಭಾಗಾಧಿಕಾರಿಗಳು, ಜಿಲ್ಲೆಯ ಎಲ್ಲಾ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು, ತಹಶೀಲ್ದಾರರು, ವಲಯ ಅರಣ್ಯಾಧಿಕಾರಿಗಳು ಹಾಗೂ ಸಂಬಂಧಿತ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

# ಯೋಗ ದಿನಾಚರಣೆ ಪ್ರಯುಕ್ತ ಜಾಥಾ

**ಮಡಿಕೇರಿ:** 12ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ಪ್ರತಿ ವರ್ಷದಂತೆ ಜೂನ್, 21 ರಂದು ಆಯುಷ್ ಮಂತ್ರಾಲಯ, ಭಾರತ ಸರ್ಕಾರ, ಆಯುಷ್ ಇಲಾಖೆ ಕರ್ನಾಟಕ ಸರ್ಕಾರ ಮತ್ತು ಕೊಡಗು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಯುಷ್ ಇಲಾಖೆ ವತಿಯಿಂದ ಆಚರಿಸಲು ನಿರ್ಧರಿಸಲಾಗಿದೆ.

12ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಮಂಗಳವಾರ ಕೊಡಗು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಯುಷ್ ಇಲಾಖೆ, ಕೊಡಗು ಜಿಲ್ಲೆ, ಶಾಲಾ ಶಿಕ್ಷಣ ಇಲಾಖೆ, ಯೋಗ ಒಕ್ಕೂಟ, ಮಡಿಕೇರಿ, ಸ್ಕೌಟ್ಸ್ ಮತ್ತು ಗೈಡ್ಸ್, ಜಿಲ್ಲಾ ಪೋಲೀಸ್ ಇಲಾಖೆರವರ ಸಂಯುಕ್ತ ಆಶ್ರಯದಲ್ಲಿ ನಗರದ ಗಾಂಧಿ ಮೈದಾನದಿಂದ ಹಳೆಯ ಖಾಸಗಿ ಬಸ್ ನಿಲ್ದಾಣ ಮೂಲಕ ಗಾಂಧಿ ಮೈದಾನದವರೆಗೆ ಜಾಥಾ ನಡೆಯಿತು.

ನಗರಸಭೆ ಅಧ್ಯಕ್ಷರಾದ ಪಿ.ಕಲಾವತಿ ಅವರು ಕಾರ್ಯಕ್ರಮಕ್ಕೆ ಹಸಿರು ನಿಶಾನೆ ತೋರುವುದರ ಮೂಲಕ ಜಾಥಾಗೆ ಚಾಲನೆ ನೀಡಿದರು.



ಕಾರ್ಯಕ್ರಮದಲ್ಲಿ ನಗರಸಭೆ ಸದಸ್ಯರಾದ ಶ್ರೀನಾಥ್, ಜಿಲ್ಲಾ ಆಯುಷ್ ಅಧಿಕಾರಿ ಡಾ॥ ಶೈಲಜಾ.ಜಿ, ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಡಾ॥ ರಾಮಚಂದ್ರ ಕಾಮತ್, ಶಾಲಾ ಶಿಕ್ಷಣ ಇಲಾಖೆ, ಡಿ.ಪಿ.ಓ ಶ್ರೀನಿವಾಸ, ಸೌಟ್ಸ್ ಮತ್ತು ಗೈಡ್ಸ್‌ನ ಮುಖ್ಯಸ್ಥರಾದ ಬೇಬಿ ಮ್ಯಾಥ್ಯೂ, ಯೋಗ ಒಕ್ಕೂಟದ ಮಹೇಶ್ ಕುಮಾರ್, ಯೋಗ ಮತ್ತು ಪ್ರಕೃತಿ ಚಿಕಿತ್ಸೆ, ವೈದ್ಯಾಧಿಕಾರಿ ಡಾ॥ ಅರುಣ್.ಪಿ.ಜಿ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಸುಮಾರು 400 ಜನ ಭಾಗವಹಿಸಿದ್ದರು. ನಗರ ಪೊಲೀಸ್ ಠಾಣೆ ಬಳಿ ಯೋಗ ಪ್ರದರ್ಶನ ನಡೆಯಿತು.

ಜಿಲ್ಲಾ ಆಯುಷ್ ಅಧಿಕಾರಿ ಡಾ॥ ಜಿ.ಶೈಲಜಾ ಅವರು ಮಾತನಾಡಿ ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕೆ ಯೋಗ ಮತ್ತು ವ್ಯಾಯಾಮ ಉಪಯುಕ್ತವಾಗಿದೆ ಎಂದರು.

ಯೋಗವು ಕೇವಲ ವ್ಯಾಯಾಮವಲ್ಲ. ಬದಲಿಗೆ ಒತ್ತಡವನ್ನು ಕಡಿಮೆ ಮಾಡಿ ದೇಹ ಮತ್ತು ಮನಸ್ಸಿಗೆ ಸಮತೋಲನ ನೀಡುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.

# ನೀಟ್ ಮರು ಪರೀಕ್ಷೆಯಲ್ಲಿ ಕಟ್ಟು ನಿಟ್ಟಿನ ಮಾರ್ಗಸೂಚಿ ಅನುಸರಿಸಿ: ಡಾ ಕುಮಾರ

**ಮಂಡ್ಯ:** ನೀಟ್ ಮರು ಪರೀಕ್ಷೆಯು ಜೂ.21ರಂದು ನಡೆಯಲಿದ್ದು, ಪರೀಕ್ಷಾ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ, ಪಾರದರ್ಶಕ ಮತ್ತು ಸುವ್ಯವಸ್ಥಿತವಾಗಿ ಪರೀಕ್ಷೆ ನಡೆಸುವಂತೆ ಪರೀಕ್ಷಾ ಕರ್ತವ್ಯಕ್ಕೆ ನಿಯೋಜಿಸಿರುವ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ ಕುಮಾರ ಅವರು ನಿರ್ದೇಶನ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ನಡೆಯುವ ನೀಟ್ ಪರೀಕ್ಷೆಗೆ 1958 ವಿದ್ಯಾರ್ಥಿಗಳು ಹಾಜರಾಗಲಿದ್ದು, 4 ಪರೀಕ್ಷೆ ಕೇಂದ್ರಗಳಾದ ಪಿ. ಇ.ಎಸ್ ಇಂಜಿನಿಯರಿಂಗ್ ಕಾಲೇಜು ಮಂಡ್ಯ, ಪಿ.ಇ.ಎಸ್ ವಿಜ್ಞಾನ ಕಲಾ ಮತ್ತು ವಾಣಿಜ್ಯ ಕಾಲೇಜು ಮಂಡ್ಯ, ಸರ್ಕಾರಿ ಮಹಿಳಾ ಕಾಲೇಜು ಮಂಡ್ಯ ಹಾಗೂ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜು( ಕಲ್ಲು ಕಟ್ಟಡ) ಮಂಡ್ಯ ಈ ಪರೀಕ್ಷಾ ಕೇಂದ್ರಗಳಲ್ಲಿ ನೀಟ್ ಪರೀಕ್ಷೆ ನಡೆಯಲ್ಲಿದೆ.

ಪರೀಕ್ಷೆ ಕೇಂದ್ರದಲ್ಲಿ ವಿದ್ಯಾರ್ಥಿಗಳಿಗೆ ಆಸನ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ, ಶೌಚಾಲಯದಂತಹ ಮೂಲಸೌಕರ್ಯ ವ್ಯವಸ್ಥೆಗಳು ಇರುವುದನ್ನು ಪರೀಕ್ಷಾ ಕೇಂದ್ರದ



ಮುಖ್ಯಸ್ಥರು ಮುಂಚಿತವಾಗಿ ಪರಿಶೀಲಿಸಿ ಖಾತ್ರಿಪಡಿಸಿಕೊಳ್ಳಬೇಕು ಎಂದರು.

ಪರೀಕ್ಷೆ ನಡೆಯುವ ದಿನದಂದು ವಿದ್ಯುತ್ ವ್ಯತ್ಯಯವಾಗದಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಚೆಸ್ಕಾಂ ಅಧಿಕಾರಿಗಳಿಗೆ ಸೂಚಿಸಿದರು. ಪರೀಕ್ಷಾ ಕರ್ತವ್ಯಕ್ಕೆ ನಿಯೋಜಿಸಿರುವ ಎಲ್ಲಾ ಅಧಿಕಾರಿಗಳು ತಮಗೆ ವಹಿಸಿರುವ ಜವಾಬ್ದಾರಿಯಲ್ಲಿ ಯಾವುದೇ ಲೋಪಗಳು ಕಂಡುಬಾರದಂತೆ, ಪರಸ್ಪರ ಸಮನ್ವಯದಿಂದ ಕರ್ತವ್ಯ ನಿರ್ವಹಿಸುವಂತೆ ಹಾಗೂ ವಿವಿಧ ಇಲಾಖೆಗಳು ಪರೀಕ್ಷೆಯ ಅವಧಿಯಲ್ಲಿ ಅಗತ್ಯ ಸಹಕಾರ ನೀಡುವಂತೆ ತಿಳಿಸಿದರು. ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ. ಶೋಭಾರಾಣಿ, ಮಂಡ್ಯ ಉಪ ವಿಭಾಗಧಿಕಾರಿ ಶಿವಮೂರ್ತಿ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಜೂ.24ರಂದು ರಾಜ್ಯ ಮಟ್ಟದ ಕಬ್ಬು ಬೆಳೆಗಾರರ ಸಮಾವೇಶ

**ಮಂಡ್ಯ:** ಕರ್ನಾಟಕ ಕಬ್ಬು ಬೆಳೆಗಾರರ ಸಂಘದಿಂದ ಕರ್ನಾಟಕ ಕಬ್ಬು ಬೆಳೆಗಾರರ ರಾಜ್ಯ ಸಮಾವೇಶವನ್ನು ಜೂ.24ರಂದು ಬೆಳಗ್ಗೆ 11 ಗಂಟೆಗೆ ನಗರದ ಕರ್ನಾಟಕ ಸಂಘದ ಆವರಣದಲ್ಲಿ ಆಯೋಜಿಸಲಾಗಿದೆ ಎಂದು ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಎನ್.ಎಲ್.ಭರತ್‌ರಾಜ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ ಅವರು, ಸಮಾವೇಶದ ಮೂಲಕ ಶೇ.9.50ರಷ್ಟು ಸಕ್ಕರೆ ಇಳುವರಿ ಆಧಾರದಲ್ಲಿ ಟನ್ ಕಬ್ಬಿಗೆ 5500 ರೂ. ಬೆಂಬಲ ಬೆಲೆ, ಟನ್ ಕಬ್ಬಿಗೆ 500 ಎಸ್‌ಐಪಿ ನಿಗದಿ, ಕಾರ್ಖಾನೆಯ ಸಮಿತಿಗೆ 5 ಮಂದಿ ಬೆಳೆಗಾರರ ನೇಮಕ, 14 ದಿನದೊಳಗೆ ಹಣ ಪಾವತಿ, ಕಾರ್ಖಾನೆಗಳಿಂದ ನೀಡಬೇಕಾದ 50 ರೂ. ಪ್ರೋತ್ಸಾಹ ಧನ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುಂತೆ ಸರಕಾರವನ್ನು ಒತ್ತಾಯಿಸಲಾಗುವುದು ಎಂದರು.




ಸಮಾವೇಶದಲಿ ಅಖಿಲ ಭಾರತ ಕಬ್ಬು ಬೆಳೆಗಾರರ ಸಂಘದ ರಾಷ್ಟ್ರಾಧ್ಯಕ್ಷ ಡಿ.ರವೀಂದ್ರನ್, ಕರ್ನಾಟಕ ಕಬ್ಬು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಜಿ.ನಾಗರಾಜ್, ಪ್ರಧಾನಕಾರ್ಯದರ್ಶಿ ಎನ್.ಎಲ್.ಭರತ್‌ರಾಜ್, ಕರ್ನಾಟಕ ರಾಜ್ಯ ಪ್ರಾಂತ ರೈ ಸಂಘದ ರಾಜ್ಯಾಧ್ಯಕ್ಷ ಯು.ಬಸವರಾಜ, ಪ್ರಧಾನ ಕಾರ್ಯದರ್ಶಿ ಟಿ.ಯಶವಂತ ಮುಂತಾದವರು ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಜಿಲ್ಲೆ ಎಲ್ಲ ಕಬ್ಬು ಬೆಳೆಗಾರರು ಸಮಾವೇಶದಲ್ಲಿ ಭಾಗವಹಿಸಿ ಅನಿಸಿಕೆ, ಅಭಿಪ್ರಾಯ, ಒತ್ತಾಯಗಳನ್ನು ಮಂಡಿಸುವಂತೆ ಮನವಿ ಮಾಡಿದರು.

ಗೋಷ್ಠಿಯಲ್ಲಿ ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾ ಸಂಚಾಲಕರಾದ ಲಿಂಗರಾಜಮೂರ್ತಿ, ಸಿದ್ದೇಗೌಡ, ಮುಖಂಡರಾದ ಬಿ.ರವಿಕುಮಾರ್, ಪ್ರಮೀಳ, ಮಧುಕುಮಾರ್, ಕಿರಣ್‌ಕುಮಾರ್, ಮರಿಲಿಂಗೇಗೌಡ ಇತರರು ಇದ್ದರು.

## ಅರ್ಜಿ ಆಹ್ವಾನ

**ಮಡಿಕೇರಿ:** ಕರ್ನಾಟಕ ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿ ನಿಗಮ ವತಿಯಿಂದ 2026-27ನೇ ಸಾಲಿನ ಕ್ರಿಶ್ಚಿಯನ್ ಜನಾಂಗದವರಿಗೆ ಅರಿವು ಯೋಜನೆಯಡಿ ವಿದ್ಯಾಭ್ಯಾಸ ಸಾಲ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ನಿಗಮದ ವೆಬ್‌ಸೈಟ್: https://kccdclonline.karnataka.gov.in ಮೂಲಕ ಆನ್‌ಲೈನ್ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ಜಿಲ್ಲಾ ವ್ಯವಸ್ಥಾಪಕರ ಕಚೇರಿ, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಮೌಲಾನಾ ಆಜಾದ್ ಭವನ, ಗ್ರಾಮಾಂತರ ಪೋಲೀಸ್ ಠಾಣೆ ಹತ್ತಿರ, ಎಫ್‌ಎಂಸಿ ಕಾಲೇಜು ರಸ್ತೆ, ಮಡಿಕೇರಿ ಇಲ್ಲಿಗೆ ಭೇಟಿ ನೀಡಬಹುದು ಹಾಗೂ ದೂ.ಸಂ.08272-201449 ನ್ನು ಸಂಪರ್ಕಿಸಬಹುದು ಎಂದು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

# ನೈಸರ್ಗಿಕ ಕೃಷಿ ಕಾರ್ಯಾಗಾರ

**ಮಂಡ್ಯ:** ಭಾರತೀಯ ಜನತಾ ಪಾರ್ಟಿ ರೈತ ಮೋರ್ಚಾದಿಂದ ಜೂ.18ರಂದು ಬೆಳಗ್ಗೆ 10.30ಕ್ಕೆ ತಾಲೂಕಿನ ಹೊನ್ನಾಯ್ಕನಹಳ್ಳಿ ಗ್ರಾಮದ ನಿರಂಜನ್ ಅವರ ಹೊಲದಲ್ಲಿ ನೈಸರ್ಗಿಕ ಸಾವಯವ ಕೃಷಿ ಕಾರ್ಯಾಗಾರವನ್ನು ಆಯೋಜಿಸಲಾಗಿದೆ ಎಂದು ರೈತ ಮೋರ್ಚಾದ ಜಿಲ್ಲಾಧ್ಯಕ್ಷ ಅಶೋಕ ಎಸ್.ಡಿ.ಜಯರಾಮ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ರೈತರಲ್ಲಿ ಸಾವಯವ ಕೃತಿ ಪದ್ದತಿಯ ಅಳವಡಿಕೆ ಹಾಗೂ ನೈಸರ್ಗಿಕವಾಗಿ ಭೂಮಿಯ ಫಲವತ್ತತೆ ಹೆಚ್ಚಿಸುವ ಕುರಿತು ಜಾಗೃತಿ ಮೂಡಿಸಲು ಈ ಕಾರ್ಯಾಗಾರ ಆಯೋಜಿಸಲಾಗಿದೆ. ಹಾಗೂ ಕೇಂದ್ರ ಸರಕಾರದ ಯೋಜನೆಗಳ ಕುರಿತು ಅರಿವು ಮೂಡಿಸಲಾಗುತ್ತದೆ ಎಂದರು.

ಕಾರ್ಯಾಗಾರದಲ್ಲಿ ಬಿಜೆಪಿ ರೈತ ಮೋರ್ಚಾದ ರಾಷ್ಟ್ರೀಯ ಉಪಾಧ್ಯಕ್ಷ ಜಯಸೂರ್ಯಕುಮಾರ್ ಮುಖ್ಯ ಭಾಷಣಕಾರರಾಗಿ ಮಾತನಾಡುವರು, ಮುಖ್ಯ ಅತಿಥಿಗಳಾಗಿ ರಾಜ್ಯಾಧ್ಯಕ್ಷ ಎ.ಎಸ್.ಪಾಟೀಲ್ ನಡಹಳ್ಳಿ, ಪ್ರಧಾನ ಕಾರ್ಯದರ್ಶಿ ಡಾ.ನವೀನ್ ಕುಮಾರ್, ರಾಜ್ಯ ಕಾರ್ಯದರ್ಶಿ ಎಚ್.ಆರ್. ಅಶೋಕ್‌ಕುಮಾರ್, ಮಾಜಿ ಉಪಾಧ್ಯಕ್ಷ ಕೆ.ಎಸ್.ನಂಜುಂಡೇಗೌಡ, ಬಿಜೆಪಿ ಜಿಲ್ಲಾಧ್ಯಕ್ಷ ಡಾ.ಇಂದ್ರೇಶ್, ಮೈಸೂರು ವಿಭಾಗ ಸಹ ಸಂಘಟನಾ ಕಾರ್ಯದರ್ಶಿ ಡಾ.ಈ.ಸಿ.ನಿಂಗರಾಜೇಗೌಡ, ರಾಜ್ಯ ಕಾರ್ಯಕಾರಣಿ ಸದಸ್ಯ ಡಾ.ಸಿದ್ದರಾಮಯ್ಯ, ಜಿಲ್ಲಾ ಮುಖಂಡರಾದ ಶಿವಣ್ಣ ಚಂದಗಾಲು, ವಿದ್ಯಾನಾಗೇಂದ್ರ, ವಿಶೇಷ ಆಹ್ವಾನಿತರಾಗಿ ಮಂಡ್ಯ ಗ್ರಾಮಂತರ ರೈತ ಮೋರ್ಚಾದ ಅಧ್ಯಕ್ಷ ವರದರಾಜು, ಮಾಜಿ ಜಿಲ್ಲಾಧ್ಯಕ್ಷ ಜೋಗಿಗೌಡ, ಬಿಜೆಪಿ ಗ್ರಾಮಾಂತರ ಅಧ್ಯಕ್ಷ ಭೀಮೇಶ್, ನಗರ ಅಧ್ಯಕ್ಷ ಪ್ರಸನ್ನಕುಮಾರ್ ಇತರರು ಭಾಗವಹಿಸುವರು ಎಂದು ವಿವರಿಸಿದರು. ಕಾರ್ಯಾಗಾರದಲ್ಲಿ ನೈಸರ್ಗಿಕ ಕೃಷಿ ಉತ್ಪನ್ನಗಳ 10 ಸ್ಟಾಲ್‌ಗಳನ್ನು ತೆರೆಯಲಾಗುವುದು. ಅಲ್ಲಿ ಉತ್ಪನ್ನಗಳ ಮಾರಾಟ ಮತ್ತು ಪ್ರದರ್ಶನಕ್ಕೆ ಅವಕಾಶ ಮಾಡಿಕೊಡಲಾಗುವುದು. 500ಕ್ಕೂ ಹೆಚ್ಚು ಮಂದಿಗೆ ಊಟದ ವ್ಯವಸ್ಥೆ ಮಾಡಲಾಗಿದೆ ಎಂದು ಇದೇ ವೇಳೆ ಮಾಹಿತಿ ನೀಡಿದರು. ಗೋಷ್ಠಿಯಲ್ಲಿ ರೈತ ಮೋರ್ಚಾ ರಾಜ್ಯ ಕಾರ್ಯದರ್ಶಿ ಎಚ್.ಆರ್.ಅಶೋಕ್‌ಕುಮಾರ್, ಮಾಜಿ ಜಿಲ್ಲಾಧ್ಯಕ್ಷ ಜೋಗಿಗೌಡ, ಮಹೇಂದ್ರ, ಸಿ.ಎಂ.ಜವರೇಗೌಡ, ಸಿದ್ದರಾಜು ಇದ್ದರು.





# ಮತದಾರರ ಪಟ್ಟಿಯಿಂದ ಅರ್ಹರು ಬಿಟ್ಟು ಹೋಗದಂತೆ ಎಚ್ಚರ ವಹಿಸಿ: ತಹಶೀಲ್ದಾರ್

**ಮಡಿಕೇರಿ:**-ಮತದಾರರ ಪಟ್ಟಿಯಲ್ಲಿ ಅರ್ಹ ಮತದಾರರು ಹೊರಗುಳಿಯದಂತೆ ಮತ್ತು ಹೊಸ ಮತದಾರರನ್ನು ಸೇರಿಸುವ ನಿಟ್ಟಿನಲ್ಲಿ ಬೂತ್ ಮಟ್ಟದ ಅಧಿಕಾರಿಗಳ ಸಹಕಾರ ಮುಖ್ಯ. ಆದ್ದರಿಂದ ಬೂತ್‌ಮಟ್ಟದ ಏಜೆಂಟರು ಮತ್ತು ಬೂತ್ ಮಟ್ಟದ ಅಧಿಕಾರಿಗಳು ಸಮನ್ವಯ ಸಾಧಿಸಿಕೊಂಡು ಕಾರ್ಯನಿರ್ವಹಿಸುವಂತೆ ಮಡಿಕೇರಿ ತಾಲ್ಲೂಕು ತಹಶೀಲ್ದಾರ್ ಆರ್.ಶ್ರೀಧರ್ ಅವರು ಹೇಳಿದರು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಮಂಗಳವಾರ ಮತಗಟ್ಟೆ ಏಜೆಂಟರುಗಳಿಗೆ ಎಸ್‌ಐಆರ್ ಕುರಿತು ನಡೆದ ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಏಜೆಂಟರು ಎಸ್‌ಐಆರ್ ಪ್ರಕ್ರಿಯೆಯ ಸಂಪೂರ್ಣ ಮಾಹಿತಿ ತಿಳಿದುಕೊಂಡು, ಪಾರದರ್ಶಕವಾಗಿ ಮತದಾರರ ಪಟ್ಟಿ ಸಿದ್ಧಗೊಳ್ಳಲು ಸಹಕರಿಸಬೇಕು, ಮತದಾರರಿಗೆ ಯಾವುದೇ ತೊಂದರೆಯಾಗದಂತೆ ಗಮನಹರಿಸಬೇಕು. ಕೈಬಿಟ್ಟ ಹೆಸರುಗಳನ್ನು ಮತ್ತೆ ಸೇರಿಸಲು ನಮೂನೆ ಭರ್ತಿ ಮಾಡಲು ಸಹಾಯ ಮಾಡಬೇಕು, ಮತಗಟ್ಟೆ ಹಂತದಲ್ಲಿನ ದೋಷಗಳನ್ನು ಗುರುತಿಸಿ, ಚುನಾವಣಾ ಅಧಿಕಾರಿಗಳಿಗೆ ಸರಿಯಾದ ಸಮಯದಲ್ಲಿ ಮಾಹಿತಿ ನೀಡಬೇಕು ಎಂದು ಆರ್.ಶ್ರೀಧರ್ ಅವರು ತಿಳಿಸಿದರು.

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯನ್ನು



ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು, ಮತದಾರರ ಮಾಹಿತಿ ನವೀಕರಣ, ಹೊಸ ಮತದಾರರ ನೋಂದಣಿ, ಮೃತ ಹಾಗೂ ಸ್ಥಳಾಂತರಗೊಂಡ ಮತದಾರರ ಹೆಸರುಗಳ ತಿದ್ದುಪಡಿ ಮತ್ತಿತರ ಸೇರಿದಂತೆ ವಿವಿಧ ವಿಷಯಗಳ ಕುರಿತು ಕಾರ್ಯಾಗಾರದಲ್ಲಿ ವಿವರವಾದ ತರಬೇತಿ ನೀಡಲಾಯಿತು.

ತರಬೇತುದಾರರಾದ ಎಸ್.ಡಿ.ಪ್ರಶಾಂತ್ ಅವರು ಮಾತನಾಡಿ, ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯು ಭಾರತೀಯ ಚುನಾವಣಾ ಆಯೋಗದ ವತಿಯಿಂದ ನಡೆಯುವ ಮಹತ್ವದ ಕಾರ್ಯವಾಗಿದೆ. ಮತಗಟ್ಟೆ ಮಟ್ಟದ ಏಜೆಂಟರುಗಳು ಅರ್ಹ ಮತದಾರರನ್ನು ಪಟ್ಟಿಗೆ ಸೇರಿಸಲು, ತಪ್ಪುಗಳನ್ನು ತಿದ್ದಲು ಮತ್ತು ಅರ್ಹರಲ್ಲದ ಮತದಾರರನ್ನು ತೆಗೆದುಹಾಕುವ ಕಾರ್ಯವನ್ನು ಜವಾಬ್ದಾರಿಯಿಂದ ನಿರ್ವಹಿಸಬೇಕು ಎಂದು ಹೇಳಿದರು.

ಮತದಾರರಾಗಲು ಭಾರತದ ಪ್ರಜೆಯಾಗಿರಬೇಕು, ಅರ್ಹತಾ ದಿನಾಂಕಗಳಲ್ಲಿ 18 ವರ್ಷಕ್ಕಿಂತ ಕಡಿಮೆಯಾಗಿರಬಾರದು, ಆ ಮತಗಟ್ಟೆಯ ಸಾಮಾನ್ಯ ನಿವಾಸಿಯಾಗಿರಬೇಕು ಎಂದರು.

ಅಧಿಕಾರಿಗಳು ನಿರ್ದಿಷ್ಟ ಅವಧಿಯಲ್ಲಿ ಪ್ರತಿ ಮನೆಗೆ ಭೇಟಿ ನೀಡಿ, ಮತದಾರರ ಪಟ್ಟಿಯಲ್ಲಿರುವ ಹೆಸರುಗಳನ್ನು ಪರಿಶೀಲಿಸಬೇಕು, 18 ವರ್ಷ ತುಂಬಿದ ಯುವಕ-ಯುವತಿಯರು ಮತ್ತು ಹೊಸದಾಗಿ ಸ್ಥಳಾಂತರಗೊಂಡ ಅರ್ಹ ನಾಗರಿಕರಿಂದ ಫಾರ್ಮ್-6 ಅನ್ನು ಭರ್ತಿ ಮಾಡಿಸಿ ನೋಂದಾಯಿಸಿಕೊಳ್ಳಬೇಕು, ಮೃತಪಟ್ಟವರು, ಬೇರೆಡೆ ಸ್ಥಳಾಂತರಗೊಂಡವರು ಅಥವಾ ನಕಲಿ ಮತದಾರರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕಲು ಫಾರ್ಮ್-7 ಅನ್ನು ಸ್ವೀಕರಿಸಬೇಕು, ಹೆಸರು, ವಿಳಾಸ, ವಯಸ್ಸು ಅಥವಾ ಭಾವಚಿತ್ರ ತಪ್ಪಾಗಿದ್ದರೆ ಅವುಗಳನ್ನು ಸರಿಪಡಿಸಲು ಹಾಗೂ ಒಂದೇ ವಿಧಾನಸಭಾ ಕ್ಷೇತ್ರದೊಳಗೆ ವಿಳಾಸ ಬದಲಾವಣೆಗೆ ಫಾರ್ಮ್-8 ಅನ್ನು ಸಂಗ್ರಹಿಸಬೇಕು ಎಂದು ಹೇಳಿದರು.

ಗಣತಿ ಪ್ರಕ್ರಿಯೆಯಲ್ಲಿ ಅಗತ್ಯವಿರುವ ರಿಜಿಸ್ಟರ್‌ಗಳು ಮತ್ತು ಇತರ ಯಾವುದೇ ಅಗತ್ಯ ಲೇಖನ ಸಾಮಾಗ್ರಿಗಳನ್ನು ಹೊಂದಿರುವ ವಿಶೇಷ ತೀವ್ರ ಪರಿಷ್ಕರಣೆ ಎಂದು ಲೇಬಲ್ ಮಾಡಲಾದ ಕಿಟ್ ಬ್ಯಾಗ್, ಯಾವುದೇ ಸೂಚಿಸಿದ ದಿನಾಂಕದದಂದು ಅಸ್ತಿತ್ವದಲ್ಲಿರುವ ಪ್ರತಿಯೊಬ್ಬ ಮತದಾರರಿಗೆ ಅಸ್ತಿತ್ವದಲ್ಲಿರುವ ಮತದಾರರ ಪೂರ್ವ ಮುದ್ರಿತ ವಿವರಗಳೊಂದಿಗೆ ಎಣಿಕೆ ನಮೂನೆಗಳ ಜೆರಾಕ್ಸ್ ಪ್ರತಿಗಳು, ಎಣಿಕೆಯ ಸಮಯದಲ್ಲಿ ಯಾವುದೇ ಮನೆಗೆ ಬೀಗ ಹಾಕಲಾಗಿದೆ ಅಥವಾ ಮುಚ್ಚಲಾಗಿದೆ ಎಂದು ಬಿಎಲ್‌ಒ ಕಂಡುಕೊಂಡರೆ, ಅವನು/ಅವಳು ಎಣಿಕೆ ನಮೂನೆಗಳನ್ನು ಮನೆಯಲ್ಲಿ ಅಳವಡಿಸಬೇಕು ಮತ್ತು ಭರ್ತಿ ಮಾಡಿದ ನಮೂನೆಗಳನ್ನು ಸಂಗ್ರಹಿಸಲು ಕನಿಷ್ಠ ಮೂರು ಸಲ ಮನೆಗೆ ಭೇಟಿ ನೀಡಬೇಕು ಎಂದರು.

ಮೊದಲೇ ಭರ್ತಿ ಮಾಡಿದ ಎಣಿಕೆ ನಮೂನೆಯನ್ನು ಡೌನ್ಲೋಡ್ ಮಾಡಬಹುದು ಮತ್ತು ಭರ್ತಿ ಮಾಡಿದ ನಮೂನೆಗಳು ಮತ್ತು ದಾಖಲೆಗಳನ್ನು ಆನ್‌ಲೈನ್ ಮೋಡ್ ಮೂಲಕ ಅಪ್ಲೋಡ್ ಮಾಡಬಹುದು ಎಂದು ಬಿಎಲ್‌ಒ ಮತದಾರರಿಗೆ ತಿಳಿಸಬೇಕು ಎಂದು ಹೇಳಿದರು.

ಬಿಎಲ್‌ಒಗಳು ಅಗತ್ಯ ದಾಖಲೆಗಳೊಂದಿಗೆ ಎಣಿಕೆ ನಮೂನೆಯ ಒಂದು ಪ್ರತಿಯನ್ನು ತನ್ನೊಂದಿಗೆ ಇಟ್ಟುಕೊಳ್ಳಬೇಕು ಮತ್ತು ಅರ್ಜಿದಾರರು ಇಟ್ಟುಕೊಳ್ಳಬೇಕಾದ ಎಣಿಕೆ ನಮೂನೆಯ ಇನ್ನೊಂದು ಪ್ರತಿಯ ಮೇಲೆ ನಮೂನೆ ಮತ್ತು ದಾಖಲೆಯ ಸ್ವೀಕೃತಿಯನ್ನು ನೀಡಬೇಕು ಎಂದು ವಿವರಿಸಿದರು.

ಕಾರ್ಯಾಗಾರದಲ್ಲಿ ಚುನಾವಣಾ ಶಿರಸ್ತೆದಾರರು ಹಾಗೂ ಸಿಬ್ಬಂದಿಗಳು, ಬೂತ್ ಮಟ್ಟದ ಅಧಿಕಾರಿಗಳು ಮತ್ತು ಏಜೆಂಟರುಗಳು ಇದ್ದರು.



# ಬೆಲ್ಲಿ ಫ್ಯಾಟ್ ಎಂಬ ಬೊಜ್ಜು ಹಾಗೂ ಅದರ ಮೂಲ



| ವೀಣಾ ಹೇಮಂತ್‌ಗೌಡ ಪಾಟೀಲ್

ನಾನು ಎಲ್ಲಾ ಬಗೆಯ ಎಕ್ಸರ್ಸೈಜ್ ಮಾಡ್ತೀನಿ, ಊಟದಲ್ಲೂ ಅಷ್ಟೇ. ಡಯಟ್ ನ ತುಂಬಾ ಕಟ್ಟುನಿಟ್ಟಾಗಿ ಫಾಲೋ ಮಾಡ್ತೀನಿ ಆದರೂ ಕೂಡ ನನ್ನ ಸೊಂಟದ ಸುತ್ತಲಿನ ಬೊಜ್ಜು ಕಡಿಮೆಯಾಗುತ್ತಿಲ್ಲ. ಏನು ಮಾಡೋದು ಅಂತ ತೋಚೋದಿಲ್ಲ ಎಂದು ಹೇಳುವ ನೂರಾರು ಜನರನ್ನು ನಾವು ಪ್ರತಿದಿನ ನೋಡುತ್ತೇವೆ.

ನಿಜ... ಡೊಳ್ಳು ಹೊಟ್ಟೆಯ ಗಣಪನನ್ನು ಪೂಜಿಸುವ ನಾವು ನಮ್ಮ ಹೊಟ್ಟೆ ದೊಡ್ಡದಾದರೆ ಇನ್ನಿಲ್ಲದ ಬೇಸರ, ಮುಜುಗರ ಪಟ್ಟುಕೊಳ್ಳುತ್ತೇವೆ ಹಾಗೂ ಅದನ್ನು ನಿವಾರಿಸಲು ಪ್ರಯತ್ನಗಳನ್ನು ಕೂಡ ಮಾಡುತ್ತೇವೆ. ಎಷ್ಟೋ ಬಾರಿ ನಾವು ರೋಗದ ಲಕ್ಷಣಗಳಿಗೆ ಚಿಕಿತ್ಸೆ ಮಾಡುತ್ತೇವೆಯೇ ಹೊರತು ರೋಗದ ಮೂಲವನ್ನಲ್ಲ. ಸೊಂಟದ ಸುತ್ತಲಿನ ಬೊಜ್ಜು ಕೂಡ ಅಷ್ಟೇ, ಕೇವಲ ಅತಿಯಾಗಿ ತಿನ್ನುವುದರಿಂದ, ವ್ಯಾಯಾಮರಹಿತ ಜೀವನ ಶೈಲಿಯಿಂದ ಮಾತ್ರ ಬೊಜ್ಜು ಬರುವುದಿಲ್ಲ. ಬೊಜ್ಜು ಬರಲು ಹತ್ತು ಹಲವಾರು ಕಾರಣಗಳಿವೆ . ಒಂದೊಂದಾಗಿ ಅವುಗಳನ್ನು ಅರಿತುಕೊಂಡರೆ ನಮಗೆ ತೊಂದರೆಯ ಮೂಲದ ಅರಿವಾಗುತ್ತದೆ.

ಬೆಲ್ಲಿ ಫ್ಯಾಟ್ ಎಂದು ಇಂಗ್ಲೀಷಿನಲ್ಲಿ ಕರೆಯಲ್ಪಡುವ ಈ ಹೊಟ್ಟೆಯ ಬೊಜ್ಜು ಪುರುಷರಲ್ಲೂ ಹೆಚ್ಚು ಇದಕ್ಕೆ ಕೇವಲ ವಂಶವಾಹಿಗಳು ಮಾತ್ರ ಕಾರಣವಲ್ಲ ಬದಲಾಗಿ

- ಅತಿಯಾದ ಧೂಮ್ರಪಾನ... ದೇಹದಲ್ಲಿ ಕಾರ್ಟಿಸೋಲ್ಗಳ ಪ್ರಮಾಣವನ್ನು ಹೆಚ್ಚಿಸಿ ಕೊಬ್ಬು ಶೇಖರವಾಗಲು ಅದರಲ್ಲೂ ಹೊಟ್ಟೆಯ ಸುತ್ತಲೂ ಹೆಚ್ಚು ಶೇಖರವಾಗಲು ಅವಕಾಶ ಮಾಡಿಕೊಡುತ್ತದೆ. *ಕುಡಿತ... ಆಲ್ಕೋಹಾಲ್ ನಲ್ಲಿರುವ ಹೆಚ್ಚಿನ ಕ್ಯಾಲೊರಿಗಳು ಹೊಟ್ಟೆಯ ಹಾಗೂ ಸೊಂಟದ ಸುತ್ತಣ ಕೊಬ್ಬಿನ ಶೇಖರಣೆಗೆ ಕಾರಣವಾಗುತ್ತದೆ.
- ವ್ಯಾಯಾಮರಹಿತ ಜೀವನಶೈಲಿ... ಯಾವುದೇ ರೀತಿಯ ದೈಹಿಕ ಚಟುವಟಿಕೆಗಳನ್ನು ಹೊಂದಿರದ ಕಾರಣ ಶೇಖರವಾದ ಕೊಬ್ಬಿನಿಂದ ತೂಕ ಹೆಚ್ಚಳ ಹಾಗೂ ಸೊಂಟದ ಸುತ್ತಲ ಬೊಜ್ಜಿಗೆ ಕಾರಣವಾಗುತ್ತದೆ
- ಆಹಾರ ಸೇವನೆ... ಅಸಮತೋಲಿತ ಆಹಾರ ಸೇವನೆ ಹಾಗೂ ಅತಿಯಾದ ಸಂಸ್ಕರಿತ ಆಹಾರ ಸೇವನೆಯ ಪರಿಣಾಮವಾಗಿ ತೂಕ ಹೆಚ್ಚಾಗುವ ಸಾಧ್ಯತೆ ಬಹಳ
- ಒತ್ತಡ..... ದೈನಂದಿನ ಬದುಕಿನಲ್ಲಿ ವಿಪರೀತ ಒತ್ತಡವನ್ನು ಅನುಭವಿಸುವವರ ಕಾರ್ಟಿಸೋಲ್ ಮಟ್ಟ ಹೆಚ್ಚಾಗುವ ಕಾರಣ ಅವರು ಹೆಚ್ಚು ಹೆಚ್ಚು ತಿನ್ನುತ್ತಾರೆ ಇದು ಕೂಡ ಅವರ ಬೊಜ್ಜಿಗೆ ಕಾರಣವಾಗುತ್ತದೆ.
- ನಿದ್ರಾರಾಹಿತ್ಯತೆ... ನೆಮ್ಮದಿಯ ನಿದ್ರೆಗೆ ಅವಕಾಶವಿಲ್ಲದ ರೀತಿಯ ಒತ್ತಡ ಹಾಗೂ ಅತಿಯಾದ ಸ್ಕ್ರೀನ್ ಟೈಮ್ ನಿಂದಾಗಿ ನಿದ್ರೆಯಿಂದ ವಂಚಿತರಾಗುತ್ತಾರೆ. ಅಪೂರ್ಣವಾದ ನಿದ್ರೆಯ ತೊಂದರೆಯನ್ನು ಅನುಭವಿಸುವವರು ಕೂಡ ಬೊಜ್ಜಿನಿಂದ ಬಳಲುತ್ತಾರೆ.
- ಅತಿಯಾದ ಹೊಟ್ಟೆಯ ಸುತ್ತಣ ಬೊಜ್ಜು ಕೇವಲ ನೋಡಲು ಮುಜುಗರ ಇಲ್ಲವೇ ಅಸಹ್ಯವನ್ನು ಉಂಟು ಮಾಡುವುದಿಲ್ಲ ಬದಲಾಗಿ ಅನೇಕ ದೈಹಿಕ ತೊಂದರೆಗಳಿಗೆ ಕಾರಣವಾಗುತ್ತದೆ



ಹೊಟ್ಟೆಯ ಸುತ್ತಲೂ ಹೆಚ್ಚಿದ ಬೊಜ್ಜು ತೂಕ ಹೆಚ್ಚಳಕ್ಕೆ ಕಾರಣ ವಾಗುತ್ತದೆ ಫ್ಯಾಟಿ ಲಿವರ್ ನ ತೊಂದರೆಯಿಂದಾಗಿ ಪಿತ್ತಕೋಶದ ಕಾರ್ಯಕ್ಷಮತೆ ಕುಂಠಿತವಾಗುತ್ತದೆ

ದೇಹದಲ್ಲಿ ಒಳ್ಳೆಯ ಕೊಲೆಸ್ಟ್ರಾಲನ್ನು ಕುಂಠಿತಗೊಳಿಸಿ ಕೆಟ್ಟ ಕೊಲೆಸ್ಟ್ರಾಲನ ಹೆಚ್ಚಳಕ್ಕೆ ಕಾರಣವಾಗುತ್ತದೆ.

ಹಾರ್ಮೋನುಗಳ ಅಸಮ ತೋಲನಕ್ಕೆ ಹಾಗೂ ಪಿ ಸಿ ಓ ಎಸ್ ತೊಂದರೆಗೆ ಕಾರಣವಾಗುತ್ತದೆ

ಇನ್ಸುಲಿನ್ ಉತ್ಪಾದನೆಯನ್ನು ಕುಂಠಿತಗೊಳಿಸಿ ಟೈಪ್ ಟು ಡಯಾಬಿಟಿಸ್ ಗೆ ಕಾರಣವಾಗುತ್ತದೆ

ರಕ್ತದ ಒತ್ತಡವನ್ನು ಹೆಚ್ಚಿಸಿ ಹೃದಯದ ಕಾರ್ಯಕ್ಷಮತೆಗೆ ಕಂಟಕವಾಗುತ್ತದೆ, ಹೃದಯಕ್ಕೆ ಹೆಚ್ಚು ಒತ್ತಡ ಹೇರುತ್ತದೆ.

ನಿಮಗೆ ಇನ್ನೊಂದು ಆಸಕ್ತಿಕರ ವಿಷಯ ಗೊತ್ತಿರಬಹುದು ಬಹಳಷ್ಟು ಚಲನಚಿತ್ರ ತಾರೆಯರು

ತಾವು ಅತಿಯಾದ ಒತ್ತಡಕ್ಕೆ ಒಳಗಾದಾಗ ಹೆಚ್ಚು ತಿನ್ನುತ್ತೇವೆ ಎಂಬುದನ್ನು ಸಂದರ್ಶನಗಳಲ್ಲಿ ಒಪ್ಪಿಕೊಂಡಿರುತ್ತಾರೆ... ಇದು ನಿಜವೂ ಹೌದು ವಿಪರೀತ ಒತ್ತಡವು ದೇಹದಲ್ಲಿ ಕಾರ್ಟಿಸೋಲ್ ಎಂಬ ಕೆಟ್ಟ ಹಾರ್ಮೋನುಗಳನ್ನು ಬಿಡುಗಡೆ ಮಾಡುತ್ತದೆ.

ನಮ್ಮ ದೇಹದ ಅಡ್ರಿನಲ್ ಗ್ರಂಥಿಗಳಿಂದ ಬಿಡುಗಡೆಯಾಗುವ ಈ ಕೆಟ್ಟ ಹಾರ್ಮೋನ್ ಗಳು ಶೀಘ್ರ ದೊರೆಯುವ ಶಕ್ತಿ ಮತ್ತು ತಕ್ಷಣದ ಸಂತೃಪ್ತಿಗಾಗಿ ಅತಿಯಾದ ಸಿಹಿ ಪದಾರ್ಥಗಳನ್ನು ಹಾಗೂ ಕೊಬ್ಬಿನ ಪದಾರ್ಥಗಳನ್ನು ತಿನ್ನುವ ಆಸೆಯನ್ನು ಹೆಚ್ಚಿಸುತ್ತವೆ. ಹೆಚ್ಚಾದ ಕಾರ್ಟಿಸೋಲ್ ನ ಬಿಡುಗಡೆಯು ದೇಹದ ಅದರಲ್ಲೂ ವಿಶೇಷವಾಗಿ ಹೊಟ್ಟೆಯ ಭಾಗದಲ್ಲಿ ಕೊಬ್ಬನ್ನು ಶೇಖರಿಸಲು ಆವಕಾಶ ಮಾಡಿಕೊಡುತ್ತದೆ. ಇನ್ನು ಹದಿಹರೆಯದ ಯುವಕರಲ್ಲಿ ಮತ್ತು ಯುವತಿಯರಲ್ಲಿ ಹಾರ್ಮೋನುಗಳ ಅಸಮತೋಲನಕ್ಕೆ ಕಾರಣವಾಗಿ ಹೆಚ್ಚು ಈಸ್ಟ್ರೋಜನ್ ಗಳನ್ನು ಹಾಗೂ ಕಡಿಮೆ ಪ್ರೊಜೆಸ್ಟಿರಾನ್‌ಗಳನ್ನು ಬಿಡುಗಡೆ ಮಾಡುತ್ತದೆ ಇದು ಸಂತಾನ ಹೀನತೆಗೆ ಕಾರಣವಾಗುತ್ತದೆ ಕೂಡ.... ಇದೊಂದು ನಿರಂತರ ತಿರುಗಣೆಯಂತೆ ತಿರುಗುತ್ತಲೇ ಹೋಗುತ್ತದೆ.

ನೋಡಿದಿರಾ ಸ್ನೇಹಿತರೆ .? ಸಮಸ್ಯೆಯ ಬೇರು ಇಷ್ಟು ಆಳವಾಗಿ ಹರಡಿರುವಾಗ ನಾವು ಅದರ ಕಾಂಡದ ಭಾಗಕ್ಕೆ ಅಂದರೆ ನಮ್ಮ ಕಣ್ಣಿಗೆ ಕಾಣುವ ಹೊಟ್ಟೆಯ ಸುತ್ತಲ ಭಾಗಕ್ಕೆ ಚಿಕಿತ್ಸೆ ನೀಡಿದರೆ ಸಾಲದು... ಅಲ್ವೇ ?



ಪರಿಹಾರಗಳು ಖಂಡಿತವಾಗಿಯೂ ಇವೆ... ನಾವೇ ಸೃಷ್ಟಿಸಿದ ನಮ್ಮದೇ ಸಮಸ್ಯೆಗಳ ಸುಳಿಯಲ್ಲಿ ಬಿದ್ದು ಒದ್ದಾಡುವ ಬದಲು ಒಂದೊಂದಾಗಿ ಅವುಗಳನ್ನು ಪರಿಹರಿಸಿಕೊಳ್ಳಲು ಪ್ರಯತ್ನಿಸಬೇಕು

*ಸಾಧ್ಯವಾದಷ್ಟು ಧೂಮ್ರಪಾನ ಹಾಗೂ ಮಧ್ಯಪಾನವನ್ನು ಕಡಿತಗೊಳಿಸುತ್ತಾ ನಂತರ ನಿಧಾನವಾಗಿ ನಿಲ್ಲಿಸಬೇಕು ಯಾವಾಗಲೋ ಒಮ್ಮೆ ಆದರೆ ಪರವಾಗಿಲ್ಲ.... ಆದರೆ ಆ ಯಾವಾಗಲೋ ಒಮ್ಮೆ ಎನ್ನುವುದು ಪ್ರತಿದಿನ ಆಗಬಾರದು.

*ನಾವು ಈ ಭೂಮಿಯಲ್ಲಿ ನಿಮಿತ್ತ ಮಾತ್ರರು, ನಾವು ಇದ್ದರೂ ಇರದಿದ್ದರೂ ಈ ಭೂಮಿಯಲ್ಲಿ ನಮ್ಮ ನಂತರದ ಕೆಲಸಗಳು ನಡೆದೇ ನಡೆಯುತ್ತವೆ ಎಂಬ ಮನಸ್ಥತ್ವವನ್ನು ಹೊಂದಿದಾಗ ಒತ್ತಡದಿಂದ ಮುಕ್ತರಾಗಿ ತುಸು ನೆಮ್ಮದಿ ಅನುಭವಿಸಲು ಸಾಧ್ಯ. ಒತ್ತಡದಿಂದ ಮುಕ್ತರಾಗಲು ಯೋಗ, ವ್ಯಾಯಾಮ,ನಡಿಗೆಯಂತಹ ಮನೋದೈಹಿಕ ಆರೋಗ್ಯವನ್ನು ನೀಡುವ ಚಟುವಟಿಕೆಗಳನ್ನು ನಮ್ಮದಾಗಿಸಿಕೊಳ್ಳಬೇಕು. ಒತ್ತಡ ಮುಕ್ತರಾದಾಗ ಹಾಗೂ ಉತ್ತಮ ಹವ್ಯಾಸಗಳನ್ನು ರೂಢಿಸಿಕೊಂಡಾಗ ಬಾಯಿ ಚಪಲಕ್ಕೆ ಕಡಿವಾಣ ತಂತಾನೆ ಬೀಳುತ್ತದೆ. ನಿಯಮಿತವಾದ ವ್ಯಾಯಾಮ ದೈಹಿಕ ಆರೋಗ್ಯವನ್ನು ಹೆಚ್ಚಿಸುತ್ತದೆ ಹಾಗೂ ಹೆಚ್ಚುವರಿ ಕೊಬ್ಬನ್ನು ಕರಗಿಸುತ್ತದೆ. ಅಂಗೈ ಹುಣ್ಣಿಗೆ ಕನ್ನಡಿ ಬೇಕಾಗಿಲ್ಲ... ಸಮಯ ಇಲ್ಲ ಎಂಬ ನೆವವನ್ನು ಹೊರತುಪಡಿಸಿ ಪರಿಸ್ಥಿತಿಯ ಗಂಭೀರತೆಯನ್ನು ತಿಳಿಯಾಗಿಸುವ ಪ್ರಯತ್ನವನ್ನು ಮಾಡಲೇಬೇಕು ಎಲ್ಲವನ್ನು ಅದರ ತೀವ್ರತೆಯ ಮಟ್ಟಕ್ಕೆ ಹೋಗುವವರೆಗೆ ಬಿಟ್ಟುಬಿಡುವ ನಮ್ಮ ಮನಸ್ಥಿತಿ ಇಂದು ನಿನ್ನೆಯದಲ್ಲ.ಸಮಸ್ಯೆಯ ಪರಿಹಾರಗಳು ಕೂಡ ಗೊತ್ತಿಲ್ಲದ್ದೇನಲ್ಲ..... ತುಸು ಮಾನಸಿಕ ದೃಢತೆ, ನಿರಂತರತೆ, ಕೊಂಚಮಟ್ಟಿನ ಕಾಠಿಣ್ಯತೆಯನ್ನು ನಮ್ಮದಾಗಿಸಿಕೊಂಡು ತೊಂದರೆಯಿಂದ ಮುಕ್ತರಾಗುವತ್ತ ಚಿತ್ತಹರಿಸಬೇಕಷ್ಟೆ

ಏನಂತೀರಾ ?

# ಜೂ.25 ರವರೆಗೆ ಎಲ್ಲಾ ವಿಧದ ವಾಹನಗಳ ಸಂಚಾರಕ್ಕೆ ಅವಕಾಶ

**ಮಡಿಕೇರಿ:** ಜಿಲ್ಲೆಯಲ್ಲಿ ಈಗಾಗಲೇ ಮುಂಗಾರು ಮಳೆ ಪ್ರಾರಂಭವಾಗಿದ್ದು, ಮಳೆಯ ಪ್ರಮಾಣ ಹೆಚ್ಚಾದಲ್ಲಿ ನೆಲದಲ್ಲಿ ತೇವಾಂಶ ಅಧಿಕವಾಗಿ, ಅಧಿಕ ಭಾರದ ವಾಹನಗಳು ಸಂಚರಿಸಿದಲ್ಲಿ ಭೂ ಕುಸಿತ ಉಂಟಾಗಿ ಅನಾಹುತಗಳಾಗುವ ಸಾಧ್ಯತೆ ಹೆಚ್ಚಿರುವುದರಿಂದ ಜಿಲ್ಲೆಯ ರಸ್ತೆಗಳು, ಸಾರ್ವಜನಿಕ ಆಸ್ತಿ-ಪಾಸ್ತಿ ರಕ್ಷಣೆ ಹಾಗೂ ಪ್ರಯಾಣಿಕರ ಮತ್ತು ಸಾರ್ವಜನಿಕರ ಸುರಕ್ಷತೆಯ ಹಿತದೃಷ್ಟಿಯಿಂದ ಕರ್ನಾಟಕ ಪೊಲೀಸ್ ಕಾಯ್ದೆ 1963ರ ವಿಧಿ 31 ಮತ್ತು



ಇತರೆ ಸಂಬಂಧಿತ ಕಾಯ್ದೆಗಳಡಿ ದತ್ತವಾದ ಅಧಿಕಾರದಂತೆ ಕೊಡಗು ಜಿಲ್ಲೆಯಾದ್ಯಂತ ಜೂನ್, 10 ರಿಂದ ಜುಲೈ, 09 ರವರೆಗೆ ಮರಳು ಮತ್ತು ಮರದ ದಿಮ್ಮಿಗಳ ಸಾಗಾಣಿಕೆ ಹಾಗೂ ಭಾರೀ ವಾಹನಗಳ ಸಂಚಾರ ನಿಷೇಧಿಸಲಾಗಿತ್ತು.

ಪ್ರಸ್ತುತ ಕೋರಿಕೆಯಂತೆ ಹಾಗೂ ಹಾಲಿ ಜಿಲ್ಲೆಯಲ್ಲಿನ ಹವಾಮಾನ ಪರಿಸ್ಥಿತಿಯನ್ನು ಅವಲೋಕಿಸಿ, ಭಾಗಶಃ ಮಾರ್ಪಡಿಸಿ ಎಲ್ಲಾ ವಿಧದ ವಾಹನಗಳ ಸಂಚಾರಕ್ಕೆ ಜೂನ್, 25 ರವರೆಗೆ ಅವಕಾಶ ನೀಡಿದೆ. ಉಳಿದಂತೆ ಯಾವುದೇ ಬದಲಾವಣೆ ಇರುವುದಿಲ್ಲ ಎಂದು ಜಿಲ್ಲಾ ದಂಡಾಧಿಕಾರಿ ಹಾಗೂ ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಅಧ್ಯಕ್ಷರಾದ ಎಸ್. ಜೆ.ಸೋಮಶೇಖರ್ ಅವರು ತಿಳಿಸಿದ್ದಾರೆ.

# ಸಪ್ತಪದಿಯ ಪವಿತ್ರ ಹೆಜ್ಜೆಗಳಿಗೆ ವಿಚ್ಛೇದನದ ನೆರಳು

ವಿಚ್ಛೇದನ ಎನ್ನುವುದು ಕೇವಲ ಕಾನೂನು ಪ್ರಕ್ರಿಯೆಯಲ್ಲ. ಅದು ಭಾವನೆಗಳ ಬೇರ್ಪಡಿಕೆ. ಅನೇಕ ಕನಸುಗಳ ಅಂತ್ಯ. ಅದರ ಪರಿಣಾಮ ದಂಪತಿಗಳಷ್ಟೇ ಅಲ್ಲದೆ, ಕುಟುಂಬದ ಇತರ ಸದಸ್ಯರ ಮೇಲೂ ಬೀಳುತ್ತದೆ. ವಿಶೇಷವಾಗಿ ಮಕ್ಕಳ ಮನಸ್ಸಿನ ಮೇಲೆ ಅದು ದೀರ್ಘಕಾಲದ ಪರಿಣಾಮ ಉಂಟುಮಾಡುವ ಸಾಧ್ಯತೆ ಇದೆ.


ಆದಾಗ್ಯು, ಎಲ್ಲ ವಿಚ್ಛೇದನಗಳನ್ನು ಒಂದೇ ದೃಷ್ಟಿಯಿಂದ ನೋಡುವುದು ಸರಿಯಲ್ಲ. ಕೌಟುಂಬಿಕ ಹಿಂಸೆ, ಮಾನಸಿಕ ಕಿರುಕುಳ, ಅವಮಾನ ಅಥವಾ ಅಸಹನೀಯ ಪರಿಸ್ಥಿತಿಗಳಲ್ಲಿ ವಿಚ್ಛೇದನವು ಕೆಲವೊಮ್ಮೆ ಅನಿವಾರ್ಯ ಹಾಗೂ ನ್ಯಾಯಸಮ್ಮತ ನಿರ್ಧಾರವಾಗಿರಬಹುದು. ಆದರೆ ಸಂಭಾಷಣೆ, ಪರಸ್ಪರ ಗೌರವ ಹಾಗೂ ಸಹನೆಯ ಮೂಲಕ ಪರಿಹರಿಸಬಹುದಾದ ಸಮಸ್ಯೆಗಳು ವಿಚ್ಛೇದನದವರೆಗೆ ತಲುಪುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ.

ಸಂಬಂಧಗಳನ್ನು ಉಳಿಸಿಕೊಳ್ಳಲು ಪ್ರೀತಿಯಷ್ಟೇ ಸಾಕಾಗುವುದಿಲ್ಲ. ಪರಸ್ಪರ ಗೌರವ, ನಂಬಿಕೆ, ತಾಳ್ಮೆ ಹಾಗೂ ಕ್ಷಮಿಸುವ ಗುಣಗಳು ಅಗತ್ಯ. ದಾಂಪತ್ಯ ಜೀವನವು ಗೆಲುವು-ಸೋಲಿನ ಹೋರಾಟವಲ್ಲ; ಅದು ಜೊತೆಯಾಗಿ ಸಾಗುವ ಪಯಣವಾಗಿದೆ. ಅಲ್ಲಿ "ನಾನು" ಎಂಬ ಅಹಂಕಾರಕ್ಕಿಂತ "ನಾವು" ಎಂಬ ಭಾವನೆ ಮುಖ್ಯವಾಗುತ್ತದೆ.

ಇಂದಿನ ಯುವಜನತೆಗೆ ವಿವಾಹದ ಪಾವಿತ್ರ್ಯ ಹಾಗೂ ಅದರ ಜವಾಬ್ದಾರಿಗಳ ಬಗ್ಗೆ ಅರಿವು ಮೂಡಿಸುವುದು ಅಗತ್ಯವಾಗಿದೆ. ಮದುವೆಯ ವೈಭವಕ್ಕಿಂತ ಅದರ ಮೌಲ್ಯಗಳು ಮುಖ್ಯವೆಂಬ ಸಂದೇಶ ಸಮಾಜದಲ್ಲಿ ಬಲವಾಗಿ ಪ್ರತಿಧ್ವನಿಸಬೇಕು. ಕುಟುಂಬ ವ್ಯವಸ್ಥೆಯ ಬಲವು ಕೇವಲ ಆಚರಣೆಗಳಲ್ಲಿ ಅಲ್ಲ; ಪರಸ್ಪರ ನಂಬಿಕೆ ಮತ್ತು ಬದ್ಧತೆಯಲ್ಲಿ ಅಡಗಿದೆ.

ಸಪ್ತಪದಿಯ ಪವಿತ್ರ ಹೆಜ್ಜೆಗಳು ನಮ್ಮ ಸಂಸ್ಕೃತಿಯ ಅಮೂಲ್ಯ ಪರಂಪರೆಯಾಗಿವೆ. ಆ ಹೆಜ್ಜೆಗಳ ಹಿಂದಿರುವ ಅರ್ಥ ಮತ್ತು ಮೌಲ್ಯಗಳನ್ನು ಅರ್ಥಮಾಡಿಕೊಂಡಾಗ ಮಾತ್ರ ದಾಂಪತ್ಯ ಜೀವನದ ಸೌಂದರ್ಯ ಉಳಿಯುತ್ತದೆ. ವಿಚ್ಛೇದನದ ನೆರಳು ಹೆಚ್ಚುತ್ತಿರುವ ಈ ಸಂದರ್ಭದಲ್ಲಿ, ಸಂಬಂಧಗಳನ್ನು ಉಳಿಸುವ ಸಂಸ್ಕೃತಿಯನ್ನು ಬೆಳೆಸುವುದು ಸಮಾಜದ ಅಗತ್ಯವಾಗಿದೆ.

ಸಂಬಂಧಗಳು ಮುರಿಯಲು ಒಂದು ಕ್ಷಣ ಸಾಕು; ಆದರೆ ಅವುಗಳನ್ನು ಕಟ್ಟಲು ವರ್ಷಗಳ ಕಾಲ ಬೇಕಾಗುತ್ತದೆ. ಆದ್ದರಿಂದ ಸಪ್ತಪದಿಯ ಹೆಜ್ಜೆಗಳ ಮಹತ್ವವನ್ನು ನೆನಪಿಸಿಕೊಳ್ಳುತ್ತಾ, ಪರಸ್ಪರ ಅರ್ಥೈಸಿಕೊಳ್ಳುವ ಹಾಗೂ ಗೌರವಿಸುವ ಮನೋಭಾವವನ್ನು ಬೆಳೆಸುವುದು ಇಂದಿನ ಕಾಲದ ಪ್ರಮುಖ ಅಗತ್ಯವಾಗಿದೆ.





| ಶಿವಬಸಪ್ಪ ಗು ಜಂಗಾಲಿ
ಲೇಖಕರು ಹಾಗೂ ಸಾಹಿತಿ

ವಿವಾಹವು ಭಾರತೀಯ ಸಂಸ್ಕೃತಿಯಲ್ಲಿ ಕೇವಲ ಒಂದು ಸಾಮಾಜಿಕ ಒಪ್ಪಂದವಲ್ಲ; ಅದು ಎರಡು ಹೃದಯಗಳ, ಎರಡು ಕುಟುಂಬಗಳ ಹಾಗೂ ಎರಡು ಬದುಕುಗಳ ಪವಿತ್ರ ಸಂಗಮವಾಗಿದೆ. ಅಗ್ನಿಯನ್ನು ಸಾಕ್ಷಿಯಾಗಿಸಿಕೊಂಡು ಇಡುವ ಸಪ್ತಪದಿಯ ಏಳು ಹೆಜ್ಜೆಗಳು ಜೀವನಪರ್ಯಂತದ ಬಾಂಧವ್ಯದ ಸಂಕೇತವಾಗಿವೆ. ಆದರೆ ಇತ್ತೀಚಿನ ವರ್ಷಗಳಲ್ಲಿ ಈ ಪವಿತ್ರ ಬಂಧನದ ಮೇಲೆ ವಿಚ್ಛೇದನದ ನೆರಳು ಹೆಚ್ಚಾಗುತ್ತಿರುವುದು ಸಮಾಜದ ಮುಂದೆ ಹೊಸ ಪ್ರಶ್ನೆಗಳನ್ನು ಹುಟ್ಟುಹಾಕಿದೆ.

ಒಮ್ಮೆ ಕಾಲದಲ್ಲಿ ಮದುವೆಯನ್ನು ಜನ್ಮಜನ್ಮಾಂತರದ ಸಂಬಂಧವೆಂದು ಪರಿಗಣಿಸಲಾಗುತ್ತಿತ್ತು. ಜೀವನದಲ್ಲಿ ಎಷ್ಟೇ ಕಷ್ಟಗಳು ಬಂದರು, ಸುಖ-ದುಃಖಗಳನ್ನು ಹಂಚಿಕೊಂಡು ಸಾಗುವ ಮನೋಭಾವ ದಂಪತಿಗಳಲ್ಲಿತ್ತು. ಆದರೆ ಇಂದಿನ ವೇಗದ ಜೀವನಶೈಲಿ, ಹೆಚ್ಚುತ್ತಿರುವ ವೈಯಕ್ತಿಕತೆ, ಉದ್ಯೋಗದ ಒತ್ತಡ ಹಾಗು ಸಾಮಾಜಿಕ ಮಾಧ್ಯಮಗಳ ಪ್ರಭಾವದಿಂದ ದಾಂಪತ್ಯ ಸಂಬಂಧಗಳ ಸ್ವರೂಪದಲ್ಲಿ ಗಮನಾರ್ಹ ಬದಲಾವಣೆ ಕಂಡುಬರುತ್ತಿದೆ.

ಇಂದು ಅನೇಕ ದಂಪತಿಗಳ ನಡುವೆ ಸಂಭಾಷಣೆಯ ಕೊರತೆ ದೊಡ್ಡ ಸಮಸ್ಯೆಯಾಗಿ ಪರಿಣಮಿಸಿದೆ. ಆಧುನಿಕ ತಂತ್ರಜ್ಞಾನ ಮನುಷ್ಯರನ್ನು ವಿಶ್ವದೊಂದಿಗೆ ಸಂಪರ್ಕಿಸಿದರು, ಮನೆಯೊಳಗಿನ ಹೃದಯಗಳನ್ನು ದೂರ ಮಾಡುವ ಅಪಾಯವನ್ನು ತಂದಿದೆ. ಪರಸ್ಪರ ಅರ್ಥಮಾಡಿಕೊಳ್ಳುವ ಬದಲು ತೀರ್ಪು ನೀಡುವ ಪ್ರವೃತ್ತಿ ಹೆಚ್ಚಾಗುತ್ತಿದೆ. ಪರಿಣಾಮವಾಗಿ ಸಣ್ಣ ಭಿನ್ನಾಭಿಪ್ರಾಯಗಳೇ ದೊಡ್ಡ ಬಿಕ್ಕಟ್ಟುಗಳಾಗಿ ಮಾರ್ಪಡುತ್ತಿವೆ.

ಸಪ್ತಪದಿಯ ಪ್ರತಿಯೊಂದು ಹೆಜ್ಜೆಯು ಒಂದು ಮೌಲ್ಯವನ್ನು ಪ್ರತಿನಿಧಿಸುತ್ತದೆ. ಅನ್ನದ ಭದ್ರತೆ, ಶಕ್ತಿ, ಸಮೃದ್ಧಿ, ಸಂತೋಷ, ಕುಟುಂಬದ ಬೆಳವಣಿಗೆ, ಆರೋಗ್ಯ ಹಾಗೂ ಜೀವಮಾನವಿಡೀ ಸ್ನೇಹ ಮತ್ತು ನಂಬಿಕೆ ಎಂಬ ಮೌಲ್ಯಗಳು ಅದರಲ್ಲಿವೆ. ಆದರೆ ಈ ಮೌಲ್ಯಗಳಿಗಿಂತ ಸ್ವಾರ್ಥ, ಅಹಂಕಾರ ಮತ್ತು ಅಸಹನೆ ಮೇಲುಗೈ ಸಾಧಿಸಿದಾಗ ಸಂಬಂಧಗಳು ದುರ್ಬಲಗೊಳ್ಳುತ್ತವೆ.

# ಸತ್ಯ ಅಥವಾ ಅಸತ್ಯಗಳನ್ನು ಸ್ವೀಕರಿಸುವ ಮನಸ್ಥಿತಿ ಮುಖ್ಯ




| ಪುಷ್ಪ ಪ್ರಸಾದ್

ಬರಹವೆಂಬುವುದು ಭಾವಗಳ ಪ್ರತಿಫಲನಕ್ಕೊಂದು ವೇದಿಕೆ. ನಮ್ಮ ನಿಮ್ಮಗಳ ನಡುವಿನ ವ್ಯವಹಾರಕ್ಕೊಂದು ಸೇತುವೆ. ಸೇತುವೆಯೆಂದರೆ ಒಂದೇ ದಿಕ್ಕಿನ ಸಂಚಾರ ಮಾತ್ರ ಅಲ್ಲ. ನಾನು ನಿನ್ನ ಬರಹವನ್ನು ಓದುತ್ತೇನೆ, ನೀನೂ ಕೂಡ ನನ್ನ ಬರಹವನ್ನು ಓದು ಆಯಿತಾ ಅನ್ನುವ ಕೊಡುಕೊಳ್ಳುವಿಕೆಗಳು, ಅವರು ನಾ ಬರೆದಿದ್ದನ್ನು ಓದುವುದಿಲ್ಲ, ತಮಗೆ ಬೇಕಾದವರ ಬರಹ ಮಾತ್ರ ಓದುತ್ತಾರೆ, ಮೆಚ್ಚುಗೆ ಕೊಡುತ್ತಾರೆ, ವಿಮರ್ಶೆ ಮಾಡುತ್ತಾರೆ.

ಹಾಗಾಗಿ ನಾನು ಏಕೆ ಅವರ ಬರಹ ಓದಬೇಕು? ಚೆನ್ನಾಗಿದ್ರೂ ಯಾಕೆ ಮೆಚ್ಚಬೇಕು? ಬರೆಯಲಿಕೆ ಅವರಿಗೆ ಮಾತ್ರ ಬರುವುದಾ? ಅನ್ನುವ ಭಾವಗಳೆಲ್ಲ ಒಂದಲ್ಲಾ ಒಂದು ಘಳಿಗೆಯಲ್ಲಿ ಯಾರಿಗಾದರೂ ತಟ್ಟಬಹುದಾದ ಭಾವನೆಗಳೇ ಹೌದು. ಆದರೆ ಆ ಭಾವವೇ ನಮ್ಮ ಕಣ್ಣಿಗೊಂದು ಪೊರೆಯಾಗಿ, ಒಂದಿಷ್ಟು ದಿಕ್ಕುಗಳ ಬಿಟ್ಟು ಬೇರೆಲ್ಲಾ ಸುತ್ತುವರೆದ ನಾಕಬಟ್ಟೆಯಾಗಿ, ಅದೇ ದಟ್ಟವಾದ ಗೋಡೆಯಾಗಿ, ಆ ಗೋಡೆಗಳೇ ಉಸಿರುಗಟ್ಟಿಸಿ ನಮ್ಮನ್ನು ಕೂಂದು ಹಾಕುವ ಮೊದಲು ಇವುಗಳಿಂದ ಹೊರಬರಬೇಕಾದ ಅನಿವಾರ್ಯತೆಯಿದೆ. ಜಗತ್ತಿನಲ್ಲೆಷ್ಟು ರಮಣೀಯ ಸೊಬಗಿನ ಸೃಷ್ಟಿಯಿದೆ.

ಅದೆಷ್ಟೋ ಕಾಲದ ಘಟ್ಟಗಳೇ ಪದಗಳಲ್ಲಿ ಸೆರೆಯಾಗಿ ಮಹಾ ಕಾವ್ಯಗಳೆಂದು ರೂಪುಗೊಂಡಿದೆವೆಯೋ ಎಂಬ ಭಾವ ಹೊರಹೊಮ್ಮಿಸುವ ಅದೆಷ್ಟೋ ಸಂಖ್ಯೆಯ



ಕೃತಿಗಳು ರಾರಾಜಿಸುತ್ತಿವೆ. ನಮ್ಮ ಅಲ್ಪತನದ ಬಾವಿಯಿಂದ ಹೊರಬರಬೇಕಾದರೆ ಅವುಗಳಲ್ಲಿ ಎಲ್ಲವನ್ನಲ್ಲದಿದ್ದರೂ ಕೆಲವನ್ನಾದರೂ ಓದುವ ಅನಿವಾರ್ಯತೆ ಇದ್ದೇ ಇರುತ್ತದೆ ಅಲ್ವಾ? ಜೀವನದ ಅತ್ಯಲ್ಪ ಸಮಯದಲ್ಲಿ ನಮ್ಮ ನಿಲುವಿಗೆ ಸಿಲುಕಿದ್ದಷ್ಟೇ ಪರಮಸತ್ಯವೆಂಬ ಭ್ರಮೆಯಲ್ಲಿ ಬದುಕುತ್ತಿರುವ ನಮಗೆ ಅದರಿಂದ ಹೊರಬರಬೇಕಾದರೆ ಹೊರಗೆ ಕೂಡಾ ಒಂದು ಜಗತ್ತಿದೆ. ಅದರಲ್ಲೂ ಸತ್ಯ ಅಥವಾ ಅಸತ್ಯಗಳು ಇರಬಹುದು ಎನ್ನುವಂತಹ ಸ್ವೀಕಾರ ಮಾಡುವ ಮನೋಭಾವ ಇರಬೇಕು. ಈ ತರದ ಮನೋಭಾವಕ್ಕೆ ಇಂಬುಕೊಟ್ಟು, ನಮ್ಮ ಜ್ಞಾನದ ಪರಿವೆಯನ್ನು ವಿಸ್ತರಿಸುವುದೇ ಓದು. ಉದಾಹರಣೆಗೆ ಕುಂಬಾರ ಮಣ್ಣಿನ ಮಡಕೆಯನ್ನು ಮಾಡಲು ದೀರ್ಘ ಸಮಯ ತೆಗೆದು ಕೊಳ್ಳುತ್ತಾನೆ ಆದರೆ ವಾದ ಮಾಡುವ ಒಬ್ಬ ವ್ಯಕ್ತಿ ಅದೇ ಮಡಕೆಯನ್ನು ದೊಣ್ಣೆಯಿಂದು ಹೊಡೆದು ಪುಡಿ ಪುಡಿ ಮಾಡಿಬಿಡುತ್ತಾನೆ ಅಂದುಕೊಳ್ಳಿ. ಮೊದಲ ಬಾರಿಗೆ ಅದನ್ನು ಒಪ್ಪಿಕೊಳ್ಳದೇ ಇರಬಹುದು. ಆದರೆ ಅವನೊಳಗಿನ ವೈಚಾರಿಕ ಪ್ರಜ್ಞೆ, ಹೆಚ್ಚೆಚ್ಚು ಮಾಹಿತಿ ಕಲೆಹಾಕುವ ತುಡಿತ, ಅವನ ಅರಿವಿನ ಪರಿಯನ್ನು ಕ್ರಮೇಣ ವಿಸ್ತರಿಸಬಹುದಲ್ಲವೆ? ಮಣ್ಣಿನ ಮಡಕೆ ಒಂದು ವಿಷಯದ ಬಗ್ಗೆಯೇ ಅವನ ಜ್ಞಾನಭಂಡಾರವನ್ನ ವಿಸ್ತರಿಸಿರಬಹುದು ಅಲ್ಲವೇ, ಒಂದು ಚುಟುಕು ಬರೆದೆ ಅಂತ ಇಟ್ಟುಕೊಳ್ಳಿ, ಅದು ಚೆನ್ನಾಗೇ ಇತ್ತು. ಆದರೆ ಅದನ್ನು ಯಾರು ಓದಲಿಲ್ಲವೆಂಬ ಚಿಂತೆಯಾಕೆ ಮಾಡಬೇಕು, ನಮ್ಮ ನಿಮ್ಮ ಮನದಾಳದಲ್ಲಿ ಕಾಡುತ್ತಿದ್ದ ಭಾವಕ್ಕೊಂದು ಅಭಿವ್ಯಕ್ತಿ ಬೇಕಿತ್ತು ಅಷ್ಟೇ ಹಾಗೂ ಅದಕ್ಕೊಂದು ರೂಪದ ಅವಶ್ಯಕತೆಯಿತ್ತು. ಹಾಗೆಯೇ ಹದವಾದ ಮಣ್ಣಿಗೊಂದು ಆಕಾರ ತಾಳುವ ಆಸೆಯಿತ್ತು.

ನಾವು ಮಾಡಹೊರಟಿದ್ದ ಗಣಪನ ಆಕಾರ ಗಣಪನದೆಯೇ ಹೌದಾ ಎಂದು ನೋಡುವುದಕ್ಕಿಂತ ಹೆಚ್ಚು ಖುಷಿ ಬೇಕೇ? ನಮ್ಮ ಬರಹವನ್ನು ಅಥವಾ ಉದಾಹರಣೆ ಕೊಟ್ಟ ಗಣಪನನ್ನು ಎಲ್ಲಾರು ಮೆಚ್ಚಲೇಬೇಕು ಎಂಬ ದುರಾಸೆಯಿರಬಾರದು. ಯಾರಾದರೂ ಒಬ್ಬರೂ ಮೆಚ್ಚುಗೆ ಕೊಟ್ಟರೆ ಅದೇ ಖುಷಿ, ಇಲ್ಲವೇ ಅದಕ್ಕೂ ಖುಷಿಪಡಬೇಕು. ಕೊಟ್ಟ ಪರ-ವಿರೋಧ ಅಭಿಪ್ರಾಯಗಳೆಲ್ಲವೂ ನಮ್ಮ ಬೆಳವಣಿಗೆಗೇ ಅಂತ ತೆಗೆದುಕೊಂಡು ಸುಮ್ಮನಾಗಿಬಿಡಬೇಕು. ಅದೆಷ್ಟೋ ಸಲ ಬರೆದ ಒಳ್ಳೆಯ ಸಾಹಿತ್ಯ ಕಣ್ಣಿಗೆ ಕಾಣದೇ, ಓದದೇ ಹಾಗೆಯೇ ಮರೆಯಾಗಿ ಹೋಗಿಬಿಡುತ್ತದೆ ಅಂತ ಅನಿಸಿದಾಗ ಮನಸೊಮ್ಮೆ ಚುರುಕನ್ನಿಸದೆ ಇರುವುದಿಲ್ಲ.

ಖಂಡಿತ, ಈ ಮಾತು ನೂರಕ್ಕೆ ನೂರರಷ್ಟು ನಿಜ! ಬರವಣಿಗೆಯು ಕೇವಲ ಪದಗಳ ಜೋಡಣೆಯಲ್ಲ, ಬದಲಿಗೆ ನಮ್ಮ ಆಲೋಚನೆಗಳು, ಅನುಭವಗಳು ಮತ್ತು ಭಾವನೆಗಳಿಗೆ ಜೀವ ತುಂಬುವ ಒಂದು ಅದ್ಭುತ ಮಾಧ್ಯಮ. ಇದನ್ನು ಮತ್ತೊಬ್ಬರು ಓದಿದರೆ ಅದಕ್ಕಿಂತ ಸಂತೋಷ ಬೇರೊಂದು ಇಲ್ಲ. ಹೌದು, ಬೇರೆಯವರು ನಮಗಾಗಿ ಕೆಲಸ ಮಾಡಿದಾಗ ಅಥವಾ ನಮಗೆ ಸಹಾಯ ಮಾಡಿದಾಗ ಅಥವಾ ಪರಸ್ಪರ ಒಬ್ಬರ ಬರಹವನ್ನು ಮತ್ತೊಬ್ಬರು ಓದಿದಾಗ ಆಗುವ ಖುಷಿಯೇ ಬೇರೆ.

# ಬೆಂಕಿಯಲ್ಲಿ ಅರಳಿದ ಚಿನ್ನ: ಭಾರತದ ರಾಷ್ಟ್ರಪತಿ



| ಡಾ.ಸುಧಾಕರ.ಜಿ.ಲಕ್ಕವಳ್ಳಿ

ಸ್ಫೂರ್ತಿ ಸುಧೆ - 45

ಒಡಿಶಾದ ಮಯೂರ್ ಭಂಜ್‌ನ ಹಿಂದುಳಿದ ಬುಡಕಟ್ಟು ಹಳ್ಳಿಯಲ್ಲಿ ಜನಿಸಿದ ದ್ರೌಪದಿ ಮುರ್ಮು ರವರು ಬಡತನದ ಕತ್ತಲಿನ ನಡುವೆಯೂ ಜ್ಞಾನದ ಬೆಳಕನ್ನು ಅರಸಿದರು. ತಮ್ಮ ಊರಿನಲ್ಲಿ ಪದವಿ ಪಡೆದ ಮೊದಲ ಮಹಿಳೆಯರಾಗಿ ಮೂಡಿಬಂದ ಅವರು ಶಿಕ್ಷಕಿಯಾಗಿ ಮಕ್ಕಳಿಗೆ ಅಕ್ಷರದ ಅಮೃತವನ್ನು ಉಣಿಸಿದರು.ನಂತರ ಜನಸೇವೆಯ ಕರೆಗೆ ಓಗೊಟ್ಟು ರಾಜಕೀಯ ಕ್ಷೇತ್ರವನ್ನು ಪ್ರವೇಶಿಸಿದರು. ಅವರ ಬದುಕು ಕಲ್ಲುಮುಳ್ಳಿನ ಹಾದಿಯಾದರೂ ಛಲದ ಹೆಜ್ಜೆಗಳು ನಿಲ್ಲಲಿಲ್ಲ.

ವಿಧಿಯು ಅವರವರನ್ನು ಕಠಿಣ ಪರೀಕ್ಷೆಗೆ ಒಡ್ಡಿತು.ಕೆಲವೇ ವರ್ಷಗಳಲ್ಲಿ ಇಬ್ಬರು ಮಕ್ಕಳನ್ನು, ಪತಿಯನ್ನು,ತಾಯಿಯನ್ನು ಮತ್ತು ಸಹೋದರನನ್ನು ಕಳೆದುಕೊಂಡರು. ನೋವಿನ ಸಾಗರದಲ್ಲಿ ಮುಳುಗುವ



ಬದಲು ಆಧ್ಯಾತ್ಮದ ಆಸರೆಯನ್ನು ಪಡೆದು ಮೇಲೆದ್ದರು.ದುಃಖವನ್ನೇ ಶಕ್ತಿಯನ್ನಾಗಿ ಪರಿವರ್ತಿಸಿಕೊಂಡು ಸಮಾಜ ಸೇವೆಗೆ ತಮ್ಮನ್ನು ಸಮರ್ಪಿಸಿಕೊಂಡರು. ಅವರ ಸ್ಥಿತಪ್ರಜ್ಞೆ ಹಿಮಾಲಯದಂತೆ ಅಚಲವಾಗಿ ನಿಂತಿತು.

ರಾಯರಂಗ್‌ಪುರದ ಪುರಸಭೆ ಸದಸ್ಯೆಯಾಗಿ ಆರಂಭವಾದ ಪಯಣವು ಶಾಸಕಿಯಾಗಿ, ಒಡಿಶಾದ ಸಚಿವೆಯಾಗಿ, ಜಾರ್ಖಂಡ್‌ನ ಮೊದಲ ಮಹಿಳಾ ರಾಜ್ಯಪಾಲೆಯಾಗಿ ಮುಂದುವರಿಯಿತು.ಪ್ರತಿ ಹುದ್ದೆಯಲ್ಲೂ ಸರಳತೆ ಮತ್ತು ಪ್ರಾಮಾಣಿಕತೆಯನ್ನೇ ತಮ್ಮ ಆಭರಣವಾಗಿಸಿಕೊಂಡರು. 2022ರಲ್ಲಿ ಭಾರತದ 15ನೇ ರಾಷ್ಟ್ರಪತಿಯಾಗಿ ಆಯ್ಕೆಯಾದರು. ಬುಡಕಟ್ಟು ಸಮುದಾಯದಿಂದ ರಾಷ್ಟ್ರಪತಿ ಭವನದ ಮೆಟ್ಟಿಲೇರಿದ ಮೊದಲ ಮಹಿಳೆಯರೆಂಬ ಇತಿಹಾಸವನ್ನು ರಚಿಸಿದರು.

ಬೆಂಕಿಯಲ್ಲಿ ಬೆಂದು ಚಿನ್ನವಾದ ಅವರವರ ಬದುಕು ಕೋಟ್ಯಂತರ ಜನರಿಗೆ ಸ್ಫೂರ್ತಿಯ ಸೆಲೆಯಾಗಿದೆ. ವಿಧಿ ಎಷ್ಟೇ ಅಪ್ಪಳಿಸಿದರೂ ಧೈರ್ಯದ ದೀಪವನ್ನು ಆರಲು ಬಿಡದಿದ್ದರೆ ಶಿಖರ ನಮ್ಮದೇ ಎಂಬುದಕ್ಕೆ ಮುರ್ಮು ಅವರೇ ಜೀವಂತ ನಿದರ್ಶನ.ಹೋರಾಟವೇ ಉಸಿರಾದ ಅವರವರ ಕಥೆ ನಾಳಿನ ಭಾರತಕ್ಕೆ ದಾರಿದೀಪವಾಗಲಿ.

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,